ಸಂಪುಟ: ೦೭/ ಸಂಚಿಕೆ: ೧೨೩/ಶನಿವಾರ ದಿನಾಂಕ : ೨೮-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 123/ SATURDAY Date : 28-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಜೂನ್ 30ಕ್ಕೆ ವಾಕರಸಾ ಸಂಸ್ಥೆಯ ಕುಂದು ಕೊರತೆ, ಪರಿಶೀಲನಾ ಸಭೆ



ಬೆಳಗಾವಿ: ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಅಧ್ಯಕ್ಷತೆಯಲ್ಲಿ ಜೂನ್ 30ರಂದು ಬೆಳಗ್ಗೆ 11 ಗಂಟೆಗೆ ಹುಬ್ಬಳ್ಳಿ ವಿದ್ಯುತ ಸರಬರಾಜು ಕಂಪನಿ ನಿಗಮ. ವಲಯ ಕಚೇರಿ ಸಭಾಂಗಣದಲ್ಲಿ ವಾಕರಸಾ ಸಂಸ್ಥೆಯ ಘಟಕ & ವಿಭಾಗಗಳ ಕುಂದು ಕೊರತೆ, ಪರಿಶೀಲನಾ ಸಭೆ ನಡೆಯಲಿದೆ.

ವಾಕರಸಾ ಸಂಸ್ಥೆಯ ಬೆಳಗಾವಿ ಬೆಳಗಾವಿ/ ಚಿಕ್ಕೋಡಿ ವಿಭಾಗದ ಎಲ್ಲಾ ಘಟಕ ವ್ಯವಸ್ಥಾಪರು, ವಿಭಾಗೀಯ ಸಾರಿಗೆ ಅಧಿಕಾರಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ವಿಭಾಗೀಯ ನಿಯಂತ್ರಣಾಧಿಕಾರಿ ಹಾಗೂ ಧಾರವಾಡ ವಿಭಾಗದ ಸವದತ್ತಿ & ರಾಮದುರ್ಗ ಘಟಕ ವ್ಯವಸ್ಥಾಪಕರು ಹಾಗೂ ವಿಭಾಗೀಯ ಸಂಚಾರ ಅಧಿಕಾರಿ, ವಿಭಾಗೀಯ ನಿಯಂತ್ರಣಾಧಿಕಾರಿ ಅವರೊಂದಿಗೆ ಕುಂದು ಕೊರತೆ, ಪರಿಶೀಲನಾ ಸಭೆ ನಡೆಯಲಿದ್ದು, ಸದರಿ ಸಭೆಗೆ ಹಾಜರಾಗುವಂತೆ ವಾಕರಸಾ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

## ಪೌರಾಯುಕ್ತರಾಗಿ ಜಾಧವ ನೇಮಕ



ರಬಕವಿ-ಬನಹಟ್ಟಿ,ಜೂ26: ಸ್ಥಳೀಯ ನಗರಸಭೆಯ ನೂತನ ಪೌರಾಯುಕ್ತರಾಗಿ ರಮೇಶ ಜಾಧವ ಗುರುವಾರ ಅಧಿಕಾರ ಸ್ವೀಕರಿಸಿದರು.

## ರಾಜ್ಯದಲ್ಲಿ ವಿದ್ಯುತ್ ಸಂಬಂಧಿತ ಅವಘಡ ತಗ್ಗಿಸಲು ವಿಶೇಷ ಮಾರ್ಗಸೂಚಿ

ಬೆಂಗಳೂರು: ಪ್ರತಿವರ್ಷ ಅದರಲ್ಲೂ ಮಳೆಗಾಲದಲ್ಲಿ ವಿದ್ಯುತ್ ಅವಘಡಗಳು ಸಾಮಾನ್ಯ. ಇದಕ್ಕೆ ಮುಖ್ಯ ಕಾರಣಗಳೇನು ಎಂದು ನೋಡಿದರೆ ಅಸಮರ್ಪಕ ಕಡಿಮೆ ವೋಲ್ಟೇಜ್ ಅಳವಡಿಕೆಗಳು, ಬಹುಮಹಡಿ ಸರ್ಕಾರಿ ಕಟ್ಟಡಗಳಲ್ಲಿ ಕಳಪೆ ಗುಣಮಟ್ಟದ ವಿದ್ಯುತ್ ವ್ಯವಸ್ಥೆಗಳು ಮತ್ತು ಅಕ್ರಮವಾಗಿ ವಿದ್ಯುತ್ ಪಡೆಯುವುದು ಎಂದು ಕರ್ನಾಟಕದ ಮುಖ್ಯ ವಿದ್ಯುತ್ ನಿರೀಕ್ಷಕ ಟಿ.ಎನ್. ಅಪ್ಪಚು ಹೇಳುತ್ತಾರೆ.

ಆದರೆ ಇತ್ತೀಚಿನ ದಿನಗಳಲ್ಲಿ ದೊಡ್ಡ ಸಮಸ್ಯೆಯುಂಟಾಗುವುದು ಹಸಿರು ಇಂಧನ ಮೂಲಗಳಿಂದ ಹೊಸ ಯುಗದ ವಿದ್ಯುತ್ ಉತ್ಪಾದನೆ ಮತ್ತು ಬ್ಯಾಟರಿಗಳಲ್ಲಿ ಸಂಗ್ರಹಣೆ.

ರಾಜ್ಯ ಇಂಧನ ಇಲಾಖೆ ಆಯೋಜಿಸಿದ್ದ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಕಾರ್ಯಕ್ರಮದ ಉದ್ಘಾಟನೆಯ ಸಂದರ್ಭದಲ್ಲಿ ಮಾತನಾಡಿದ ಅಪ್ಪಚ್ಚು?, ವಿದ್ಯುತ್ ನ ಅಸಮರ್ಪಕ ಬಳಕೆಯಿಂದ ಹೆಚ್ಚುತ್ತಿರುವ ಅಪಘಾತಗಳ ಕುರಿತು ಜಾಗೃತಿ ಮೂಡಿಸಲು ಜೂನ್ ಕೊನೆಯ ವಾರದಿಂದ ಜುಲೈ ಮೊದಲ ವಾರದವರೆಗೆ ಈ ಕಾರ್ಯಕ್ರಮವನ್ನು ನಡೆಸಲಾಗುತ್ತದೆ.

ಈ ವರ್ಷದ ಧ್ಯೇಯವಾಕ್ಯ 'ಸ್ಮಾರ್ಟ್ ಎನರ್ಜಿ, ಸೇಫ್ ನೇಶನ್'. ಹೊಸ ಯುಗದ ವಿದ್ಯುತ್ ಉತ್ಪಾದನಾ ಪರಿಕಲ್ಪನೆಗಳನ್ನು ಉಲ್ಲೇಖಿಸಿ, ಕೇಂದ್ರವು ಸುರಕ್ಷತಾ ಕ್ರಮಗಳ ಬಗ್ಗೆಯೂ ಕಾರ್ಯನಿರ್ವಹಿಸುತ್ತಿದೆ, ವಿಶೇಷ ಮಾರ್ಗಸೂಚಿಗಳನ್ನು ಶೀಘ್ರದಲ್ಲೇ ರಚಿಸಲಾಗುವುದು ಎಂದು ಹೇಳಿದರು.

ಮತ್ತೊಂದು ಕಳವಳವೆಂದರೆ, ರೈತರು ಸುರಕ್ಷತಾ ಮಾನದಂಡಗಳನ್ನು ನಿರ್ಲಕ್ಷಿಸಿ ಐಪಿ ಸೆಟ್‌ಗಳನ್ನು ಅಳವಡಿಸಿದ ಗ್ರಾಮೀಣ ಪ್ರದೇಶಗಳಲ್ಲಿ ಅಪಘಾತಗಳು ಹೆಚ್ಚುತ್ತಿವೆ. ರೈತರು ಆಕಸ್ಮಿಕವಾಗಿ ಲೈವ್ ತಂತಿಗಳ ಸಂಪರ್ಕಕ್ಕೆ ಬರುತ್ತಾರೆ, ಇದು ದುರಂತಗಳಿಗೆ ಕಾರಣವಾಗುತ್ತದೆ. ಈ ಬಗ್ಗೆ ಜಾಗೃತಿ ಮೂಡಿಸಲು ಎಲ್ಲಾ ಎಸ್ಕಾಂಗಳು ಮತ್ತು ಜಿಲ್ಲಾ ಪಂಚಾಯತ್‌ಗಳಿಗೆ ನಿರ್ದೇಶನಗಳನ್ನು ನೀಡಲಾಗಿದೆ ಎಂದು ಅವರು ಹೇಳಿದರು.

## ಪ್ರಚೋದನೆ- ದ್ವೇಷ ಭಾಷಣಗಳ ವಿರುದ್ಧ ಕಡ್ಡಾಯವಾಗಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ: ಮುಖ್ಯಮಂತ್ರಿ



ಬೆಂಗಳೂರು : ಪ್ರಚೋದನೆ, ದ್ವೇಷ ಭಾಷಣ ಮಾಡುವವರ ವಿರುದ್ಧ ಕಡ್ಡಾಯವಾಗಿ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿ, ದೂರು ಬಂದ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನ ನೀಡಿದ್ದಾರೆ.

ಶುಕ್ರವಾರ ನಗರದ ನೃಪತುಂಗ ರಸ್ತೆಯಲ್ಲಿನ ರಾಜ್ಯ ಪೊಲೀಸ್ ಮಹಾ ನಿರ್ದೇಶಕರ ಕಚೇರಿಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರ ಉಪಸ್ಥಿತಿಯಲ್ಲಿ ರಾಜ್ಯದ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ಮತ್ತು ಪೊಲೀಸ್ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ದ್ವೇಷ ಭಾಷಣ ಮಾಡುವವರ ವಿರುದ್ಧ, ಜನರ-ರಾಜ್ಯದ ನೆಮ್ಮದಿ ಕೆಡಿಸುವವರ ವಿರುದ್ಧ ಸ್ವಯಂಪ್ರೇರಿತ ಕ್ರಮ ಏಕೆ ತೆಗೆದುಕೊಳ್ಳುತ್ತಿಲ್ಲ, ನೀವು ಕ್ರಮ ತೆಗೆದುಕೊಳ್ಳದಿದ್ದರೆ ನಿಮ್ಮ ವಿರುದ್ಧ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಪೊಲೀಸ್ ಅಧಿಕಾರಿಗಳಿಗೆ ಸಿದ್ದರಾಮಯ್ಯ ಖಾರವಾಗಿ ಎಚ್ಚರಿಸಿದರು.

ನಾವು ವ್ಯವಸ್ಥೆಯನ್ನು ದೂಷಿಸಿಕೊಂಡು ಕೈ ಕಟ್ಟಿಕೊಂಡು ಕೂರುವುದಲ್ಲ. ಪೊಲೀಸ್ ಠಾಣೆಗಳು ಜನಸ್ನೇಹಿ ಆಗುವ ಜೊತೆಗೆ ಅಪರಾಧ ಮನಸ್ಥಿತಿಯವರಿಗೆ ಕಾನೂನಿನ ಬಗ್ಗೆ ಭಯ ಇರುವ ವಾತಾವರಣ ಸೃಷ್ಟಿಸಬೇಕು ಎಂದು ಸಿದ್ದರಾಮಯ್ಯ ಕರೆ ನೀಡಿದರು.

ರಾಜ್ಯದಲ್ಲಿ ಅಪರಾಧಗಳ ಪ್ರಮಾಣ ಕಡಿಮೆ ಆಗಿರುವುದು ಸಮಾಧಾನದ ಸಂಗತಿಯಾದರೂ ಪೊಲೀಸರ ತನಿಖೆಯ ಗುಣಮಟ್ಟ ಕಡಿಮೆಯಾಗಿದ್ದು ಇದನ್ನು ಹೆಚ್ಚಿಸಬೇಕಿದೆ ಎಂದು ಸಿದ್ದರಾಮಯ್ಯ ಸೂಚಿಸಿದರು.

ಡ್ರಗ್ಸ್ ಮುಕ್ತ ರಾಜ್ಯ ಮಾಡಲು ಅಗತ್ಯ ಎಲ್ಲ ಕ್ರಮ ಕೈಗೊಳ್ಳಬೇಕು. ಡ್ರಗ್ ಮಾರುವವರ ಅಂಗಡಿ, ವ್ಯಾಪಾರದ ಪರವಾನಗಿ ರದ್ದುಗೊಳಿಸುವ ಅಗತ್ಯ ಬಿದ್ದರೆ ಮಾಡಿ. ಅಪರಾಧ ಪ್ರಕರಣಗಳಲ್ಲಿ ಆರೋಪ ಪಟ್ಟಿಯನ್ನು ಸೂಕ್ತವಾಗಿ, ಪರಿಣಾಮಕಾರಿಯಗಿ, ಸರಿಯಾದ ಸಮಯಕ್ಕೆ ಸಲ್ಲಿಸದಿರುವುದೂ ದೊಡ್ಡ ವೈಫಲ್ಯ. ಇಂಥದ್ದನ್ನು ಸಹಿಸಲು ಸಾಧ್ಯವಿಲ್ಲ ಎಂದು ಸಿದ್ದರಾಮಯ್ಯ ತಿಳಿಸಿದರು.

ಪೊಲೀಸ್ ಇಲಾಖೆಯ ಬೇಡಿಕೆಗಳಲ್ಲಿ ಬಹುತೇಕ ಈಡೇರಿಸಿ ಸಾಕಷ್ಟು ಹಣ, ಅನುದಾನ ಒದಗಿಸಿದ್ದೇನೆ. ನಿಮ್ಮಿಂದ ಸಮಾಜದ ನೆಮ್ಮದಿ, ಕಾನೂನು-ಸುವ್ಯವಸ್ಥೆಯನ್ನು ನಿರೀಕ್ಷಿಸುತ್ತೇನೆ. ಶಕ್ತರಿಗೂ, ಅಶಕ್ತರಿಗೂ ನ್ಯಾಯ ಒದಗಿಸುವುದು ಪೊಲೀಸರ ಜವಾಬ್ದಾರಿ. ಕಾನೂನು ಎಲ್ಲರಿಗೂ ಒಂದೇ. ಯಾವುದೇ ಪ್ರಕರಣದ ತನಿಖೆಯಲ್ಲಿಯೂ ನಾನು ತಲೆ ಹಾಕುವುದಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ರೈತರು, ಮಹಿಳೆಯರು, ಮಕ್ಕಳು ಮತ್ತು ಹಿರಿಯ ನಾಗರಿಕರ ವಿರುದ್ಧ ದೌರ್ಜನ್ಯಗಳು ನಡೆಯದಂತೆ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಬೇಕು. ಬಾಲ್ಯವಿವಾಹ, ಪೋಕ್ಸೋ, ಅತ್ಯಾಚಾರ, ಭ್ರೂಣಹತ್ಯೆಗಳನ್ನು ನೂರಕ್ಕೆ ನೂರು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾಡಳಿತ ಜೊತೆ ಸೇರಿ ಕ್ರಮ ಕೈಗೊಳ್ಳಬೇಕು ಎಂದು ಸಿದ್ದರಾಮಯ್ಯ ಸೂಚಿಸಿದರು.

ಪೊಲೀಸ್ ಇಲಾಖೆಯಲ್ಲಿ ಹಲವು ವರ್ಷಗಳಿಂದ ಖಾಲಿ ಇರುವ ಶೇ.15.64ರಷ್ಟು ಹುದ್ದೆಗಳನ್ನು, ಒಳ ಮೀಸಲಾತಿ ಬಳಿಕ ಹಂತ ಹಂತವಾಗಿ ಭರ್ತಿ ಮಾಡಲಾಗುವುದು. ಇದಕ್ಕೆ ತಕ್ಕ ಸಿದ್ಧತೆ ಮಾಡಿಕೊಳ್ಳಲು ಸೂಚಿಸಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಹಿಂದಿನ 2 ವರ್ಷದಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ, ಕೊಲೆ-ದರೋಡೆ-ಮನೆ ಗಳ್ಳತನ ಸೇರಿ ಇತರೆ ಅಪರಾಧಗಳು ಕಡಿಮೆ ಆಗಿರುವುದನ್ನು ಇಲಾಖೆ ಕೊಟ್ಟಿರುವ ಅಂಕಿ ಅಂಶಗಳಿಂದ ಗೊತ್ತಾಗಿದೆ. ಆದರೆ, ಸಂಭವಿಸಿದ ಪ್ರಕರಣಗಳಲ್ಲಿ ಆರೋಪ ಪಟ್ಟಿಯನ್ನು ಸೂಕ್ತ ಸಮಯಕ್ಕೆ ಸಲ್ಲಿಸುವ ಜೊತೆಗೆ ಎಫ್‌ಐಆರ್ ಅನ್ನು ತಕ್ಷಣ ದಾಖಲಿಸಬೇಕು, ತನಿಖೆಯ ಗುಣಮಟ್ಟ ಹೆಚ್ಚಿಸಿ ಅಪರಾಧಿಗಳನ್ನು ಕ್ಷಿಪ್ರವಾಗಿ ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಿದ್ದರಾಮಯ್ಯ ತಿಳಿಸಿದರು.

ಹಿರಿಯ ಅಧಿಕಾರಿಗಳು ಪೊಲೀಸ್ ಠಾಣೆಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕಚೇರಿಗಳಲ್ಲೇ ಕುಳಿತಿರಬಾರದು. ಸಮಾಜದ ನೆಮ್ಮದಿ ಕಾಪಾಡಲು ಪೊಲೀಸ್ ಕಾರ್ಯಕ್ಷಮತೆ ಬಹಳ ಮುಖ್ಯ. ಇದು ಪ್ರಜಾರಾಜ್ಯ. ಅವರ ಕಷ್ಟ-ಸುಖ ಕೇಳುವುದು ಪೊಲೀಸ್ ಇಲಾಖೆಯ ಜವಾಬ್ದಾರಿ ಎಂದು ಸಿದ್ದರಾಮಯ್ಯ ತಿಳಿಸಿದರು.

ಸಭೆಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಗೃಹ ಇಲಾಖೆ ಎಸಿಎಸ್ ಗೌರವ್ ಗುಪ್ತ, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಉಪಸ್ಥಿತರಿದ್ದರು.

ಮಂಗಳೂರು ಮಾತ್ರ ಹದಗೆಟ್ಟಿದ್ದೇಕೆ?: ಕೋಮು ಘರ್ಷಣೆ ಮತ್ತು ಕೊಲೆಗಳು ದಕ್ಷಿಣ ಕನ್ನಡ ಜಿಲ್ಲೆಯಲ್ಲೇ ಹೆಚ್ಚಾಗಿವೆ. ಇತರೆ ಜಿಲ್ಲೆಗಳಲ್ಲಿ ಯಾಕೆ ಆಗುತ್ತಿಲ್ಲ ಎಂದು ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ, ದಕ್ಷಿಣ ಕನ್ನಡ ಜಿಲ್ಲೆಯ ನೆಮ್ಮದಿ ಕೆಡಿಸುವವರನ್ನು ಮೂಲದಿಂದಲೇ ಪತ್ತೆ ಹಚ್ಚಿ ಯಾರೇ ಇದ್ದರೂ ಕಠಿಣ ಕಾನೂನು ಕ್ರಮ ಕೈಗೊಳ್ಳಿ ಎಂದು ಸಿದ್ದರಾಮಯ್ಯ ಸ್ಪಷ್ಟ ಸೂಚನೆ ನೀಡಿದರು.

ಕಾಲ್ತುಳಿತ ಪ್ರಕರಣದಲ್ಲಿ ಅಧಿಕಾರಿಗಳಿಂದ ತಪ್ಪಾಗಿದ್ದು ನಿಜ ತಾನೇ?: 'ನಾನು 1983ರಿಂದ ಶಾಸಕನಾಗಿ, ಸಿಎಂ ಕೂಡ ಆಗಿದ್ದೇನೆ. ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ಪ್ರಕರಣವನ್ನು ಹಿಂದೆಂದೂ ನೋಡಿರಲಿಲ್ಲ. ಗುಪ್ತಚರ ಇಲಾಖೆ ಸರಿಯಾದ ಮಾಹಿತಿ ನೀಡದೆ 11 ಮಂದಿ ಮೃತಪಟ್ಟರು. ಕಾಲ್ತುಳಿತ ಘಟನೆ ನಡೆದ ದಿನ ಮಧ್ಯಾಹ್ನ 3:50ಕ್ಕೇ ಸಾವುಗಳು ಸಂಭವಿಸಿದ್ದವು. ಆದರೂ, ಸರಿಯಾದ ಮಾಹಿತಿ ಕೊಟ್ಟಿರಲಿಲ್ಲ. ಇದು ತಪ್ಪಲ್ಲವೇ? 5:45ಕ್ಕೆ ನಾನಾಗೇ ಕೇಳಿದಾಗಲೂ ಒಂದೇ ಸಾವಾಗಿದೆ ಎನ್ನುವ ಮಾಹಿತಿ ನೀಡಿದರು. ಅಷ್ಟೊತ್ತಿಗಾಗಲೇ 11 ಸಾವು ಆಗಿಬಿಟ್ಟಿತ್ತು. ಹಿರಿಯ ಅಧಿಕಾರಿ ಸರಿಯಾದ ಮಾಹಿತಿಯನ್ನು ತಕ್ಷಣ ನಮಗೆ ನೀಡಿದ್ದರೆ ಕ್ರೀಡಾಂಗಣದ ಕಾರ್ಯಕ್ರಮ ರದ್ದುಗೊಳಿಸಬಹುದಿತ್ತು. ಈ ಪ್ರಕರಣದಲ್ಲಿ ಹಿರಿಯ ಅಧಿಕಾರಿಗಳ ಅಮಾನತು ಮಾಡಬೇಕಾಗಿ ಬಂದಿದ್ದಕ್ಕೆ ನನಗೂ ಬೇಸರವಿದೆ. ಆದರೆ ತಪ್ಪಾಗಿದ್ದು ನಿಜ ತಾನೇ ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

## ಸಾರ್ವಜನಿಕರ ಸುರಕ್ಷತೆಗಾಗಿ ಮನೆ-ಮನೆಗೆ ಬರಲಿದ್ದಾರೆ ಪೊಲೀಸರು

ಬೆಂಗಳೂರು, ಸಾರ್ವಜನಿಕರ ಸುರಕ್ಷಿತವಾಗಿ ಮನೆ -ಮನೆಗೆ ಪೊಲೀಸ್ ಎಂಬ ವಿನೂತನ ಉಪಕ್ರಮವನ್ನು ಪೊಲೀಸ್ ಇಲಾಖೆ ಇಂದಿನಿಂದ ಜಾರಿಗೆ ತಂದಿದೆ. ಈ ಉಪಕ್ರಮವು ಸಮಾಜದಲ್ಲಿ ಅಪರಾಧ ತಡೆಗೆ ಸಹಕಾರಿಯಾಗುವುದಲ್ಲದೇ ಶಾಂತಿ ಮತ್ತು ಭದ್ರತೆಯ ಸ್ಥಿರತೆಯನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

ಸರ್ವರನ್ನು ಸಮಾನವಾಗಿ ಒಳಗೊಂಡು ಸಾರ್ವಜನಿಕರು ಈ ಕಾರ್ಯದಲ್ಲಿ ನೇರವಾಗಿ ಪಾಲ್ಗೊಳ್ಳುವಿಕೆಯನ್ನು ಖಾತರಿ ಪಡಿಸಿ, ಸಾಮಾಜಿಕ ಪಿಡುಗುಗಳ ವಿರುದ್ಧ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಲ್ಲಿ ಈ ವ್ಯವಸ್ಥೆಯು ಒಂದು ಆಶಾಕಿರಣವಾಗಿದೆ.

ಈ ಉಪಕ್ರಮದ ಮೂಲಕ ಪೊಲೀಸರ ಬಗ್ಗೆ ಇರುವ ಭಯದ ಭಾವದ ಬದಲು ವಿಶ್ವಾಸದ ಚಿಹ್ನೆಯಾಗಿ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗುತ್ತದೆ. ಇಂದು ನಡೆದ ಹಿರಿಯ ಪೊಲೀಸ್ ಅಃಕಾರಿಗಳ ವಾರ್ಷಿಕ ಸಮಾವೇಶದಲ್ಲಿ ಸಾರ್ವಜನಿಕರ ಸುರಕ್ಷತೆಗಾಗಿ ಪೊಲೀಸ್ ಇಲಾಖೆಯು ಜಾರಿಗೆ ತಂದಿರುವ ಮನೆ-ಮನೆಗೆ ಪೊಲೀಸ್ ಉಪಕ್ರಮದ ಕಿರುಹೊತ್ತಿಗೆಯನ್ನು ಬಿಡುಗಡೆ ಮಾಡಲಾಯಿತು.

ಆಧುನಿಕ ಯುಗದಲ್ಲಿ ಪೊಲೀಸರ ಪಾತ್ರವು ಬಹುಮುಖ್ಯವಾಗಿದೆ. ಕೇವಲ ಕಾನೂನು ಮತ್ತು ಸುವ್ಯವಸ್ಥೆ ಕಾಯ್ದುಕೊಳ್ಳುವವರಾಗಿ ಮಾತ್ರವಲ್ಲದೇ, ಸಮಾಜದ ಶಾಂತಿ ಮತ್ತು ಭದ್ರತೆಯ ರೂವಾರಿಗಳಾಗಿದ್ದಾರೆ.

ಅಪರಾಧಗಳ ತಡೆ, ಅಪರಾಧ ಪ್ರಕರಣಗಳ ತನಿಖೆ, ಸಾರ್ವಜನಿಕ ಸಮಾರಂಭಗಳಲ್ಲಿ ಭದ್ರತೆ ಏರ್ಪಡಿಸುವುದು, ಪ್ರವಾಹ, ಭೂಕಂಪ, ಮಹಾಮಾರಿ ಮುಂತಾದ ವಿಪತ್ತು ಸಂದರ್ಭಗಳಲ್ಲಿ ರಕ್ಷಣಾತ್ಮಕ ಕಾರ್ಯಗಳಲ್ಲಿ ತೊಡಗುವುದು ಪೊಲೀಸ್ ಇಲಾಖೆಯ ಪ್ರಮುಖ ಕರ್ತವ್ಯಗಳಾಗಿವೆ. ಕ್ಲಿಷ್ಟ ಪರಿಸ್ಥಿತಿಗಳಲ್ಲಿ ಶಾಂತಿಯುತವಾಗಿ ನಿಭಾಯಿಸುವ ಮೂಲಕ ಪೊಲೀಸರು ಸಾರ್ವಜನಿಕರಲ್ಲಿ ಭದ್ರತೆ ಮತ್ತು ವಿಶ್ವಾಸವನ್ನು ಉಂಟುಮಾಡುವುದು ಇಲಾಖೆಯ ಆದ್ಯತೆಯಾಗಿದೆ.

ಸಾರ್ವಜನಿಕರಲ್ಲಿ ಕಾನೂನುಗಳ ಬಗ್ಗೆ ತಿಳುವಳಿಕೆ ಬೆಳೆಸುವುದು ಮತ್ತು ಪೌರ ಸಹಭಾಗಿತ್ವದ ಕಾರ್ಯಕ್ರಮಗಳನ್ನು ರೂಪಿಸುವಲ್ಲಿ ಇಲಾಖೆಯು ಪ್ರಗತಿಪರ ನಿಲುವುಗಳನ್ನು ತೆಗೆದುಕೊಳ್ಳುತ್ತಿದೆ. ಆಧುನಿಕ ತಂತ್ರಜ್ಞಾನಗಳ ಬಳಕೆಯಿಂದ ಪೊಲೀಸ್ ಇಲಾಖೆಯು ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕ ಸೇವಾ ದಿಟ್ಟ ನೋಟದೊಂದಿಗೆ ತನ್ನ ಕಾರ್ಯವ್ಯಾಪ್ತಿಯನ್ನು ವಿಸ್ತರಿಸುತ್ತಿದೆ. ಕಾನೂನು ಜಾಗೃತಿ:ಶಾಲಾ-ಕಾಲೇಜುಗಳಲ್ಲಿ ಕಾನೂನು ಜಾಗೃತಿ ಕಾರ್ಯಕ್ರಮಗಳು, ಮಹಿಳಾ ಭದ್ರತೆ ಕುರಿತ ಕಾರ್ಯಾಗಾರಗಳು ಮತ್ತು ಯುವ ಜನರಿಗೆ ಪೊಲೀಸ್ ಸೇವೆಗಳ ಬಗ್ಗೆ ಅರಿವು ಮೂಡಿಸುವ ಸಭೆಗಳನ್ನು ಏರ್ಪಡಿಸಲಾಗುತ್ತದೆ.

ಉಪಕ್ರಮದ ಪ್ರಯೋಜನ: ಅಪರಾಧ ತಡೆಗೆ ಸಹಕಾರಿ -ಸಾರ್ವಜನಿಕರ ಸಹಕಾರದಿಂದ ಪೊಲೀಸರು ಶಂಕಾಸ್ಪದ ಚಟುವಟಿಕೆಗಳನ್ನು ಬೇಗ ಗುರುತಿಸಿ ತಡೆಗಟ್ಟುವುದು. ಜನರಲ್ಲಿ ನಂಬಿಕೆ ಬೆಳೆಸುವುದು-ಸಮುದಾಯ ಪೊಲೀಸ್ ವ್ಯವಸ್ಥೆಯು ಪೊಲೀಸ್ ಮತ್ತು ಸಾರ್ವಜನಿಕರ ನಡುವೆ ವಿಶ್ವಾಸದ ಸಂಬಂಧವನ್ನು ನಿರ್ಮಿಸುವುದು.

ಯುವಜನತೆಗೆ ಮಾರ್ಗದರ್ಶನ- ಯುವ ಜನರನ್ನು ಸಕಾರಾತ್ಮಕ ಚಟುವಟಿಗಳತ್ತ ತೊಡಗಿಸಲು ಇದು ಸಹಾಯ ಮಾಡುತ್ತದೆ. ಒಟ್ಟಾರೆ ಸಮಾಜದಲ್ಲಿ ಗಂಭೀರ ಸಮಸ್ಯೆ ಉದ್ಭವಿಸುವ ಮೊದಲೇ ಪರಿಹಾರೋಪಾಯಗೊಂದಿಗೆ ಸನ್ನದ್ಧರಾಗಿರುವಂತಹ ವಾತಾವರಣ ರೂಪುಗೊಂಡಿರುತ್ತದೆ. ಸೈಬರ್ ಅಪರಾಧದಲ್ಲಿ ಅಕ್ರಮ ಹಣ ವರ್ಗಾವಣೆಗೆ ನಕಲಿ ಬ್ಯಾಂಕ್ ಖಾತೆಗಳ ಬಳಕೆ : ರಾಜ್ಯ ಪೊಲೀಸ್ ಇಲಾಖೆಯಿಂದ ಅಧ್ಯಯನ ವರದಿ ಬಿಡುಗಡೆ ಸೈಬರ್ ಅಪರಾಧಗಳಲ್ಲಿ ಅಕ್ರಮ ಹಣ ವರ್ಗಾವಣೆಗೆ ನಕಲಿ ಬ್ಯಾಂಕ್ ಖಾತೆಗಳ ಬಳಕೆಯ ಬಗ್ಗೆ ರಾಜ್ಯ ಪೊಲೀಸ್ ಇಲಾಖೆ ಅಧ್ಯಯನ ವರದಿಯನ್ನು ಬಿಡುಗಡೆ ಮಾಡಿದೆ.ಸೈಬರ್ ಅಪರಾಧ ಪ್ರಕರಣಗಳಲ್ಲಿ ಅಕ್ರಮ ಹಣದ ವರ್ಗಾವಣೆಗೆ ವ್ಯಾಪಕವಾಗಿ ನಕಲಿ ಬ್ಯಾಂಕ್ ಖಾತೆಗಳ ಬಳಕೆಯ ಬಗ್ಗೆ ಅಧ್ಯಯನ ಮಾಡಿ ಅವುಗಳನ್ನು ತಡೆಗಟ್ಟಲು ಅನುಸರಿಸಬೇಕಾದ ಕ್ರಮಗಳನ್ನು ಶಿ?ರಸ್ಸು ಮಾಡಲು ಸಿಐಡಿಯ ಸೈಬರ್ ಅಪರಾಧ ತನಿಖಾ ತರಬೇತಿ ಮತ್ತು ಸಂಶೋಧನಾ ಕೇಂದ್ರ (ಸಿಸಿಐಆರ್‌ಟಿ) ವತಿಯಿಂದ ವಿಶೇಷ ತಂಡವನ್ನು ರಚಿಸಲಾಯಿತು.

## ತೋಟಗಾರಿಕೆ ಇಲಾಖಾ ಕ್ಷೇತ್ರಗಳ ಭೂ-ದಾಖಲೆಗಳನ್ನು ಇಲಾಖಾ ಹೆಸರಿಗೆ ವರ್ಗಾಯಿಸಿಕೊಳ್ಳಲು ಸೂಚನೆ



ಬೆಳಗಾವಿ ; ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ತೋಟಗಾರಿಕೆ ಅಭಿವೃದ್ಧಿ ಏಜೆನ್ಸಿ ಯೋಜನೆಯ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯು ಶುಕ್ರವಾರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ರವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಮಾತನಾಡಿದ ಜಿಪಂ ಸಿಇಒ ರಾಹುಲ್ ಶಿಂಧೆ ರವರು ಜಿಲ್ಲೆಯ ವಿವಿಧ ತೋಟಗಾರಿಕೆ ಕ್ಷೇತ್ರಗಳ ಭೂ ಕಂದಾಯ ದಾಖಲಾತಿಗಳನ್ನು ತೋಟಗಾರಿಕೆ ಇಲಾಖೆಯ ಹೆಸರಿಗೆ ವರ್ಗಾಯಿಸಿಕೊಳ್ಳಲು ಖುದ್ದಾಗಿ ತಹಶೀಲ್ದಾರ ಕಛೇರಿ, ಉಪವಿಭಾಗ ಅಧಿಕಾರಿ ಕಛೇರಿಯ ಅಧಿಕಾರಿಗಳನ್ನು ಸಂಪರ್ಕಿಸಲು ಎಲ್ಲ ತೋಟಗಾರಿಕೆ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ಅದರ ಜೊತೆಗೆ ಎಲ್ಲ ತೋಟಗಾರಿಕೆ ಕ್ಷೇತ್ರ ಮತ್ತು ನರ್ಸರಿಗಳಲ್ಲಿ ಗುಣಮಟ್ಟದ ಹಣ್ಣಿನ ಕಸಿ/ಸಸಿಗಳನ್ನು ಉತ್ಪಾದಿಸಿ ರೈತರಿಗೆ ವಿತರಿಸುವಂತೆ ತಿಳಿಸಿದರು. ಜಿಲ್ಲೆಯ ವಿವಿಧ ತೋಟಗಾರಿಕೆ ಕ್ಷೇತ್ರಗಳಲ್ಲಿ ಮೂಲ ಸೌಕರ್ಯಗಳನ್ನು ನಿರ್ಮಿಸಲು ನಬಾರ್ಡ ಅಥವಾ ಇತರೆ ಸಂಬಂಧಪಟ್ಟ ಇಲಾಖೆಗಳಿಗೆ ಆದಷ್ಟು ಬೇಗ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು. ತೋಟಗಾರಿಕೆ ಕ್ಷೇತ್ರ ಮತ್ತು ನರ್ಸರಿಗಳ ಆದಾಯವನ್ನು ಹೆಚ್ಚಿಸಲು ಎಲ್ಲ ಕ್ಷೇತ್ರ ಮಟ್ಟದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಬಳಿಕ ಮಾತನಾಡಿದ ತೋಟಗಾರಿಕೆ ಉಪನಿರ್ದೇಶಕ ಮಾಹಾಂತೇಶ ಮುರಗೋಡ ವಿವಿಧ ತೋಟಗಾರಿಕೆ ಕ್ಷೇತ್ರದ ಬಗ್ಗೆ ವಿವರಣೆ ನೀಡಿದರು. ಹಾಗೂ ಹಾಲಿ ಕೆಲವೊಂದು ಕ್ಷೇತ್ರಗಳು ಇತರ ಇಲಾಖೆಯ ಹೆಸರಿನಲ್ಲಿದ್ದು ಅವುಗಳನ್ನು ತೋಟಗಾರಿಕೆ ಇಲಾಖೆಯ ಹೆಸರಿಗೆ ಬದಲಿಸಬೇಕಿರುತ್ತದೆ ಎಂದು ಸಭೆಗೆ ತಿಳಿಸಿದರು. ಮುಂದುವರೆದು 2024-25ನೇ ಸಾಲಿನ ಪ್ರಗತಿಯನ್ನು ಸಭೆಗೆ ವಿವರಿಸುತ್ತಾ 2025-26ನೇ ಸಾಲಿನ ಕ್ರಿಯಾ ಯೋಜನೆ ಕ್ಷೇತ್ರದಲ್ಲಿ ಆಗಬೇಕಾದ ಮೂಲಭೂತ ಸೌಕರ್ಯದ ಬಗ್ಗೆ ವಿವರಣೆ ನೀಡಿದರು. ಆದಾದ ನಂತರ ಮಾತನಾಡಿದ ಮಾನ್ಯರು ಅನುದಾನದ ಮೂಲದೊಂದಿಗೆ ಪ್ರಸ್ತಾವಣೆಯನ್ನು ಸಲ್ಲಿಸಿ ಅನುಮೋದಿಸಿಕೊಂಡು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಬೇಕೆಂದು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ವಿಜಯಕುಮಾರ ಹೊನಕೇರಿ, ತೋಟಗಾರಿಕೆ ಉಪ ನಿರ್ದೇಶಕರಾದ ಮಾಹಾಂತೇಶ ಮುರಗೋಡ, ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯದ ಡಾ. ದಿಲೀಪ ಮಸೂತಿ, ಕೃಷಿ ಇಲಾಖೆ ಜಂಟಿ ನಿರ್ದೇಶಕರು ಶ್ರೀ ಹೆ. ಡಿ. ಕೋಳೆಕರ, ಪಶುಪಾಲನಾ ಇಲಾಖೆ ಉಪನಿರ್ದೇಶಕರಾದ ರವಿ ಸಾಲಿಗೌಡರ, ರೇಷ್ಮೆ ಇಲಾಖೆ ಉಪನಿರ್ದೇಶಕರಾದ ಮಹೇಶ ಕುಮಾರ ವಾಗೆ, ಮೀನುಗಾರಿಕೆ ಇಲಾಖೆ ಉಪನಿರ್ದೇಶಕರಾದ ಸಂತೋಷ ಕೊಪ್ಪದ, ಕೃಷಿ ಮಾರುಕಟ್ಟೆ ಎಂ.ಡಿ. ಚಬನೂರು, ಕೈಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರಾದ ಎ. ಐ. ಪಠಾನ ಮತ್ತು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ರಾಜ್ಯವಲದ ಕೆ. ಎನ್. ಶ್ಯಮಂತ ಹಾಗೂ ತೋಟಗಾರಿಕೆ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು, ಕ್ಷೇತ್ರ ಮತ್ತು ನರ್ಸರಿ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಅನೈತಿಕ ಚಟುವಟಿಕೆಗಳ ತಾಣವಾದ ಸರ್ಕಾರಿ ಶಾಲೆ

ವರದಿ -ಮಲ್ಲಿಕಾರ್ಜುನ ತುಂಗಳ

ರಬಕವಿ-ಬನಹಟ್ಟಿ,ಜೂ27: ತಾಲೂಕಿನ ಬನಹಟ್ಟಿಯ ಸರ್ಕಾರಿ ಶಾಲೆಗೆ ಪುಂಡ-ಪುಡಾರಿಗಳ ಅನೈತಿಕ ಚಟುವಟಿಕೆಗಳ ತಾಣವಾಗಿದೆ.

ಬನಹಟ್ಟಿಯ ಗಾಂಧಿ ವೃತ್ತದ ಬಳಿಯಿರುವ ಶತಮಾನ ಕಂಡ ಶಾಲೆ ತಾಲೂಕಿನಲ್ಲಿಯೇ ಮುಂಚೂಣಿಯಲ್ಲಿದೆ. ಇದೀಗ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿ ಸಮಸ್ಯೆ ಎದುರಿಸಲು ಕಾರಣವಾಗಿದೆ.

ನಿರುಪಯುಕ್ತ ಕೊಠಡಿಗಳು: ಶಾಲಾ ಕೊಠಡಿಗಳಿಗೆ ಸಮಸ್ಯೆ ಇಲ್ಲದಿದ್ದರೂ ನಿರುಪಯುಕ್ತ ಏಳೆಂಟು ಕೊಠಡಿಗಳು ಇದೀಗ ಹಾಳು ಬಿದ್ದಿದ್ದು, ಆಟದ ಸಮಯದಲ್ಲಿ ಹಾಗು ನಿತ್ಯ ಸಂಚರಿಸುವ ವಿದ್ಯಾರ್ಥಿಗಳು ಜೀವ ಕೈಯಲ್ಲಿ ಹಿಡಿದುಕೊಂಡೇ ಶಾಲೆಯೊಳಗೆ ಸಂಚರಿಸಬೇಕಿದೆ. ತೀವ್ರ ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳನ್ನು ತೆರವುಗೊಳಿಸಬೇಕಾದುದು ಇಲಾಖೆ ಜವಾಬ್ದಾರಿ. ಆದರೆ ಅಧಿಕಾರಿಗಳ ತೀವ್ರ ನಿರ್ಲಕ್ಷ್ಯದಿಂದ ಹಾಗೇ ಕೊಠಡಿಗಳಿದ್ದು, ಕತ್ತಲಾಗುತ್ತಿದ್ದಂತೆ ಕುಡುಕರ ತಾಣವಾಗಿ ಮಾರ್ಪಟ್ಟಿದೆ.

ಶಿಥಿಲಗೊಂಡ ಕೊಠಡಿ ಪಕ್ಕದಲ್ಲೇ ಆಟವಾಡುವದರಿಮದ ಅಪಾಯ ಸಂಭವಿಸುವ ಮುನ್ನ ಸರ್ಕಾರ ಕ್ರಮ ಕೈಗೊಳ್ಳಬೇಕೆಂಬುದು ಪಾಲಕರ ಒತ್ತಾಯ.



ಬೆಳಿಗ್ಗೆ ಶಾಲೆಗೆ ಬಂದೊಡನೆ ಶಿಕ್ಷಕರಿಗೆ ಇಲ್ಲಿನ ತ್ಯಾಜ್ಯ ಸ್ವಚ್ಛಗೊಳಿಸುವದೇ ಕೆಲಸವಾಗಿದೆ. ಮೈದಾನದಲ್ಲೂ ಒಡೆದ ಬಾಟಲಿಗಳ ಚೂರುಗಳು ಮಕ್ಕಳು ಆಟವಾಡುವಾಗ ಕಾಲಿಗೆ ಚುಚ್ಚಿ ಗಾಯಗೊಮಡ ಪ್ರಕರಣಗಳೂ ಸಾಕಷ್ಟಿವೆ.

ವಿದ್ಯಾರ್ಥಿಗಳು ಆಟವಾಡುತ್ತಾ ಅರಿವಿಲ್ಲದೆ ಶಿಥಿಲಗೊಂಡ ಕಟ್ಟಡದೊಳಗೆ ಹೋಗುತ್ತಾರೆ. ಕಟ್ಟಡವನ್ನು ತೆರವುಗೊಳಿಸಿದರೆ ಆ ಜಾಗದಲ್ಲಿ ಹೊಸ ಕಟ್ಟಡಗಳನ್ನು ಕಟ್ಟಡಲು ಅವಕಾಶವಾಗುತ್ತದೆ. ಆದರೆ ಅವುಗಳನ್ನು ತೆರವುಗೊಳಿಸದ ಕಾರಣ ಕೊನೆಗೆ ಆಟದ ಮೈದಾನಕ್ಕಾದರೂ ಅವಕಾಶವಾಗುತ್ತದೆ. ಅಧಿಕಾರಿಗಳು ಶಿಥಿಲ ಕಟ್ಟಡ ತೆರವುಗೊಳಿಸಿ ವಿಶಾಲ ಮೈದಾನ ಉಳಿಸಿಕೊಳ್ಳಬೇಕಿದೆ.

> 'ಕಟ್ಟಡ ತೆರವಿಗೆ ಅಧಿಕಾರಿಗಳ ಗಮನಕ್ಕೆ ತಂದಿದೆ. ಶಾಲಾ ಗೇಟ್ ಎತ್ತರಿಸುವ ವಿಚಾರವನ್ನೂ ತಿಳಿಸಿದ್ದು, ಶೀಘ್ರ ಕೆಲಸ ನಡೆಯಲಿದೆ'.
>
> - ಪ್ರಕಾಶ ದಾಸರ ಪ್ರಾಚಾರ್ಯರು, ಸರ್ಕಾರಿ ಶಾಲೆ, ಬನಹಟ್ಟಿ.

ಗೇಟ್ ವ್ಯವಸ್ಥೆಯಿಲ್ಲ: ಸುತ್ತಲೂ ಗೋಡೆ ನಿರ್ಮಾಣವಾಗಿದ್ದರೂ, ಗೇಟ್‌ನ ಅಳವಡಿಕೆ ಸಮರ್ಪಕವಾಗಿಲ್ಲದ ಕಾರಣ ಕೆಲ ಪುಂಡರು ಗೇಟ್ ಜಿಗಿದು ಶಾಲಾ ಆವರಣ ಪ್ರವೇಶವಾಗುವಲ್ಲಿ ಕಾರಣವಾಗುತ್ತಿದೆ.

> ಈ ಕುರಿತು ವೀಕ್ಷಣೆ ನಡೆಸಲಾಗಿದೆ. ಸದ್ಯ ವಿದ್ಯಾರ್ಥಿಗಳಿಗೆ ಅನುಗುಣವಾಗಿ ಕೊಠಡಿ ಸಮಸ್ಯೆಗಳಿಲ್ಲ. ಮೇಲಧಿಕಾರಿಗಳೊಂದಿಗೆ ಸಮಾಲೋಚಿಸಿ ಕಟ್ಟಡ ತೆರವುಗೊಳಿಸಲಾಗುವದು.
>
> -ಅಶೋಕ ಬಸನ್ನವರ, ಬಿಇಒ, ಜಮಖಂಡಿ.

ಸ್ವಚ್ಛತೆ ಸವಾಲು: ಶಾಲಾ ಕಂಪೌಂಡ್ ಹೊರಗೆ ಸಂಜೆಯಾಗುತ್ತಿದ್ದಂತೆ ಡಬ್ಬಾ ಅಂಗಡಿಗಳ ಹಾವಳಿಯಿಂದಾಗಿ ಎಲ್ಲೆಂದರಲ್ಲಿ ಕಸದ ರಾಶಿ ಸಾಮಾನ್ಯವಾಗಿದೆ. ಇದೇ ದುರ್ವಾಸನೆ ಮಧ್ಯೆ ಶಿಕ್ಷಣ ಕಲಿಕೆ ವಿದ್ಯಾರ್ಥಿಗಳದ್ದಾಗಿದೆ. ಶಾಲಾ ಆವರಣದಿಂದ ನಿಯಮದಂತೆ ದೂರವಿದ್ದು ವ್ಯಾಪಾರ-ವಹಿವಾಟು ನಡೆಸಬೇಕಾದ ನಿಯಮವಿದ್ದರೂ, ಅವೆಲ್ಲವನ್ನೂ ಗಾಳಿಗೆ ತೂರಿ ದಿನಂಪ್ರತಿ ವ್ಯಾಪಾರ ಮಾಡಿ ಕಸವನ್ನೆಲ್ಲ ಅಲ್ಲಿಯೇ ಸುರಿದು ನಿತ್ಯ ಕಸ ವಿಲೇವಾರಿ ಸವಾಲಾಗಿದೆ.

## ಕೇಂದ್ರ ಬಸ್ ನಿಲ್ದಾಣದಲ್ಲಿ ಇಂದಿರಾ ಕ್ಯಾಂಟೀನ್‌ಗೆ ಎಂ.ಬಿ. ಪಾಟೀಲ ಚಾಲನೆ

ವಿಜಯಪುರ: ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ನಗರದ ಕೇಂದ್ರ ಬಸ್ ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿದರು.

ಶುಕ್ರವಾರ ನಗರದ ಕೇಂದ್ರ ಬಸ್ ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್‌ನನ್ನು ಉದ್ಘಾಟಿಸಿದ ಸಚಿವರು, ಬಿಜಾಪುರ ಕೇಂದ್ರ ಬಸ್ ನಿಲ್ದಾಣದಿಂದ ಪ್ರತಿನಿತ್ಯ ಸಾವಿರಾರು ಜನರು ಪ್ರಯಾಣಿಸುತ್ತಾರೆ. ಪ್ರಯಾಣಿಕರು, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ 48 ಲಕ್ಷ ಕಟ್ಟಡ ಕಾಮಗಾರಿ, 12.05 ಲಕ್ಷ ಅಡುಗೆ ಸಲಕರಣೆಗಳ ಮೊತ್ತ ಸೇರಿದಂತೆ 60.05 ಲಕ್ಷ ರೂ. ವೆಚ್ಚದಲ್ಲಿ ಕೇಂದ್ರ ಬಸ್ ನಿಲ್ದಾಣದ ಆವರಣದಲ್ಲಿ ಇಂದಿರಾ ಕ್ಯಾಂಟಿನ್ ನಿರ್ಮಿಸಲಾಗಿದೆ. ಇಂದಿರಾ ಕ್ಯಾಂಟಿನ್‌ನಲ್ಲಿ ಉತ್ತಮ ರುಚಿ-ಶುಚಿಯಾದ ಗುಣಮಟ್ಟದ ಆಹಾರ ಲಭ್ಯವಾಗಲಿದ್ದು, ಇದರಿಂದ ಬಡ ಜನರಿಗೆ ಅನುಕೂಲವಾಗಲಿದೆ. ಬಡವರ ಹಸಿವು ನೀಗಿಸುವ ಇಂದಿರಾ ಕ್ಯಾಂಟೀನ್ ಯೋಜನೆ ಅತ್ಯಂತ ಜನಪ್ರಿಯ ಯೋಜನೆಯಾಗಿದ್ದು, ಜೂ.28ರಂದು ಬಬಲೇಶ್ವರ ಹಾಗೂ ತಿಕೋಟಾ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟಿನ್ ಉದ್ಘಾಟನೆ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ಆಹಾರ ಗುಣಮಟ್ಟತೆಯನ್ನು ಪರೀಕ್ಷಿಸುವ ದೃಷ್ಟಿಯಿಂದ ಕಾಲಕಾಲಕ್ಕೆ ಅಧಿಕಾರಿಗಳು ಇಂದಿರಾ ಕ್ಯಾಂಟಿನ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಗಠಾಣ ಶಾಸಕ ವಿಠ್ಠಲ ಕಟಕದೋಂಡ, ಧಾರವಾಡದ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನ್ನಾನ ಮುಶ್ರೀಫ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಕೆ.ಕೆ.ಆರ್.ಟಿ.ಸಿ. ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ವಿವಿಧ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಉತ್ಸವ : ನಾಡಪ್ರಭು ಶ್ರೀ ಕೆಂಪೇಗೌಡರು ಬೆಂಗಳೂರನ್ನು ಮಹಾನಗರವನ್ನಾಗಿಸಿದ ಧೀಮಂತ ನಾಯಕ : ಬಸವರಾಜ ಹೆಗನಾಯಕ

ಬೆಳಗಾವಿ, ಅರಣ್ಯದಿಂದ ಕೂಡಿದಂತಹ ಬೆಂಗಳೂರನ್ನು ಮಹಾನಗರವನ್ನಾಗಿಸಿ ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಸಹ ಬೆಂಗಳೂರು ಗುರುತಿಸುವಂತೆ ಮಾಡಿದ್ದು ಮಹಾನ ಧೀಮಂತ ನಾಯಕ ನಾಡಪ್ರಭು ಶ್ರೀ. ಕೆಂಪೇಗೌಡ ಎಂದು ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಬಸವರಾಜ ಹೆಗನಾಯಕ ಅವರು ತಿಳಿಸಿದರು.

ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಬೆಳಗಾವಿ ಇವರ ಸಹಯೋಗದಲ್ಲಿ ಶುಕ್ರವಾರ (ಜೂ.27) ಜರುಗಿದ ನಾಡಪ್ರಭು ಶ್ರೀ. ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆಂಪೇಗೌಡರು ಅನೇಕ ರೀತಿಯ ಸುಧಾರಣೆಯನ್ನು ತರುವದರ ಮೂಲಕ ಬೆಂಗಳೂರಿಗೆ ಅಪಾರವಾದ ಕೊಡುಗೆ ನೀಡುವದರ ಮೂಲಕ ಆಗಿನ ಸಣ್ಣ ನಗರವಾಗಿದ್ದ ಬೆಂಗಳೂರು ಇಂದಿನ ಮಹಾ ನಗರವೆಂದು ಪ್ರಖ್ಯಾತಿಯನ್ನು ಪಡೆದಿದೆ.

ನಮ್ಮ ನಾಡು ನುಡಿ ಹಾಗೂ ಸಂಸ್ಕೃತಿ ಉಳಿಸಿ ಬೆಳೆಸಲು ಕೆಂಪೇಗೌಡರು ನೀಡಿದ ಕೊಡುಗೆಯಿಂದಾಗಿ ಇಂದು ಬೆಂಗಳೂರು ಜಾಗತಿಕ ಮಟ್ಟದಲ್ಲಿಯೂ ಸಹ ತನ್ನ ಛಾಪನ್ನು ಮೂಡಿಸಿದೆ. ಅನೇಕರಿಗೆ ಅನುಕೂಲವಾಗುವ ವಿಷಯಗಳನ್ನು ಗಮನದಲ್ಲಿಟ್ಟುಕೊಂಡ ಬೆಂಗಳೂರು ನಗರವನ್ನು ಅಭಿವೃದ್ಧಿ ಪಡಿಸಿದ ಶ್ರೇಯಸ್ಸು ನಾಡಪ್ರಭು ಶ್ರೀ. ಕೆಂಪೇಗೌಡರಿಗೆ ಸೇರುತ್ತದೆ ಎಂದು ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಬಸವರಾಜ ಹೆಗನಾಯಕ ನುಡಿದರು.

ಕಾರ್ಯಕ್ರಮದ ಉಪನ್ಯಾಸಕರಾಗಿ ಆಗಮಿಸಿದ್ದ ಮಹೇಶ ಚನ್ನಂಗಿ ಅವರು ಮಾತನಾಡಿ ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು ಈಗ ಪ್ರಸಿದ್ಧ ಐ.ಟಿ ಕ್ಷೇತ್ರವಾಗಿದೆ. ಈ ಕ್ಷೇತ್ರದಿಂದಾಗಿ ನಮ್ಮ ಕರ್ನಾಟಕದ ಹೆಸರು ಜಗತ್ತಿಗೆಲ್ಲಾ ಪಸರಿಸಿದೆ ಇದರ ಕೀರ್ತಿ ನಾಡಪ್ರಭು ಕೆಂಪೇಗೌಡರಿಗೆ ಸಲ್ಲುತ್ತದೆ ಎಂದರು.




ಯಲಹಂಕದ ನಾಡಪ್ರಭು ಎಂದೆ ಖ್ಯಾತರಾದ ಕೆಂಪೇಗೌಡರು ದೃಢ ಸಂಕಲ್ಪ ಇಟ್ಟುಕೊಂಡು ಸುಂದರ ಬೆಂಗಳೂರು ನಗರ ನಿರ್ಮಾಣ ಮಾಡಿದರು. ಬೆಂಗಳೂರು ನಗರದ ನಿರ್ಮಾಣದ ಸಂದರ್ಭದಲ್ಲಿ ಭವಿಷ್ಯದ ಆಲೋಚನೆ ಇಟ್ಟುಕೊಂಡು ನಗರದ ಸುತ್ತ-ಮುತ್ತಲು ಕೆರೆಗಳನ್ನು ಗಿಡ ಮರಗಳನ್ನು ಬೆಳೆಸಿ ಸುಂದರವಾದ ನಗರವನ್ನು ನಿರ್ಮಿಸಿದರು.

ಕೆರೆಗಳು, ದೇವಸ್ಥಾನಗಳು, ಹೀಗೆ ಮುಂತಾದ ಕಟ್ಟಡಗಳನ್ನು ಕಟ್ಟಿ, ಕೌಶಲ್ಯಗಾರರಿಗೆ ಬದುಕು ಕಟ್ಟಿಕೊಳ್ಳಲು ಒಟ್ಟು 64 ಪೇಟೆಗಳನ್ನು ನಿರ್ಮಿಸಿದ ಕೀರ್ತಿ ಕೆಂಪೇಗೌಡರಿಗೆ ಸಲ್ಲುತ್ತದೆ. ವಿಜಯನಗರ ಸಾಮ್ರಾಜ್ಯದ ನಾಯಕರಿಂದ ಮೆಚ್ಚುಗೆ ಪಡೆದ ದೊರೆಯಾಗಿದ್ದರು. ತ್ಯಾಗ, ಧರ್ಮ ನಿಷ್ಠೆ, ಧೈರ್ಯ, ಗೌರವ ಮನೋಭಾವನೆ ಎಲ್ಲರಿಗೂ ಮಾದರಿಯಾಗುವಂತಹ ಗುಣಗಳನ್ನು ಹೊಂದಿದ ಶ್ರೀ. ಕೆಂಪೇಗೌಡರ ಹೆಸರು ಭೂಮಿಯ ಮೇಲೆ ಸೂರ್ಯ, ಚಂದ್ರ ಇರುವ ವರೆಗೂ ಶಾಶ್ವತವಾಗಿ ಅಜರಾಮರವಾಗಿರುತ್ತದೆ ಎಂದು ಮಹೇಶ ಚನ್ನಂಗಿ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯ ಕುಮಾರ ಹೊನಕೇರಿ, ಮಹಾ ನಗರ ಪಾಲಿಕೆಯ ಉಪ ಆಯುಕ್ತ ಉದಯಕುಮಾರ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ವಾಯ್.ಎಮ್.ಪಾಟೀಲ, ಜಿಲ್ಲಾ ಉಪಯೋಜನಾ ಸಮನ್ವಯ ಅಧಿಕಾರಿ ಉಮಾದೇವಿ ಹಿರೇಮಠ, ಸಾಹಿತಿಗಳಾದ ಸಿದ್ಧರಾಮ ತಳವಾರ, ಜಾಗತಿಕ ಲಿಂಗಾಯತ ಮಹಾ ಸಭೆಯ ಬೆಳಗಾವಿ ಯುವ ಘಟಕದ ಜಿಲ್ಲಾಧ್ಯಕ್ಷ ಪ್ರೇಮಕುಮಾರ ಚೌಗಲಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ನಾಡಪ್ರಭು ಶ್ರೀ. ಕೆಂಪೇಗೌಡ ಜಯಂತಿ ಅಂಗವಾಗಿ ವಿವಿಧ ಶಾಲಾ ಕಾಲೇಜುಗಳಲ್ಲಿ ಜರುಗಿದ ವಿವಿಧ ಸ್ಪರ್ಧೆಗಳ ವಿಜೇತ ವಿಧ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

# ಇಂಗ್ಲೀಷ್ ಆಧುನಿಕ ಯುಗದ ಸಂಪರ್ಕ ಭಾಷೆ-ಸಂತೋಷ ಬಂಡೆ

ವಿಜಯಪುರ: ಇಂಗ್ಲಿಷ್ ಭಾಷೆಯು ಜಗತ್ತಿನಾದ್ಯಂತ ಜನರೊಂದಿಗೆ ನಮ್ಮನ್ನು ಸಂಪರ್ಕಿಸುವ ಪ್ರಬಲ ಸಾಧನವಾಗಿದ್ದು, ಅದು ನಮ್ಮ ದೈನಂದಿನ ಜೀವನದ ಭಾಗವಾಗಿದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಅವರು ಗುರುವಾರದಂದು ನಗರದ ದಿ ಪ್ರೆಸಿಡೆನ್ಸಿ ಶಿಕ್ಷಣ ಮಹಾವಿದ್ಯಾಲಯದಲ್ಲಿ 'ಸರೋಜಿನಿ ನಾಯ್ಡು ಇಂಗ್ಲೀಷ್ ಭಾಷಾ ಸಂಘ' ವನ್ನು ಉದ್ಘಾಟಿಸಿ ಮಾತನಾಡಿದರು.

ಆಧುನಿಕ ಯುಗದ ಸಂಪರ್ಕ ಭಾಷೆಯಾದ ಇಂಗ್ಲೀಷ್ ವಿಶ್ವ ಭಾಷೆಯಾಗಿ ವೈಯಕ್ತಿಕ ಮತ್ತು ವೃತ್ತಿಪರ ಬೆಳವಣಿಗೆಗೆ ಪೂರಕವಾಗಿದೆ. ವಿಶ್ವಾದ್ಯಂತ 1.8 ಶತಕೋಟಿಗೂ ಹೆಚ್ಚು ಜನರು ಮಾತನಾಡುವ ಇಂಗ್ಲಿಷ್, ಶಿಕ್ಷಣ ಮತ್ತು ವ್ಯವಹಾರದ ಮಾಧ್ಯಮದ ಜತೆಗೆ ಹೊಸ ಅನುಭವಗಳಿಗೆ ಸೇತುವೆ ಆಗಿದೆ ಎಂದು ಹೇಳಿದರು.



ಇಂಗ್ಲಿಷ್ ಭಾಷೆ ಆಧುನಿಕ ಜೀವನದ ಅನಿವಾರ್ಯ ಭಾಗವಾಗಿದೆ. ಇದು ಶಿಕ್ಷಣ, ವೃತ್ತಿ ನಿರೀಕ್ಷೆಗಳು, ಪ್ರಯಾಣ ಮತ್ತು ಜಾಗತಿಕ ಸಂವಹನದ ಮೇಲೆ ಪ್ರಭಾವ ಬೀರಿ, ಸಂಸ್ಕೃತಿ ಮತ್ತು ಖಂಡಗಳಾದ್ಯಂತ ವ್ಯಕ್ತಿಗಳಿಗೆ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ. ಸುಮಾ ಬೋಳರೆಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಭಾಷೆಯು ಒಬ್ಬರ ಭವಿಷ್ಯವನ್ನು ರೂಪಿಸುತ್ತದೆ. ವಿದ್ಯಾರ್ಥಿಗಳಲ್ಲಿ ವಿಮರ್ಶಾತ್ಮಕ ಚಿಂತನೆ, ಸೃಜನಶೀಲತೆ ಮತ್ತು ಸಂವಹನ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿ, ಸಾಂಸ್ಕೃತಿಕ ತಿಳುವಳಿಕೆಯನ್ನು ಬೆಳೆಸುತ್ತದೆ ಎಂದು ಹೇಳಿದರು.

ಸಂಘದ ಕಾರ್ಯದರ್ಶಿ ಸಚೀನ ಗುಡದಿನ್ನಿ ಸಂಘದ ಕಾರ್ಯ ಚಟುವಟಿಕೆಗಳ ಕುರಿತು ಮಾತನಾಡಿದರು. ಪ್ರಶಿಕ್ಷಣಾರ್ಥಿ ಸೌಭಾಗ್ಯ ಸ್ವಾಗತ ಗೀತೆ ಹಾಡಿದರು. ಕೈಜರ ಮತ್ತು ಮುತ್ತುರಾಜ ಸ್ವಾಗತಿಸಿ ಪರಿಚಯಿಸಿದರು. ನಂದಾ ಮಾನೆ ನಿರೂಪಿಸಿದರು. ಹಣಮಂತ ವಂದಿಸಿದರು. ಕಾಲೇಜಿನ ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.



ಯರಗಟ್ಟಿ: ಪಟ್ಟಣದ ತಹಶೀಲ್ದಾರ ಕಾರ್ಯಾಲಯ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಆಚರಿಸಲಯಾಯಿತು.
ಕೆಂಪೇಗೌಡ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ತಹಶೀಲ್ದಾರ ಎಂ ವ್ಹಿ ಗುಂಡಪ್ಪಗೋಳ ಈ ವೇಳೆ ಪ. ಪಂ ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಶಿರಸ್ತದಾರ ಎಸ್. ಬಿ. ಕುಲಕರ್ಣಿ, ಪ. ಪಂ. ಸದಸ್ಯ ಸಲೀಂಬೇಗ ಜಮಾದಾರ, ನಿಖಿಲ ಪಾಟೀಲ ಸೇರಿದಂತೆ ತಹಶೀಲ್ದಾರ ಕಚೇರಿ, ಪಟ್ಟಣ ಪಂಚಾಯಿತ ಕಛೇರಿ ಸಿಬ್ಬಂದಿ ವರ್ಗದವರು ಇದ್ದರು.

## ಸಾಂಸ್ಕೃತಿಕ ಕಾರ್ಯಕ್ರಮಗಳಿಗಾಗಿ ಕಲಾವಿದರು ಕಲಾ ತಂಡಗಳಿಂದ ಅರ್ಜಿ ಆಹ್ವಾನ

ಧಾರವಾಡ : ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2025–26 ನೇ ಸಾಲಿನಲ್ಲಿ ಆಯೋಜಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಶಾಸ್ತ್ರೀಯ ಸಂಗೀತ ಹಾಗೂ ನೃತ್ಯ, ಸುಗಮ ಸಂಗೀತ, ಜನಪದ ವಾದ್ಯ ಮತ್ತು ಗಾಯನ, ಸಮೂಹ ನೃತ್ಯ, ನಾಟಕ, ಬಯಲಾಟ, ಗಮಕ, ಕಥಾ ಕೀರ್ತನೆ ಮುಂತಾದ ಕಲಾಪ್ರಕಾರಗಳಲ್ಲಿ ನಿರತರಾಗಿರುವ ಕಲಾವಿದರಿಗೆ ಅವಕಾಶ ಕಲ್ಪಿಸಲಾಗುತ್ತಿದೆ. ಇಲಾಖೆಯ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಇಚ್ಚಿಸುವ ಆಸಕ್ತ ಕಲಾವಿದರು ಹಾಗೂ ಕಲಾತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಾಂಸ್ಕೃತಿಕ ಸೌರಭ, ಯುವ ಸೌರಭ ಹಾಗೂ ಚಿಗುರು ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಇಚ್ಚಿಸುವ ಕಲಾವಿದರು ಅರ್ಜಿ ಸಲ್ಲಿಸಬಹುದಾಗಿದೆ. ಆಕಾಶವಾಣಿಯ ಬಿ, ಬಿ–ಹೈ ಮತ್ತು ಎ ಗ್ರೇಡ್ ಕಲಾವಿದ–ರಿಗೆ ಹಾಗೂ ಸರ್ಕಾರದಿಂದ ಕೊಡಮಾಡುವ ಪ್ರಶಸ್ತಿ ಪುರಸ್ಕೃತ ಕಲಾವಿದರನ್ನು ಸಾಂಸ್ಕೃತಿಕ ಸೌರಭ ಕಾರ್ಯಕ್ರಮಕ್ಕೆ ಪರಿಗಣಿಸಲಾಗುತ್ತಿದೆ. ಕಲಾವಿದರು 30 ವರ್ಷ ಮೇಲ್ಪಟ್ಟವರಾಗಿರಬೇಕು. 15 ರಿಂದ 30 ವರ್ಷದ ಪ್ರತಿಭಾವಂತ ಯುವ ಕಲಾವಿದರನ್ನು ಯುವ ಸೌರಭ ಕಾರ್ಯಕ್ರಮಕ್ಕೆ ಪರಿಗಣಿಸಲಾಗುತ್ತಿದೆ. 8 ರಿಂದ 14 ವರ್ಷದ ಪ್ರತಿಭಾವಂತ ಬಾಲ ಪ್ರತಿಭೆ ಗಳಿಗೆ ಅವಕಾಶ ಕಲ್ಪಿಸಲು ಚಿಗರು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.


ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿಚ್ಚಿಸುವ ಕಲಾವಿದರು, ಕಲಾತಂಡದವರು ಕಲಾ ಸೇವೆಯ ದಾಖಲೆಗಳು ಹಾಗೂ ಸ್ವ–ವಿವರ ಅರ್ಜಿಯನ್ನು ಜುಲೈ 05, 025 ರೊಳಗಾಗಿ ಕಚೇರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2442909 ಗೆ ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಿತಿ ಸದಸ್ಯತ್ವಕ್ಕಾಗಿ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನ

ಧಾರವಾಡ : ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಅವಾಸ್ ಯೋಜನೆ (ನಗರ) 2.0 ಅಡಿಯಲ್ಲಿ **Dharwad district level sanctioning and monitoring committee** ಯಲ್ಲಿ ಧಾರವಾಡ ಜಿಲ್ಲೆಯಲ್ಲಿ ಸಾಮಾಜಿಕ ಕಾರ್ಯಚಟುವಟಿಕೆಗಳನ್ನು ಅನುಷ್ಠಾನ ಮಾಡುತ್ತಿರುವ ಸ್ವಯಂ ಸೇವಾ ಸಂಸ್ಥೆಯನ್ನು ಸದಸ್ಯರನ್ನಾಗಿ ಆಯ್ಕೆ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಉಚಿತ ಸೇವೆ ಸಲ್ಲಿಸುವ ಆಸಕ್ತ ಸಂಸ್ಥೆಗಳು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ಅವರ ವೆಬ್‌ಸೈಟ್ **http://www.dharwaddudc.mrc.gov.in/** ನಲ್ಲಿರುವ ಅನುಬಂಧವನ್ನು ಡೌನಲೋಡ ಮಾಡಿಕೊಂಡು, ಸಂಸ್ಥೆಯ ಮಾಹಿತಿಯನ್ನು ಭರ್ತಿ ಮಾಡಿ ಜುಲೈ 10, 2025 ರೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಭೀಮ್ ಸೇನೆ ಸಂಘಟನೆ ವಿಜಯಪುರ ಜಿಲ್ಲಾ ಯುವ ಘಟಕ ಅಧ್ಯಕ್ಷರಾಗಿ ಪರಶುರಾಮ ಚಲವಾದಿ ಆಯ್ಕೆ



ಮುದ್ದೇಬಿಹಾಳ: ಕರ್ನಾಟಕ ಭೀಮ್ ಸೇನೆ ಸಂಘಟನೆಯಲ್ಲಿ ಸತತವಾಗಿ 3 ವರ್ಷದಿಂದ ಜಿಲ್ಲಾ ಕಾರ್ಯಧ್ಯಕ್ಷರಾಗಿ ತಮ್ಮ ಸಂಘಟನೆಯಲ್ಲಿ ಕಾರ್ಯವೈಖರಿ ನಡಸಿದ್ದಾರೆ ಅದ್ಕಕೆ ವಿಜಯಪುರ ಜಿಲ್ಲೆಯಲ್ಲಿ ಇನ್ನು ಹೆಚ್ಚು ಚಟುವಟಿಕೆಗಳು ಮತ್ತು ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ನೊಂದವರ ಧ್ವನಿಯಾಗಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ತತ್ವ ಸಿದ್ಧಾಂತಗಳನ್ನು ಪಾಲನೆ ಮಾಡಬೇಕೆಂದು ಮುದ್ದೇಬಿಹಾಳ ತಾಲೂಕಿನ ಹಿರೇಮುರಾಳ ಗ್ರಾಮದ ಪರಶುರಾಮ ಚಲವಾದಿರವರನ್ನು ಕರ್ನಾಟಕ ಭೀಮ್ ಸೇನೆ ವಿಜಯಪುರ ಜಿಲ್ಲಾ ಯುವ ಘಟಕ ಅಧ್ಯಕ್ಷರನ್ನಾಗಿ ರಾಜ್ಯಾಧ್ಯಕ್ಷೆ ಹಾಗೂ ಸಂಸ್ಥಾಪಕರಾದ ಶಂಕರ್ ರಾಮಲಿಂಗಯ್ಯ ಆಯ್ಕೆ ಮಾಡಿ ಆದೇಶ ಹೊರಡಿಸಿದ್ದಾರೆ.

## ದಲಿತ ಸಾಹಿತ್ಯ; ಅಧ್ಯಯನ ಶಿಬಿರ

ಧಾರವಾಡ : ಕರ್ನಾಟಕ ಸಾಹಿತ್ಯ ಅಕಾಡೆಮಿಯು ವಿಶೇಷ ಯೋಜನೆಯಡಿ ದಲಿತ ಸಾಹಿತ್ಯ: ಅರ್ಧಶತಮಾನ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ ತಿಂಗಳಿನಲ್ಲಿ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಪರಿಶಿಷ್ಟ ಜಾತಿಗೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ **https://sahithyaacademy.karanatka.gov.in** ಮೂಲಕ ಅರ್ಜಿ ಪಡೆದು, ಜುಲೈ 20, 2025 ರೊಳಗಾಗಿ ಅರ್ಜಿ ಸಲ್ಲಿಸಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಂಪೇಗೌಡರು ನಮಗೆಲ್ಲ ಆದರ್ಶವಾಗಿದ್ದಾರೆ; ಅವರು ಕಟ್ಟಿದ ಬೆಂಗಳೂರು ವಿಶ್ವ ಪ್ರಸಿದ್ಧಿಯಾಗಿದೆ: ಸಭಾಪತಿ ಬಸವರಾಜ ಹೊರಟ್ಟಿ



ಧಾರವಾಡ : ನಾಡ ಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು ಇಂದು ವಿಶ್ವ ಪ್ರಸಿದ್ಧಿಯಾಗಿದೆ. ಅವರ ದೂರದೃಷ್ಟಿಯಿಂದ ಬೆಂಗಳೂರು ಬೆಳೆದಿದೆ ಎಂದು ಕರ್ನಾಟಕ ವಿಧಾನ ಪರಿಷತ್ತ ಸಭಾಪತಿ ಬಸವರಾಜ ಹೊರಟ್ಟಿ ಅವರು ಹೇಳಿದರು.

ಅವರು ಇಂದು (ಜೂ.27) ಬೆಳಿಗ್ಗೆ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜರುಗಿದ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ, ಮಾತನಾಡಿದರು.

ನಾಡುಪ್ರಭು ಕೆಂಪೇಗೌಡರ ಮುಂದಾಲೋಚನೆಯಿಂದ ಸಮಗ್ರ ಅಭಿವೃದ್ಧಿಯ ಬೆಂಗಳೂರು ನಿರ್ಮಾಣವಾಗಿದೆ. ಇಂದು ಬೃಹತ್ ಬೆಂಗಳೂರು ಆಗಿ ಬದಲಾಗಿದೆ. ಕೆಂಪೇಗೌಡರ ನಿಸ್ವಾರ್ಥ ಮತ್ತು ನಾಡಿನ ಕಳಕಳಿಯ ದ್ಯೋತಕವಾಗಿ ಬೆಂಗಳೂರು ಬೆಳೆದು ಬಂದಿದೆ ಎಂದು ಅವರು ಹೇಳಿದರು.

ಕೆಂಪೇಗೌಡರ ಬದುಕು, ಆಡಳಿತ ಮತ್ತು ಜೀವನ ಸಾಧನೆಗಳನ್ನು ಯುವಕ–ರಿಗೆ, ವಿದ್ಯಾರ್ಥಿಗಳಿಗೆ ಪರಿಚಯಿಸುವ ಅಗತ್ಯವಿದೆ. ಮಕ್ಕಳಲ್ಲಿ ನಾಡಪ್ರಭು ಕೆಂಪೇಗೌಡರ ಗುಣಗಳನ್ನು ಬೆಳೆಸಬೇಕು. ಈ ನಿಟ್ಟಿನಲ್ಲಿ ಅವರ ಜೀವನಗಾಥೆಯನ್ನು ಶಾಲಾ ಪಠ್ಯದಲ್ಲಿ ಸೇರಿಸಿ, ಪರಿಣಾಮಕಾರಿ ಬೋಧನೆ ಮಾಡಬೇಕು ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಗೀತಾ.ಸಿ.ಡಿ. ಅವರು ಮಾತನಾಡಿ, ನಾಡಪ್ರಭು ಕೆಂಪೇಗೌಡರು ಕನ್ನಡ ನಾಡಿನ ಹೆಮ್ಮೆ. ಬಡವರ ಒಡೆಯ ಮತ್ತು ಬೆಂಗಳೂರು ನಗರದ ಶಿಲ್ಪಿಯಾಗಿದ್ದಾರೆ. ಅವರು ಕೇವಲ ಒಂದು ನಗರ ನಿರ್ಮಾಪಕರಾಗಿಯಲ್ಲ, ಶ್ರೇಷ್ಠ ಆಡಳಿತಗಾರ, ಪ್ರಜಾಪಾಲಕ ಮತ್ತು ದೂರದೃಷ್ಟಿಯ ನಾಯಕರಾಗಿದ್ದರು ಎಂದು ಅವರು ಹೇಳಿದರು.

ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿ ಆಳ್ವಿಕೆ ನಡೆಸಿದ್ದು, ತಮ್ಮ ಪ್ರತಿಭೆ ಮತ್ತು ಜಾಣ್ಮೆಯಿಂದ ಇತಿಹಾಸದಲ್ಲಿ ಅಮರರಾಗಿದ್ದಾರೆ. ಬೆಂಗಳೂರು ನಗರವನ್ನು ಅವರು ಯೋಜಿತವಾಗಿ ನಿರ್ಮಿಸಿದರು. ರಸ್ತೆ, ಮಾರುಕಟ್ಟೆ, ಕೆರೆ, ದೇವಾಲಯಗಳನ್ನು ಕಟ್ಟಿಸುವ ಮೂಲಕ ಜನಜೀವನ ಸುಲಭವಾಗುವಂತೆ ಮಾಡಿದರು ಎಂದು ಅಪರ ಜಿಲ್ಲಾಧಿಕಾರಿಗಳು ಹೇಳಿದರು.

ನಿವೃತ್ತ ಇತಿಹಾಸ ಪ್ರಾಧ್ಯಾಪಕ ಡಾ. ಬಸವರಾಜ ಅಕ್ಕಿ ಅವರು ನಾಡಪ್ರಭು ಶ್ರೀ ಕೆಂಪೇಗೌಡರ ಅವರ ಜೀವನ ಚರಿತ್ರೆ ಕು–ರಿತು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಸಿಪಿಐ ಶಿವಾನಂದ ಕಟಗಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರಾಮಕೃಷ್ಣ ಸದಲಗಿ, ಅಶೋಕ ಸಿಂದಗಿ ಇದ್ದರು.

ಕನ್ನಡ ಮತ್ತು ಸಂಸ್ಕತಿ ಇಲಾಖೆ ಸಹಾಯಕ ನಿರ್ದೆಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು. ನಾಡಪ್ರಭು ಶ್ರೀ ಕೆಂಪೇಗೌಡರ ಕುರಿತು ಹಲವು ಸ್ಪರ್ಧೆಗಳನ್ನು ಏರ್ಪಡಿಸಲಾಗಿ–ತ್ತು. ಅವುಗಳಲ್ಲಿ ವಿಜೇತರಾದವರಿಗೆ ಕಾರ್ಯಕ್ರಮದಲ್ಲಿ ಪ್ರಮಾಣಪತ್ರ ಹಾಗೂ ಬಹುಮಾನವನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಅಧಿಕಾರಿಗಳು, ವಿವಿಧ ಶಾಲೆಗಳ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಶಿಕ್ಷಕರು, ಸಾರ್ವಜನಿಕರು ಭಾಗವಹಿಸಿದ್ದರು.

# ನಾಡಪ್ರಭು ಕೆಂಪೇಗೌಡರು ಆಧುನಿಕ ಬದುಕಿನ ಶಿಲ್ಪಿಗಳು- ಸಂತೋಷ ಬಂಡೆ



ವಿಜಯಪುರ: ಜಾತಿ, ಧರ್ಮ, ಸಮುದಾಯಕ್ಕೆ ಸೀಮಿತವಾಗದೇ ಸಾಮಾಜಿಕ ಸಮಾನತೆಯನ್ನು ಎತ್ತಿ ಹಿಡಿದು, ದೇಶಕ್ಕೇ ಮಾದರಿಯಾದ ಕೆಂಪೇಗೌಡರ ಆದರ್ಶಗಳನ್ನು ಇಂದಿನ ಯುವಕರು ಅನುಕರಿಸಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಶುಕ್ರವಾರದಂದು ತಾಲೂಕಿನ ನಾಗಠಾಣ ಗ್ರಾಮದ ಅರಿವು ಕೇಂದ್ರದಲ್ಲಿ ಹಮ್ಮಿಕೊಂಡ 'ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ' ಯನ್ನು ಉದ್ದೇಶಿಸಿ ಮಾತನಾಡಿದರು.

ಕೆಂಪೇಗೌಡರು ಸಾಂಸ್ಕೃತಿಕ ರಾಯಭಾ–ರಿಯಾಗಿ, ಸುಂದರ, ಪರಸರ ಸ್ನೇಹಿ ನಗರ ನಿರ್ಮಾಣದ ಜತೆಗೆ ಆಧುನಿಕ ಬದುಕಿನ ಶಿಲ್ಪಿಯಾದರು. ಕೃಷಿ ರೈತಾಪಿ ಜನರ ಸಾಂಸ್ಕೃತಿಕ ರಾಯಭಾರಿಯಾಗಿದ್ದರು. ಅವರ ಸೌಹಾರ್ದಯುತ ಅಭಿವೃದ್ಧಿ ಆಡಳಿತ ಇಂದು ಅತ್ಯಂತ ಪ್ರಸ್ತುತ ಎಂದರು.

ಗ್ರಂಥಪಾಲಕ ಮಂಜುನಾಥ ಗಂಗನಳ್ಳಿ ಮಾತನಾಡಿ, ಕೆಂಪೇಗೌಡರು ಕುಶಲಕರ್ಮಿಗಳು, ವ್ಯಾಪಾರಸ್ಥರು, ಕೃಷಿಕರ ಜತೆಗೆ ಜನಸಾಮಾನ್ಯರ ಅಗತ್ಯಗಳನ್ನು ಅರಿತು ಎಲ್ಲರಿಗೂ ವಿಶೇಷ ಪ್ರಾತಿನಿಧ್ಯ ನೀಡಿದ್ದರು. ಅವರಲ್ಲಿ ಉತ್ತಮವಾದ ನೈತಿ–ಕ ಮೌಲ್ಯಗಳನ್ನು ರೂಪಿಸುವಲ್ಲಿ ಅವರ ತಾಯಿಯ ಪಾತ್ರ ಮಹತ್ವದ್ದಾಗಿತ್ತು ಎಂದು ಹೇಳಿದರು.

ಅತಿಥಿ ವಿಶ್ವನಾಥ ಕಲಗೊಂಡ ಮಾತನಾಡಿ, ಧರ್ಮಶಾಸ್ತ್ರ, ಸಾಹಿತ್ಯ, ವ್ಯಾಕರಣ, ತತ್ತ್ವಶಾಸ್ತ್ರ ಮತ್ತು ಶಸ್ತ್ರಾಸ್ತ್ರಗಳ ಬಳಕೆಯಲ್ಲಿ ಪರಿಣಿತರಾದ ನಾಡಪ್ರಭು ಕೆಂಪೇಗೌಡರ ದೂರದೃಷ್ಟಿತ್ವ ಬಹು ದೊಡ್ಡದು. ಮೂಲ ಸೌಕರ್ಯ ಒದಗಿಸುವ ಜೊತೆಗೆ ಸುಸ್ಥಿರ ನಗರಾಡಳಿತಕ್ಕೆ ಹೆಚ್ಚು ಒತ್ತು ನೀಡಿದ್ದರು ಎಂದು ಹೇಳಿದರು.

ವಿಶ್ವನಾಥ ಹಂಡಿ, ಬಸವರಾಜ ತೇಲಿ, ಆನಂದ ಅರಕೇರಿ, ಅರವಿಂದ ಬಿರಾದಾರ, ಆನಂದ ಗಂಗನಳ್ಳಿ ಸೇರಿದಂತೆ ಅನೇಕ ಮಕ್ಕಳು ಭಾಗವಹಿಸಿದ್ದರು.

# ಕೇಂದ್ರ ರೈಲ್ವೆ- ಸೊಲ್ಲಾಪೂರ ವಿಭಾಗ

## ಪಂಢರಪುರ ಕ್ಷೇತ್ರದ ಆಷಾಢ ಏಕಾದಶಿ ಜಾತ್ರೆ; ಭಕ್ತರಿಗಾಗಿ ಹುಬ್ಬಳ್ಳಿ ಮತ್ತು ಪಂಢರಪುರ ಮಧ್ಯದಲ್ಲಿ ಜುಲೈ 1 ರಿಂದ 8 ರವರೆಗೆ ಹೆಚ್ಚುವರಿ ಕಾಯ್ದಿರಿಸದ ವಿಶೇಷ ರೈಲುಗಳು

ಧಾರವಾಡ : ಪಂಢರಪುರ ಕ್ಷೇತ್ರದಲ್ಲಿ ನಡೆಯುವ ಆಷಾಢ ಏಕಾದಶಿ ಜಾತ್ರೆಯಲ್ಲಿ ಪಾಲ್ಗೋಳ್ಳುವ ಯಾತ್ರಾರ್ಥಿಗಳಿಗೆ ಅನುಕೂಲಕರ ಪ್ರಯಾಣವನ್ನು ಕಲ್ಪಿಸಲು ಭಾರತೀಯ ರೈಲ್ವೆಯು ಕರ್ನಾಟಕದ ಹುಬ್ಬಳ್ಳಿ ಮತ್ತು ಮಹಾರಾಷ್ಟ್ರದ ಪಂಢರಪುರ ನಡುವೆ 14 ಹೆಚ್ಚುವರಿ ಕಾಯ್ದಿರಿಸದ ವಿಶೇಷ ರೈಲುಗಳನ್ನು ಜುಲೈ 1 ರಿಂದ 8 ರವರೆಗೆ (ಜುಲೈ 4 ರಂದು ಹೊರತುಪಡಿಸಿ) ಹೊರಡಿಸಲಿದೆ ಎಂದು ಕೇಂದ್ರ ರೈಲ್ವೆಯ ಸೊಲ್ಲಾಪೂರ ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಹಾರಾಷ್ಟ್ರದ ಶ್ರೀಕ್ಷೇತ್ರ ಪಂಢರಪುರದ ಆಷಾಢ ಏಕಾದಶಿ ಜಾತ್ರೆಗೆ ಆಗಮಿಸುವ ಉತ್ತರ ಕರ್ನಾಟಕದ ಭಕ್ತರಿಗೆ ಅನುಕೂಲವಾಗಲು ಮತ್ತು ಸುಗಮ ಪ್ರಯಾಣ–ಕ್ಕೆ ಸಹಾಯಕವಾಗಲು ಕಾಯ್ದಿರಿಸದ 14 ವಿಶೇಷ ರೈಲುಗಳನ್ನು ಸಂಚ–ರಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಹುಬ್ಬಳ್ಳಿ–ಪಂಢರಪುರ ಅನ್‌ಸರ್ವ್ಡ್ ಸ್ಪೆಷಲ್ (14 ಟ್ರಿಪ್‌ಗಳು): ರೈಲು ಸಂಖ್ಯೆ 07313 ಬುಕ್ ಮಾಡದ ವಿಶೇಷ ರೈಲು ಜುಲೈ 1 ರಿಂದ ಜುಲೈ 8, 2025 ರವರೆಗೆ (ಜುಲೈ 4 ಹೊರತುಪಡಿಸಿ) ಬೆಳಿಗ್ಗೆ 5:10 ಕ್ಕೆ ಹುಬ್ಬಳ್ಳಿಯಿಂದ ಹೊರಟು ಅದೇ ದಿನ ಸಂಜೆ 4 ಕ್ಕೆ ಪಂಢರಪುರ ತಲುಪಲಿದೆ. (7 ಪ್ರವಾಸಗಳು) ರೈಲು ಸಂಖ್ಯೆ: 07314 ಕಾಯ್ದಿರಿಸದ ವಿಶೇಷ ರೈಲು ಜುಲೈ 1 ರಿಂದ ಜುಲೈ 8, 2025 ರವರೆಗೆ (ಜುಲೈ 4 ಹೊರತುಪಡಿಸಿ) ಸಂಜೆ 6 ಗಂಟೆಗೆ ಪಂಢರಪುರದಿಂದ ಹೊರಟು ಮರುದಿನ (ಬೆಳಿಗ್ಗೆ) 4 ಗಂಟೆಗೆ ಹುಬ್ಬಳ್ಳಿಯನ್ನು ತಲುಪುತ್ತದೆ. (7 ಪ್ರವಾಸಗಳು)

ನಿಲುಗಡೆಗಳು: ಧಾರವಾಡ, ಅಳ್ನಾವರ, ಲೋಂಡಾ, ಖಾನಾಪುರ, ದೇಸೂರು, ಬೆಳಗಾವಿ, ಪಚ್ಛಾಪುರ, ಗೋಕಾಕ ರಸ್ತೆ, ಘಟಪ್ರಭಾ, ಚಿಕ್ಕೋಡಿ ರಸ್ತೆ, ರಾಯಬಾಗ, ಚಿಂಚಲಿ, ಕುಡಚಿ, ಉಗಾರ ಖುರ್ದ, ಶೇಡಬಾಳ, ವಿಜಯನಗರ, ಮೀರಜ್, ಅರಗ, ಧಲಗಾಂವ, ಜಾತ್ ರಸ್ತೆ, ವಾಸುದ್ ಮತ್ತು ಸಂಗೋಳ.

ಸಂಯೋಜನೆ: 8 ಸಾಮಾನ್ಯ ದ್ವಿತೀಯ ದರ್ಜೆ, ಸ್ಲೀಪರ್ ವರ್ಗ ಮತ್ತು 2 ಲಗೇಜ್ ಕಮ್ ಗಾರ್ಡ್‌ನ ಬ್ರೇಕ್ ವ್ಯಾನ್‌ಗಳು. (10 ಬೋಗಿಗಳು)

ಟಿಕೆಟಿಂಗ್: ಕಾಯ್ದಿರಿಸದ ಬೋಗಿಗಳ ಟಿಕೆಟ್‌ಗಳನ್ನು ನಿಲ್ದಾಣಗಳಲ್ಲಿನ ಬುಕಿಂಗ್ ಕೌಂಟರ್‌ಗಳ ಮೂಲಕ ಮತ್ತು ಯುಟಿಎಸ್ ಅಪ್ಲಿಕೇಶನ್ ಮೂಲಕವೂ ಬುಕ್ ಮಾಡಬಹುದು.

ಈ ವಿಶೇಷ ರೈಲುಗಳ ವಿವರವಾದ ಸಮಯ ಮತ್ತು ನಿಲುಗಡೆಗಳಿಗಾಗಿ, ದಯವಿಟ್ಟು **www.enquiry.indianrail.gov.in** ಗೆ ಭೇಟಿ ನೀಡಿ ಅಥವಾ **NTES** ಅಪ್ಲಿಕೇಶನ್ ಡೌನ್‌ಲೋಡ್ ಮಾಡಬಹುದು ಎಂದು ಭಾರತೀಯ ರೈಲ್ವೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

# ಬಸ್ ತಂಗುದಾಣ ನಿರ್ಮಾಣ - ಚರಂಡಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದ ಸರ್ವೋತ್ತಮ ಜಾರಕಿಹೊಳಿ



ಹಳ್ಳೂರ 26.ಗ್ರಾಮದ ಅಭಿವೃದ್ಧಿಗೆ ಆದ್ಯತೆ ನೀಡಿ ಎಲ್ಲರೂ ಒಗ್ಗಟ್ಟಾಗಿ ಕೆಲಸ ಕಾರ್ಯ ಮಾಡಿ ಗ್ರಾಮದ ಶ್ರೇಯೋಭಿವೃದ್ಧಿಗೆ ಶ್ರಮಿಸೋಣ ಎಂದು ಕಾಮಗಾ–ರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿದ ಯುವ ನಾಯಕ ಸರ್ವೋತ್ತಮ ಜಾರಕಿಹೋಳಿ ಹೇಳಿದರು.

ಅವರು ಗ್ರಾಮದಲ್ಲಿ ,ನರೇಗಾ ಯೋಜನೆಯಲ್ಲಿ (ಜಿ ಡಬ್ಲ್ಯೂ ಎಂ) ರೂ 2.24 ಕೋಟಿ ಚರಂಡಿ ಕಾಮಗಾ–ರಿಗಳಿಗೆ ಹಾಗೂ ಅರಬಾಂವಿ ಶಾಸಕರಾದ ಭಾಲಚಂದ್ರ ಜಾರಕಿಹೋಳಿ ಅವರ ಅನುದಾನದ ಯೋಜನೆಯಲ್ಲಿ ಬಸ್ ತಂಗುದಾಣ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ಈ ಸಮಯದಲ್ಲಿ ಗ್ರಾಂ ಪಂಚಾಯತ್ ಅಧ್ಯಕ್ಷ ನೀಲವ್ವ ಹೊಸಟ್ಟಿ. ಉಪಾದ್ಯಕ್ಷ ಜಯಶ್ರೀ ಮಿರ್ಜಿ. ಮಾಜಿ ಜಿ ಪಂ ಸದಸ್ಯ ಭೀಮಶಿ ಮಗದುಮ . ಮಾಜಿ ಗ್ರಾಂ ಪ ಅಧ್ಯಕ್ಷ ಲಕ್ಷ್ಮಣ ಕತ್ತಿ. ಶಾಸಕರ ಆಪ್ತ ಸಹಾಯಕ ಅಬ್ದುಲ ಮಿರ್ಜಾ ನಾಯ್ಕ. ಮುಪ್ಪಯ್ಯ ಹಿಪ್ಪರಗಿ. ಹನಮಂತ ತೇರದಾಳ. ಅಡಿವೆಪ್ಪ ಪಾಲಬಾಂವಿ.ಯಮನಪ್ಪ ನಿಡೋನಿ .ಮಹಾವೀರ ಛಬ್ಬಿ.ಮಾದೇವ ಹೊಸಟ್ಟಿ. ಕುಮಾರ ಲೋಕನ್ನವರ. ಅಯ್ಯಪ್ಪ ಹಿರೇಮಠ.ಶ್ರೀಶೈಲ ಬಾಗೋಡಿ.ಮುರಿಗೆಪ್ಪ ಮಾಲಗಾರ.ಬಸವರಾಜ್ ಲೋಕನ್ನವರ. ಪ್ರದೀಪ್ ಪಾಲಬಾಂವಿ. ಲಕ್ಷ್ಮಣ ಛಬ್ಬಿ. ಭೀಮಶಿ ಡಬ್ಬನ್ನವರ. ಶ್ರೀಶೈಲ ಲೋಕನ್ನವರ. ಪ್ರಕಾಶ ಕಾಂಬಳೆ. ಶಿವಪ್ಪ ಅಟ್ಟಿಮಟ್ಟಿ. ಸಿದ್ದಣ್ಣ ದುರದುಂಡಿ.ಇಂಜಿನಿಯರ ವಿಠ್ಠಲ ಬೋರನ್ನವರ. ಕಾರ್ಯದರ್ಶಿ ಶಿವಾನಂದ್ ಸಂಪಗಾರ. ಮಹಾಂತೇಶ ಸಂತಿ. ಮಹಾಂತೇಶ ಕುಂದರಗಿ ಸೇರಿದಂತೆ ಗ್ರಾಂ ಪ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

# ಬಡವರ ಮನೆ ನೀಡಲು ಹಣ ಪಡೆಯುತ್ತಿರುವ ಸರ್ಕಾರ ತೊಲಗಬೇಕು



ಬೆಳಗಾವಿ: ಬಡವರ ಮನೆ ಹಂಚಿಕೆಗೆ ಹಣ ಪಡೆಯುತ್ತಿರುವ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ವಸತಿ ಸಚಿವ ಜಮೀರ್ ಅಹಮ್ಮದ್ ಅವರ ರಾಜೀನಾಮೆಗೆ ನೀಡಿ ಮನೆಗೆ ಹೋಗಬೇಕು. ಪ್ರಸಕ್ತ ಕಾಂಗ್ರೆಸ್ ಸರ್ಕಾರ ಅತೀ ಭ್ರಷ್ಟ ಸರ್ಕಾರ ಅಗಿದ್ದು, ಕಾಂಗ್ರೆಸ್ ಶಾಸಕರೇ ನೇರವಾಗಿ ಆರೋಪ ಮಾಡಿದ್ದು ಅದಕ್ಕಾಗಿ ಬಡವರ ರಕ್ತ ಹಿರುತ್ತಿರುವ ಸರ್ಕಾರಕ್ಕೆ ಅಧಿಕಾರದಲ್ಲಿ ಮುಂದುವರೆಯುವ ಯಾವುದೇ ನೈತಿಕ ಹಕ್ಕು ಇಲ್ಲಾ ಎಂದು ಬಿಜೆಪಿ ಜಿಲ್ಲಾಧ್ಯಕ್ಷರಾದ ಸುಭಾಷ್ ಪಾಟೀಲ ಹೇಳಿದರು.

ಅವರು ಶುಕ್ರವಾರದಂದು ರಾಣಿ ಚೆನ್ನಮ್ಮ ವೃತ್ತದಿಂದ ಪ್ರತಿಭಟನೆಯಲ್ಲಿ ಮಾತನಾಡಿದರು. ಚನ್ನಮ ಸರ್ಕಲ್ ಮೂಲಕ ಜಿಲ್ಲಾ ಪಂಚಾಯತ್ ಕಚೇರಿಗೆ ಮುತ್ತಿಗೆ ಹಾಕುವ ಸಂದರ್ಭದಲ್ಲಿ ಕಚೇರಿ ಮುಂದೆ ಬಿಜೆಪಿ ಕಾರ್ಯಕರ್ತರನ್ನು ಪೋಲಿಸರು ಬಂಧಿಸಿದರು. ಈ ಸಂದರ್ಭದಲ್ಲಿ ಮಹಾನಗರ ಜಿಲ್ಲಾಧ್ಯಕ್ಷರಾದ ಗೀತಾ ಸುತಾರ,ಮುಖಂಡ ಸಂಕಲ್ಪ ಶೆಟ್ಟರ , ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಂದೀಪ ದೇಶಪಾಂಡೆ, ಮಲ್ಲಿಕಾರ್ಜುನ ಮಾದಮ್ಮನವರ, ಧನಶ್ರೀ ದೇಸಾಯಿ, ಮಹಿಳಾ ಮೋರ್ಚಾ ರಾಜ್ಯ ಕಾರ್ಯದರ್ಶಿ ಸೋನಾಲಿ ಸರ್ನೋಬತ್, ಜಿಲ್ಲಾ ಉಪಾಧ್ಯಕ್ಷ ಪ್ರಮೋದ್ ಕೋಚೇರಿ, ವಿನಯ ಕದಂ,ಮಾಧ್ಯಮ ಪ್ರಮುಖರಾದ ಸಚಿನ್ ಕಡಿ, ಹನುಮಂತ ಕೊಂಗಾಲಿ, ಎಸ್ ಸಿ ಮೋರ್ಚಾ ಜಿಲ್ಲಾಧ್ಯಕ್ಷ ಯಲ್ಲೇಶ ಕೊಲಕಾರ,ಜಿಲ್ಲಾ ಕೋಶಾಧ್ಯಕ್ಷ ಸಂತೋಷ ದೇಶನೂರ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಹಾಂತೇಶ ಚಿನ್ನಪ್ಪಗೌಡ್ರ, ಸಾಮಾಜಿಕ ಜಾಲತಾಣ ಸಹ ಸಂಚಾಲಕ ಮನೋಜ ಪಾಟೀಲ, ಧನಂಜಯ ಜಾಧವ, ಪ್ರಶಾಂತ ಅಮ್ಮಿನಭಾವಿ, ಶ್ರೀಕರ ಕುಲಕರ್ಣಿ,ಬಸವರಾಜ ಸಾಣಿಕೊಪ್ಪ,ಜ್ಯೋತಿ ಶೆಟ್ಟಿ, ಶ್ವೇತಾ ಜಗದಾಳೆ ಹಾಗೂ ಪ್ರಮುಖ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೈಗೆಟಕುವ ದರದ 4-ಚಕ್ರದ ಮಿನಿ-ಟ್ರಕ್ ಏಸ್ ಪ್ರೋ ಅನ್ನು ಬಿಡುಗಡೆ ಮಾಡಿದ ಟಾಟಾ ಮೋಟಾರ್ಸ್




ಬೆಳಗಾವಿ, 27 ಜೂನ್ 2025: ಭಾರತದ ಅತಿ–ದೊಡ್ಡ ವಾಣಿಜ್ಯ ವಾಹನ ತಯಾರಕರಾದ ಟಾಟಾ ಮೋಟಾರ್ಸ್, ಸರಕು ಸಾಗಣೆ ವಿಭಾಗದಲ್ಲಿ ಹೊಸ ಅಧ್ಯಾಯ ಪ್ರಾರಂಭಿಸಲು 4 ಚಕ್ರದ ಮಿನಿ ಟ್ರಕ್ ಏಸ್ ಪ್ರೋ ಅನ್ನು ಬಿಡುಗಡೆ ಮಾಡಿದೆ.ಕೇವಲ ?ಫ.99 ಲಕ್ಷದಿಂದ ಆರಂಭವಾಗುವ ಅತ್ಯಂತ ಕೈಗೆಟಕುವ ಬೆಲೆಯೊಂದಿಗೆ, ಟಾಟಾ ಏಸ್ ಪ್ರೋ ಭಾರತದ ಅತ್ಯಂತ ಕೈಗೆಟಕುವ ನಾಲ್ಕು–ಚಕ್ರದ ಮಿನಿ ಟ್ರಕ್ ಆಗಿದ್ದು, ಅಸಾಧಾರಣ ದಕ್ಷತೆ, ಬಹುಮುಖತೆ ಮತ್ತು ಉನ್ನತ ಮೌಲ್ಯವನ್ನು ನೀಡುತ್ತದೆ.

ಹೊಸ ತರಂಗದ ಉದ್ಯಮಿಗಳನ್ನು ಸಶಕ್ತಿಕರಣಗೊಳಿಸಲು ವಿನ್ಯಾಸಗೊಳಿಸಲಾದ ಟಾಟಾ ಏಸ್ ಪ್ರೋ, ಪೆಟ್ರೋಲ್, ಬೈ–ಫ್ಯೂಯಲ್ (ಸಿ ಎನ್ ಜಿ + ಪೆಟ್ರೋಲ್), ಮತ್ತು ಎಲೆಕ್ಟ್ರಿಕ್ ರೂಪಾಂತರಗಳಲ್ಲಿ ಲಭ್ಯವಿದೆ ? ಗ್ರಾಹಕರಿಗೆ ತಮ್ಮ ವ್ಯಾಪಾರದ ಅಗತ್ಯಗಳಿಗೆ ಸೂಕ್ತವಾದ ವಾಹನವನ್ನು ಆಯ್ಕೆ ಮಾಡಲು ಸೌಲಭ್ಯವನ್ನು ಒದಗಿಸುತ್ತದೆ.

ಏಸ್ ಪ್ರೋನ ಬಿಡುಗಡೆ ಕುರಿತು, ಟಾಟಾ ಮೋಟಾರ್ಸ್ನ ಕಾರ್ಯನಿರ್ವಾಹಕ ನಿರ್ದೇಶಕ ಶ್ರೀ ಗಿರೀಶ್ ವಾಘ್ ಅವರು, "ಟಾಟಾ ಏಸ್ನ ಬಿಡುಗಡೆಯು ಭಾರತದಲ್ಲಿ ಸರಕು ಸಾಗಣೆ ವಿಭಾಗದಲ್ಲಿ ಕ್ರಾಂತಿಯನ್ನು ತಂದಿತು. ಕಳೆದ ಎರಡು ದಶಕಗಳಲ್ಲಿ, ಇದು 25 ಲಕ್ಷಕ್ಕೂ ಹೆಚ್ಚು ಉದ್ಯಮಿಗಳಿಗೆ ಸಶಕ್ತಿಕರಣಗೊಳಿಸಿ, ಪ್ರಗತಿ ಮತ್ತು ಸಾಧ್ಯತೆಯ ಸಂಕೇತವಾಯಿತು. –ಹೊಸ ಟಾಟಾ ಏಸ್ ಪ್ರೋನೊಂದಿಗೆ, ನಾವು ಹೊಸ ತಲೆಮಾರಿನ ಕನಸುಗಾರ–ರಿಗಾಗಿ ಈ ಪರಂಪರೆಯನ್ನು ನವೀಕೃತ ಉದ್ದೇಶದೊಂದಿಗೆ ಮುಂದುವರೆಸುತ್ತಿದ್ದೇವೆ. ಸ್ಥಿರತೆ, ಸುರಕ್ಷತೆ ಮತ್ತು ಲಾಭದಾಯಕತೆಗಾಗಿ ವಿನ್ಯಾಸಗೊಳಿಸಲಾದ ಏಸ್ ಪ್ರೋ, ತಮ್ಮ ಭವಿಷ್ಯವನ್ನು ತಾವೇ ತೆಗೆದುಕೊಳ್ಳಲು ಸಿದ್ಧರಿರುವ ಆಕಾಂಕ್ಷಿಗಳ ಆಕಾಂಕ್ಷೆಗಳನ್ನು ಈಡೇರಿಸಲು ಹೆಚ್ಚಿನ ಗಳಿಕೆಯ ಸಾಮರ್ಥ್ಯವನ್ನು ಒದಗಿಸುತ್ತದೆ" ಎಂದು ಹೇಳಿದ್ದಾರೆ.

ಟಾಟಾ ಮೋಟಾರ್ಸ್ ವಾಣಿಜ್ಯ ವಾಹನಗಳ ವಿಭಾಗದ ಉಪಾಧ್ಯಕ್ಷ ಮತ್ತು ವ್ಯಾಪಾರ ಮುಖ್ಯಸ್ಥ **(SCVPU)** ಶ್ರೀ ಪಿನಾಕಿ ಹಲ್ದಾರ್ ಅವರು ಮಾತನಾಡಿ, "ಉದ್ದೇಶಿತ ಟಾಟಾ ಏಸ್ ಪ್ರೋವನ್ನು ಗ್ರಾಹಕರ ಒಳನೋಟಗಳನ್ನು ಪಡೆದು ಅಭಿವೃದ್ಧಿಪಡಿಸಲಾಗಿದೆ ಮತ್ತು ವಿವಿಧ ಅಗತ್ಯಾಗಳನ್ನು ಪೂರೈಸಲು ವಿನ್ಯಾಸಗೊಳಿಸಲಾಗಿದೆ.

ಇದು ವಿವಿಧ ಭೂಪ್ರದೇಶಗಳು ಮತ್ತು ಹವಾಮಾನ ಪರಿಸ್ಥಿತಿಗಳಲ್ಲಿ ಲಕ್ಷಾಂತರ ಕಿಲೋಮೀಟರ್ಗಳನ್ನು ಒಳಗೊಂಡು ಕಠಿಣ ಪರೀಕ್ಷೆಗೆ ಒಳಗಾಗಿದೆ. ಬಹು–ಇಂಧನ ಆಯ್ಕೆಗಳು, ಸುಲಭ ಕೈಗೆಟಕುವಿಕೆಯ ದರ ಮತ್ತು ವರ್ಧಿತ ಚಾಲನಾ ಸಾಮರ್ಥ್ಯದೊಂದಿಗೆ, ಏಸ್ ಪ್ರೋ ವಿವಿಧ ಬಳಕೆಯ ಸಂದರ್ಭಗಳಲ್ಲಿ ಉನ್ನತ ಮೌಲ್ಯವನ್ನು ನೀಡುತ್ತದೆ" ಎಂದು ಹೇಳಿದರು.

# ನಾಡಪ್ರಭು ಕೆಂಪೇಗೌಡರ 516ನೇ ಜಯಂತ್ಯುತ್ಸವ ಕಾರ್ಯಕ್ರಮ



ರಾಯಬಾಗ: ನಾಡಪ್ರಭು ಕೆಂಪೇಗೌಡರು ಕೇವಲ ಬೆಂಗಳೂರು ನಿರ್ಮಾತೃ ಅಷ್ಟೇ ಅಲ್ಲದೇ, ತಮ್ಮ ಪ್ರಜೆಗಳಿಗೆ ಸಕಲ ಸೌಲಭ್ಯ ನೀಡಿ, ಪ್ರಜೆಗಳ ರಕ್ಷಣೆಗೆ ಹೋರಾಡಿದ ಧೀಮಂತ ನಾಯಕ ಎಂದು ತಹಶೀಲ್ದಾರ ಸುರೇಶ ಮುಂಜೆ ಹೇಳಿದರು.

ಶುಕ್ರವಾರ ಪಟ್ಟಣದ ಮಹಾವೀರ ಶಾಲೆಯಲ್ಲಿ ತಾಲೂಕಾ ಆಡಳಿತದಿಂದ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 516ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜನರು ತಮ್ಮ ಬದುಕು ಕಟ್ಟಿಕೊಳ್ಳಲು ನೂರಾರು ಕೆರೆ, ಕಟ್ಟೆಗಳನ್ನು ನಿರ್ಮಿಸಿ ಯೋಜನಾಬದ್ಧವಾದ ನಗರ ನಿರ್ಮಿಸಿರುವ ಶ್ರೇಯಸ್ಸು ಹೊಂದಿದ್ದಾರೆ. ಸರ್ಕಾರ 2017 ರಿಂದ ಕೆಂಪೇಗೌಡರ ಜಯಂತಿಯನ್ನು ಆಚ-ರಿಸುತ್ತಿದೆ ಎಂದು ಹೇಳಿದರು.

ಆರ್.ವಿ.ಆರ್. ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಪಿ.ಎಮ್.ಭೆಂಡೆ ಅವರು ಮಾತನಾಡಿ, ಕನ್ನಡ ನಾಡಿಗೆ ಮತ್ತು ಬೆಂಗಳೂರಿಗೆ ಕೆಂಪೇಗೌಡರು ನೀಡಿದ ಕೊಡುಗೆ ಅತ್ಯಂತ ಸ್ಮರಣೀಯವಾಗಿದೆ. ಅವರ ಆದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಂಡು ಮುನ್ನಡೆಯಬೇಕಿದೆ ಎಂದರು.

ನಾಡಪ್ರಭು ಕೆಂಪೇಗೌಡರ ಜಯಂತಿ ಪ್ರಯುಕ್ತ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ತಾಲೂಕು ಆಡಳಿತದಿಂದ ಪ್ರಮಾಣ ಪತ್ರ ಮತ್ತು ಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ವೈದ್ಯಾಧಿಕಾರಿ ಡಾ. ಎಸ್.ಎಮ್.ಪಾಟೀಲ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ ಚಂದರಗಿ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ವಿನೋದ ಮಾವರಕರ, ಹಾಲಪ್ಪ ಪೂಜಾರಿ, ಕಲ್ಪನಾ ಕಾಂಬಳೆ, ಭಾರತಿ ಕಾಂಬಳೆ, ರಾಜು ಕುರಾಡೆ, ವಿನಾಯಕ ಭಾಟೆ ಹಾಗೂ ವಿದ್ಯಾರ್ಥಿಗಳು ಇದ್ದರು.

ತಾಲೂಕು ದೈಹಿಕ ಪರಿವೀಕ್ಷಕ ಎಮ್.ಪಿ.ಜಿರಗ್ಯಾಳ ಸ್ವಾಗತಿಸಿ, ನಿರೂಪಿಸಿದರು.

****

# ನಾಳೆ ರೋಟರಿ ಸಂಸ್ಥೆ ಪದಗ್ರಹಣ ಕಾರ್ಯಕ್ರಮ



ಜಮಖಂಡಿ: ರೋಟರಿ ಕ್ಲಬ್, ಇನ್ನರವ್ಹೀಲ್ ಸಂಸ್ಥೆಯ ಸನ್ 2025–26ನೇ ಸಾಲಿಗೆ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಜೂ.29 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಮುತ್ತೂರು ರಸ್ತೆಯ ಪಂಚಮಸಾಲಿ ಸಮುದಾಯ ಭವನದಲ್ಲಿ ನಡೆಯಲಿದೆ ಎಂದು ರೋಟರಿ ಅಶಿಷ್ಟಂಟ ಗರ್ವನರ ಆರ್.ಪಿ.ನ್ಯಾಮಗೌಡ ಹೇಳಿದರು.

ನಗರದ ವಿಜಯಪೂರ ರಸ್ತೆಯಲ್ಲಿರುವ ರೋಟರಿ ಸಂಸ್ಥೆ ಸಭಾಭವನದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪದಗ್ರಹಣ ಕಾರ್ಯಕ್ರಮದಲ್ಲಿ ಅಧಿಕಾರಿಯಾಗಿ ಬೆಳಗಾವಿಯ ಪಿಡಿಜಿ ಆನಂದ ಕುಲಕರ್ಣಿ, ಸಿಇಒ ಬಿಮ್ಸ ಬೆಳಗಾವಿಯ ಡಾ.ಸಿದ್ದು ಹುಲ್ಲೊಳಿ, ಡಾ. ರಾಜಶ್ರೀ ಕುಲಕರ್ಣಿ ಸಹಿತ ಇತರರು ಭಾಗವಹಿಸಲಿದ್ದಾರೆ ಎಂದರು.

ಸನ್ 2025–26ನೇ ಸಾಲಿಗೆ ನೂತನ ಅಧ್ಯಕ್ಷರಾಗಿ ರಾಜಶೇಖರ ಕೂವಳ್ಳಿ, ಕಾರ್ಯದರ್ಶಿಯಾಗಿ ಎಂ.ಎಚ್. ಕಡ್ಲಿಮಟ್ಟಿ, ಇನ್ನರವ್ಹಿಲ್ ಅಧ್ಯಕ್ಷರಾಗಿ ಗಿರಿಜಾ ಮೈತ್ರಿ, ಕಾರ್ಯದರ್ಶಿ ಮೇಘಾ ಮಹಾಬಳಶೆಟ್ಟಿ ಸಹಿತ ಪ್ರಸಕ್ತ ನೂತನ ಪದಾಧಿಕಾರಿಗಳ ಪದಗ್ರಹಣ ನಡೆಯಲಿದೆ. ರೋಟರಿ ಸೇವಾ ಸಂಸ್ಥೆಯಾಗಿದ್ದು ಪ್ರತಿವರ್ಷ ಅನೇಕ ಸಮಾಜ ಮುಖಿ ಸೇವೆಗಳನ್ನು ನೀಡುತ್ತಿದೆ. ಬರತಕ್ಕ ವರ್ಷದಲ್ಲಿ ತನ್ನ ಸೇವಾ ಕಾರ್ಯವನ್ನು ಮುಂದುವರೆಸಲಿದೆ ಎಂದರು.

ರೋಟರಿ ಅಧ್ಯಕ್ಷ ಕಿರಣಕುಮಾರ ದೇಸಾಯಿ ಮಾತನಾಡಿ ತಮ್ಮ ಅವಧಿಯಲ್ಲಿ ಕಡಪಟ್ಟಿ ಕ್ರಾಸ್ ಬಳಿ ಮಿನಿ ಬಸ್ ನಿಲ್ದಾಣ ನಿರ್ಮಿಸಲಾಗಿದೆ. ಡಯಾಲಿಸಸ್ ಕೇಂದ್ರ, ಆರೋಗ್ಯ ಶಿಬಿರಗಳು, ರಕ್ತತಪಾಸಣಾ ಶಿಬಿರಗಳನ್ನು ಏರ್ಪಡಿಸಲಾಗಿತ್ತು. ಎಲ್ಲರ ಸಹಕಾರದಿಂದ ಒಂದು ವರ್ಷದ ಅವಧಿ ಮುಕ್ತಾಯಗೊಂಡಿದೆ ಎಂದರು.

ನೂತನ ಅಧ್ಯಕ್ಷ ರಾಜಶೇಖರ ಕೊಹಳ್ಳಿ ಮಾತನಾಡಿ, ಸರಕಾರಿ ಬನಶಂಕರಿ ಪ್ರಾಥಮಿಕ ಶಾಲೆಯನ್ನು ದತ್ತು ಪಡೆದು ಅಗತ್ಯ ಮೂಲಭೂತ ಸೌಕರ್ಯ ಒದಗಿಸಲಾಗುವದು. ಡಾ.ಅಂಬೇಡ್ಕರ್ ವೃತ್ತದಲ್ಲಿ ಮಿನಿಬಸ್ ನಿಲ್ದಾಣದ ನವೀಕರಣ, ಕೃಷಿಯ ಬಗ್ಗೆ ರೈತರಿಗೆ ಮಾಹಿತಿ ಕಾರ್ಯಕ್ರಮ ಸೇರಿದಂತೆ ಇನ್ನೂ ಹಲವಾರು ಸಮಾಜ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವದು ಎಂದರು.

ಇನ್ನರವ್ಹಿಲ್ ಅಧ್ಯಕ್ಷರಾಗಿ ಗಿರಿಜಾ ಮೈತ್ರಿ, ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ರೋಟರಿ ಸದಸ್ಯರಾದ ಎಂ.ಎಚ್.ಕಡ್ಲಿಮಟ್ಟಿ, ಮೇಘಾ ಮಹಾಬಳಶೆಟ್ಟಿ, ಗೋಪಾಲಪ್ರಭು, ಬಸವರಾಜ ಬಳಗಾರ, ಎಸ್.ವೈ.ಬಿರಾದಾರ, ಬಸವರಾಜ ಆಲಗೂರ, ಸುಭಾಷ ಕಾಶೀದ ಸಹಿತ ಹಲವರು ಇದ್ದರು.

# ಬೇಸಿಕ್ ಲೈಫ್ ಸಪೋರ್ಟ್ -ಸಿಪಿಆರ್ ಬಗ್ಗೆ ತರಬೇತಿ ಕಾರ್ಯಾಗಾರ



ಗೋಕಾಕ: ಭಾರತೀಯ ವೈದ್ಯಕೀಯ ಸಂಘ ಗೋಕಾಕ ಶಾಖೆ ಮತ್ತು ಚಿರಾಯು ಕ್ರಿಟಿಕಲ್ ಕೇರ್ ಆಸ್ಪತ್ರೆಯ ಸಹಯೋಗದಲ್ಲಿ, ನಗರದ ವಿವಿಧ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನರ್ಸಿಂಗ್ ಸಿಬ್ಬಂದಿಗೆ ಬೇಸಿಕ್ ಲೈಫ್ ಸಪೋರ್ಟ್ ಮತ್ತು ಸಿಪಿಆರ್ ಬಗ್ಗೆ ತರಬೇತಿ ಕಾರ್ಯಾಗಾರವನ್ನು ಬುಧವಾರದಂದು ನಗರದ ಐಎಮ್ಎ ಹಾಲ್‌ನಲ್ಲಿ ಆಯೋಜಿಸಲಾಯಿತು.

ಈ ಕಾರ್ಯಾಗಾರದಲ್ಲಿ ವಿವಿಧ ಆಸ್ಪತ್ರೆಗಳಿಂದ ಒಟ್ಟು 64 ನರ್ಸಿಂಗ್ ಸಿಬ್ಬಂದಿ ಭಾಗವಹಿಸಿದ್ದರು. ಹೃದಯಾಘಾತ ಅಥವಾ ಪ್ರಜ್ಞೆ ತಪ್ಪಿದ ವ್ಯಕ್ತಿಗೆ ತ್ವ-ರಿತವಾಗಿ ಸಿಪಿಆರ್ ಮತ್ತು ಆಕ್ಸಿಜನ್ ನೀಡುವ ವಿಧಾನ, ಚೆಸ್ಟ್ ಕಂಪ್ರೆಶನ್ ಮಾಡುವ ತಂತ್ರ, ರೋಗಿಯನ್ನು ಜೀವಂತವಾಗಿ ಉಳಿಸುವ ತುರ್ತು ಕ್ರಮಗಳ ಬಗ್ಗೆ ಪ್ರಾಯೋಗಿಕ ತರಬೇತಿ ನೀಡಲಾಯಿತು. ಪ್ರತಿಯೊಬ್ಬರೂ ಅನುಕು ಗೊಂಬೆಗಳ ಸಹಾಯದಿಂದ ಈ ತಾಂತ್ರಿಕತೆಯನ್ನು ಅಭ್ಯಾಸ ಮಾಡಿದರು.

ಈ ಕಾರ್ಯಕ್ರಮವನ್ನು ಚಿರಾಯು ಕ್ರಿಟಿಕಲ್ ಕೇರ್ ತಂಡದ ಡಾ. ಪ್ರವೀಣ್ ಮೂಡಲಗಿ, ಡಾ. ವಿನಯ್ ಹುರಕಡ್ಲಿ ಹಾಗೂ ಡಾ. ಅಮೃತಾ ಗಾಡವಿ ನೇತೃತ್ವದಲ್ಲಿ ಯಶಸ್ವಿಯಾಗಿ ನಿರ್ವಹಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಾ. ಸಿದ್ದಣ್ಣ ಕಮತ್ ಅವರು ಮಾತನಾಡಿ, ಇಂತಹ ತರಬೇತಿಗಳು ಆರೋಗ್ಯ ಸೇವೆಯಲ್ಲಿ ತುರ್ತು ಪರಿಸ್ಥಿತಿಗಳನ್ನು ನಿರ್ವಹಿಸಲು ಎಲ್ಲ ಸಿಬ್ಬಂದಿಗೆ ಬಹುಮುಖ್ಯವಾಗಿದೆ. ಹೆಚ್ಚಿನ ಆಸ್ಪತ್ರೆಗಳಲ್ಲಿ ಈ ತರಬೇತಿಗಳನ್ನು ನೀಡಬೇಕು ಎಂದು ಸಲಹೆ ನೀಡಿದರು.

ಐಎಮ್ಎ ಗೋಕಾಕ ಶಾಖೆಯ ಕಾರ್ಯದರ್ಶಿ ಡಾ. ವಿಶ್ವನಾಥ್ ಶಿಂಧೋಳಿಮಠ ಮತ್ತು ಅಧ್ಯಕ್ಷರದ ಡಾ.ಕೆಂಪಣ್ಣ ಹಳೆಗೌಡರ ನೇತೃತ್ವದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು. ಆರೋಗ್ಯ ಜಾಗೃತಿಗಾಗಿ ಮಾಡಲಾದ ಈ ಕಾರ್ಯಾಗಾರವನ್ನು ಜನಸಾಮಾನ್ಯರು ಹಾಗೂ ಆರೋಗ್ಯ ವಲಯದ ವೈದ್ಯರು ಶ್ಲಾಘಿಸಿದರು.

# ದೇವರಗುಡ್ಡ ಗ್ರಾಮದ ಶ್ರೀ ಮಾಲತೇಶ ದೇವಸ್ಥಾನದ ಸಮಿತಿಗೆ ಸದಸ್ಯತ್ವಕ್ಕಾಗಿ ಸಾರ್ವಜನಿಕರಿಂದ ಅರ್ಜಿ ಆಹ್ವಾನ

ಧಾರವಾಡ : ಹಾವೇರಿ ಜಿಲ್ಲೆಯ ರಾಣೇಬೇನ್ನೂರು ತಾಲೂಕಿನ ದೇವರಗುಡ್ಡ ಗ್ರಾಮದ ಶ್ರೀ ಮಾಲತೇಶ ದೇವಸ್ಥಾನದ ಸಮಿತಿಗೆ ಮುಂದಿನ 5 ವರ್ಷಗಳ ಅವಧಿಯ ಸದಸ್ಯತ್ವದ ನೇಮಕಾತಿಗಾಗಿ ಅರ್ಹ ಅರ್ಜಿದಾರರಿಂದ ಅರ್ಜಿ ಅಹ್ವಾನಿಸಿದ್ದು, ಆಸಕ್ತಿಯುಳ್ಳವರು ಅಧಿಸೂಚನೆಯಲ್ಲಿ ಸೂಚಿಸಿದ್ದರ ಷರತ್ತುಗಳನ್ವಯ ತಮ್ಮ ವೈಯಕ್ತಿಕ ಮಾಹಿತಿಯನ್ನು ಜುಲೈ 5, 2025 ರೊಳಗಾಗಿ ದೇವಸ್ಥಾನದ ಆಡಳಿತಾಧಿಕಾರಿಗಳು ಆಗಿರುವ ಧಾರವಾಡ ಜಿಲ್ಲಾ ನ್ಯಾಯಾಲಯದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

ಅಧಿಸೂಚನೆಯ ಹೆಚ್ಚಿನ ಮಾಹಿತಿಗಾಗಿ ದೇವಸ್ಥಾನ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಮಾಲತೇಶ ದೇವಸ್ಥಾನ, ದೇವರಗುಡ್ಡ, ತಾಃ ರಾಣೇಬೆನ್ನೂರು, ಜಿಲ್ಲೆಃ ಹಾವೇರಿ ಇಲ್ಲಿಗೆ ಸಂಪರ್ಕಿಸಲು ದೇವಸ್ಥಾನದ ಆಡಳಿತ ಅಧಿಕಾರಿಗಳು ಆಗಿರುವ ಧಾರವಾಡ ಜಿಲ್ಲಾ ನ್ಯಾಯಾಲಯದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ಭಾರತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*****

# ಮಾದಕ ವಸ್ತುಗಳಿಗೆ ಮಾರುಹೋಗಿ ಅಮೂಲ್ಯವಾದ ಜೀವನ ಕಳೆದುಕೊಳ್ಳಬೇಡಿ : ನ್ಯಾಯಾಧೀಶ ಸಂದೀಪ ಪಾಟೀಲ

ಬೆಳಗಾವಿ : ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ ಅಂತರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಸದರಿ ಕಾರ್ಯಕ್ರಮವು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕೆ.ಎಲ್.ಇ ನರ್ಸಿಂಗ್ ಕಾಲೇಜ ಬೆಳಗಾವಿ ಹಾಗೂ ಕೇಂದ್ರ ಕಾರಾಗೃಹ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿ-ತ್ತು. ಉದ್ಘಾಟಕರಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಗೌ॥ ನ್ಯಾಯಾಧೀಶರಾದ ಶ್ರೀ. ಸಂದೀಪ ಪಾಟೀಲ ಆಗಮಿಸಿದ್ದರು. ಮುಖ್ಯ ಅತಿಥಿಗಳಾಗಿ ಕೆ.ಎಲ್.ಇ ನರ್ಸಿಂಗ್ ಕಾಲೇಜಿನ ಸಹಪ್ರಾಧ್ಯಾಪಕ ಸಂಗನಗೌಡರ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯಾಧಿಕಾರಿ ಡಾ॥ ಗೀತಾ ಕಾಂಬಳೆ ಆಗಮಿಸಿದ್ದರು ಅಧ್ಯಕ್ಷತೆಯನ್ನು ಕಾರಾಗೃಹದ ಪ್ರಭಾರಿ ಮುಖ್ಯಅಧೀಕ್ಷಕರಾದ ಶ್ರೀ. ವಿ.ಕೃಷ್ಣಮೂರ್ತಿ ವಹಿಸಿದ್ದರು. ಹಾಗೂ ಕಾರಾಗೃಹದ ಆಡಳಿತಾಧಿಕಾರಿಗಳಾದ ಶ್ರೀ. ಬಿ.ಎಸ್. ಪೂಜಾ-ರಿ,ಸಹಾಯಕ ಅಧೀಕ್ಷಕರಾದ ಶ್ರೀ. ಮಲ್ಲೀಕಾರ್ಜುನ ಕೊನ್ನೂರ ಹಾಗೂ ಮುಖ್ಯ ವೈದ್ಯಾಧಿಕಾರಿ ಡಾ॥ ಸಂಜಯ ಡುಮ್ಮಗೋಳ ಉಪಸ್ಥಿತರಿದ್ದರು.



ಕಾರ್ಯಕ್ರಮ ಉದ್ಘಾಟಿಸಿ ನ್ಯಾಯಾಧೀಶರಾದ ಶ್ರೀ. ಸಂದೀಪ ಪಾಟೀಲ ಮಾತನಾಡಿ, ಹುಟ್ಟಿನಿಂದ ಯಾವ ವ್ಯಕ್ತಿಯು ಕೆಟ್ಟ ಚಟಗಳಿಂದ ಹುಟ್ಟಿರುವುದಿಲ್ಲ. ಬೇರೆಯವರ ಅನುಕರನೆ, ಒತ್ತಾಯಕ್ಕೆ ಮನಿದು ದುಶ್ಚಟಗಳಿಗೆ ದಾಸರಾಗುತ್ತಿದ್ದೆವೆ. ಇಂದಿನ ಆಧುನಿಕ ಯುಗದಲ್ಲಿ ವಯಸ್ಸಿನ ಯಾವುದೆ ಇತಿ ಮಿತಿಗಳಿಲ್ಲದೆ ಅನೇಕ ಜನ ಮಾದಕ ವಸ್ತುಗಳಿಗೆ ದಾಸರಾಗಿತ್ತಿದ್ದಾರೆ. ಹೆಚ್ಚಾಗಿ ಇಂದಿನ ಯುವ ಪೀಳಿಗೆಯು ಇಂತಹ ದುಶ್ಚಟಗಳಿಗೆ ಒಳಗಾಗಿ ಕ್ಯಾನ್ಸರ ನಂತಹ ಮಾರನಾಂತಿಕ ರೋಗಕ್ಕೆ ತುತ್ತಾಗಿ ತಮ್ಮ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಸೃಷ್ಠಿಯ ಅತ್ಯಮೂಲ್ಯವಾದ ಕೊಡುಗೆ ಎಂದರೆ ನಮ್ಮ ದೇಹ. ಇದರ ಬಗ್ಗೆ ನಾವೆಲ್ಲರು ಕಾಳಜಿ ತೆಗೆದುಕೊಳ್ಳಬೇಕು ಕಾರಣ ಸಮಾಜದಲ್ಲಿ ಪೆಂಡಂಬೂತವಾಗಿ ಕಾಡುತ್ತಿರುವ ಮಾದಕ ವಸ್ತುಗಳ ಸೇವನೆಯನ್ನು ತ್ಯಜಿಸಿ ಯೋಗ, ದ್ಯಾನ, ಪ್ರಾಣಾಯಾಮ ದಂತಹ ಉತ್ತಮ ಚಟುವಟಿ-ಕೆಗಳಲ್ಲಿ ಭಾಗವಹಿಸಬೇಕು. ತಾವೆಲ್ಲ ಬಿಡುಗಡೆ ನಂತರ ಸಮಾಜದಲ್ಲಿ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಕುರಿತು ಅರಿವುಮೂಡಿಸಬೇಕು ಎಂದು ಹೇಳಿದರು.

ಡಾ॥ ಗೀತಾ ಕಾಂಬಳೆ ಮಾತನಾಡಿ 1987 ರಿಂದ ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆಯ ವಿರೋಧಿ ದಿನವನ್ನು ಆಚರಿಸಲಾಗುತ್ತಿದ್ದು ಜನ ಸಾಮಾನ್ಯರಲ್ಲಿ ಇದರ ಬಗ್ಗೆ ಅರಿವು ಮೂಡಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಶ್ರೀ. ವಿ. ಕೃಷ್ಣಮೂರ್ತಿ ಮಾತನಾಡಿದರು. ಕೆ.ಎಲ್.ಇ ಸಂಸ್ಥೆಯ ನರ್ಸಿಂಗ ಕಾಲೇಜಿನ ವಿದ್ಯಾರ್ಥಿಗಳು ಪ್ರದರ್ಶಿಸಿದ ಮಾದಕ ವಸ್ತುಗಳ ಸೇವನೆಯ ಕು-ರಿತಾದ ರೂಪಕ ಎಲ್ಲರ ಗಮನ ಸೆಳೆಯಿತು.

ವೇದಿಕೆಯಲ್ಲಿ ಮನೋರೊಗ ತಜ್ಞ ಡಾ॥ ಸರಸ್ವತಿ, ಡಾ॥ ಶಾಲದಾರ ಹಾಗೂ ಕಾರಾಗೃಹದ ಜೈಲರಗಳಾದ ಶ್ರೀ ರಾಜೇಶ, ಶ್ರೀ ಬಸವರಾಜ, ಶ್ರೀ ರಮೇಶ ಉಪಸ್ಥಿತರಿದ್ದರು. ಕಾರಾಗೃಹದ ಶಿಕ್ಷಕರಾದ ಶ್ರೀ ಶಶಿಕಾಂತ ಯಾದಗುಡೆ ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿದರು ಕುಮಾರಿ ಸಂದ್ಯಾ ವಂದಿಸಿದರು.

## ವಿದ್ಯುತ್ ಸಮಸ್ಯೆಗಳನ್ನು ಬಗೆಹರಿಸಲು ಶಾಖಾ ಕಛೇರಿ ಮಟ್ಟದಲ್ಲಿ ಗ್ರಾಹಕರ ಸಲಹಾ ಸಮಿತಿಯ ಸಭೆ

ಮುದ್ದೇಬಿಹಾಳ: ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ಹೆಸ್ಕಾಂ ಮುದ್ದೇಬಿಹಾಳ ಇವರ ಅಧ್ಯಕ್ಷತೆಯಲ್ಲಿ ಈ ಕೇಳಗೆ ತಿಳಿಸಿರುವ ದಿನಾಂಕದಂದು ಹುಲ್ಲೂರು ಜೂನ್ 30–6–2025,ತ ಂಗಡಗಿ,ಜುಲೈ 01–7–2025,ನಾಲತವಾಡ ಜುಲೈ2–7–2025 ರಂದು ಕಚೇರಿಯಲ್ಲಿ ಸಲಹಾ ಸಮೀತಿಯ ಸಭೆಯನ್ನು ಆಯೋಜಿಸಿದ್ದು ಕಾರಣ ಸಲಹಾ ಸಮೀತಿಯ ಎಲ್ಲಾ ಸದಸ್ಯರು ಹಾಗೂ ರೈತರು, ಸಾರ್ವಜನಿಕರು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬಗೆಹರಿಸಲು ಶಾಖಾ ಕಛೇರಿ ಮಟ್ಟದಲ್ಲಿ ಗ್ರಾಹಕರ ಸಲಹಾ ಸಮಿತಿಯ ಸಭೆ ಬೆಳಗ್ಗೆ 11.00 ಘಂಟೆಗೆ ತಪ್ಪದೆ ಬರಲು ಈ ಮೂಲಕ ಕೋರಲಾಗಿದೆ ಎಂದು ಹೆಸ್ಕಾಂ ಅಧಿಕಾರಿ ಅರ್ ಎನ್ ಹಾದಿಮನಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ ೨ರಿಂದ ೬ರವರೆಗೆ

### ತಾಳಿಕೋಟೆಯಲ್ಲಿ ಆಷಾಡ ಏಕಾದಶಿ ನಿಮಿತ್ಯ ಪ್ರವಚನ



ತಾಳಿಕೋಟೆ, ಆಷಾಡ ಏಕಾದಶಿ ಬಗ್ಗೆ ಯೋಚಿಸುವಾಗ ಪಂಡರಪುರ ವಾರಿ (ವಾರ್ಷಿಕ ತೀರ್ಥಯಾತ್ರೆ ) ನಮ್ಮ ಕಣ್ಣು ಮುಂದೆ ಬರುತ್ತದೆ. ವರ್ಷದಲ್ಲಿ ಬರುವಂತಹ ಎಲ್ಲಾ 24 ಏಕಾದಶಿಯಲ್ಲಿ ಹಿಂದು ಆಷಾಡ ಮಾಸದ (ಜೂನ-ಜುಲೈ) ಪ್ರಕಾಶಮಾನವಾದ 15 ದಿನಗಳ ( ಶುಕ್ಲಪಕ್ಷ) 11ನೇ ಚಂದ್ರಮಾನ ದಿನ (ಏಕಾದಶಿ) ಆಗಿರುವ ಈ ಏಕಾದಶಿಯು ಅತ್ಯಂತ ಮಹತ್ವದ್ದಾಗಿದೆ. ಈ ದಿನದಂದು ವ್ರತವನ್ನು (ಪ್ರತಿಜ್ಞೆ ಮಾಡಿದ ಧಾರ್ಮಿಕ ಆಚರಣೆ) ಆಚರಿಸುವುದರಿಂದ ಎಲ್ಲ ದೇವತೆಗಳ ಅನುಗ್ರಹ ದೊರೆಯುತ್ತದೆ ಎಂದು ಈ ಆಶಾಡ ಏಕಾದಶಿಯ ವ್ರತದ ಇತಿಹಾಸವನ್ನು ಭಕ್ತ ಸಮೂಹಕ್ಕೆ ಮನವರಿಕೆ ಮಾಡಲು ಹಾಗೂ ಭಕ್ತಿ ಮಾರ್ಗದತ್ತ ಕೊಡ್ಯೊಯ್ಯಲು ಪರಮ ಪೂಜ್ಯ ಶ್ರೀ ಸಿದ್ದರಾಮ ಶಿವಯೋಗಿಗಳು ರನ್ನಬೇಳಗಲಿ ಮುಧೋಳದ ಸಿದ್ಧಾರೂಡ ಮಠ ಶಿವೋಗಾಶ್ರಮದ ಶ್ರೀಗಳು ಆಗಮಿಸಿ ಪಂಡರಾಪೂರದ ಶ್ರೀ ವಿಠ್ಠಲ ರುಕುಮಾಯಿ ಅನುಗ್ರಹಕ್ಕಾಗಿ ಪ್ರವಚನವನ್ನು ತಾಳಿಕೋಟೆ ಶ್ರೀ ವಿಠ್ಠಲ ಮಂದಿರದಲ್ಲಿ ನೀಡಲಿದ್ದಾರೆ.

ಜುಲೈ 2ರಿಂದ ದಿನಾಂಕ 6ರವರೆಗೆ 5ದಿನಗಳ ಕಾಲ ಜರುಗಲಿರುವ ಈ ಪ್ರವಚನವನ್ನು ಶ್ರೀ ಸಿದ್ಧರಾಮ ಶಿವಯೋಗಿಗಳು ಪ್ರತಿನಿತ್ಯ ಸಾಯಂಕಾಲ 6ಗಂಟೆಯಿಂದ ಪ್ರಾರಂಭಿಸಿ 7 ಗಂಟೆಗೆ ಮುಕ್ತಾಯಗೋಳಿಸಲಿದ್ದಾರೆ.

ಪ್ರವಚನ ಪ್ರಾರಂಭದ ಮೊದಲನೇ ದಿನವಾದ ಜುಲೈ 2ರಂದು ಸಾಯಂಕಾಲ 7ಗಂಟೆಗೆ ಶ್ರೀ ಖಾಸ್ಗತೇಶ್ವರ ಮಠದ ಬಾಲಶಿವಯೋಗಿ ಶ್ರೀ ಸಿದ್ದಲಿಂಗ ದೇವರು ದೀಪ ಬೆಳಗಿಸುವುದರೊಂದಿಗೆ ಉದ್ಘಾಟಿಸಲಿದ್ದು ಈ ಸಮಯದಲ್ಲಿ ಖ್ಯಾತ ಜೋತಿಷ್ಯತಜ್ಞರಾದ ವೇ. ವಸಂತ ಜೋಷಿ ಹಾಗೂ ವೇಂಕಟೇಶ್ವರ ಪಾಠಶಾಲೆಯ ಅಧ್ಯಕ್ಷರಾದ ವೇ. ವೆಂಕಟೇಶ ಗ್ರಾಮಪುರೋಹಿತ ಅವರು ಉಪಸ್ಥಿತರಿರುವರು.

ಕಾರಣ ತಾಳಿಕೋಟೆಯ ಎಲ್ಲ ಸದ್ಭಕ್ತರು ಈ 5ದಿನಗಳವರೆಗೆ ನಡೆಯುವ ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಆಲಿಸಿ ಪಾಲಿಸಿ ಮಹಾಪ್ರಸಾದ ಸ್ವೀಕರಿಸಿ ಪುನಿತರಾಗಬೇಕೆಂದು ತಾಳಿಕೋಟೆಯ ಶ್ರೀ ವಿಠ್ಠಲ ಮಂದಿರ ಟ್ರಸ್ಟಿನ ಅಧ್ಯಕ್ಷರಾದ ಸಂಭಾಜಿ ವಾಡ್ಕರ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ವಿಷಾದ ಮಾದಕ ವಸ್ತುಗಳಿಗೆ ದಾಸರಾಗಬೇಡಿ



ಮುದ್ದೇಬಿಹಾಳ ನಶೆ ಅಥವಾ ಮತ್ತು ಭರಿಸುವ ವಸ್ತುಗಳತ್ತ ವಿದ್ಯಾರ್ಥಿಗಳು, ಯುವಜನತೆ ಕಣ್ಣೆತ್ತಿಯೂ ನೋಡಬಾರದು. ಮಾದಕ ವಸ್ತುಗಳಾದ ಗಾಂಜಾ, ಮಾವಾ ಆಫೀಮು ಇನ್ನಿತರ ಪದಾರ್ಥಗಳಿಗೆ ದಾಸರಾದರೆ ವಿದ್ಯಾರ್ಥಿ ಜೀವನ, ಯೌವ್ವನ ಸೇರಿ ಇಡೀ ಜೀವನವೇ ಹಾಳಾಗುತ್ತದೆ ಎಂದು ಸಿಪಿಐ ಮೆಹಮೂದ್ ಹೇಳಿದರು.

ಪಟ್ಟಣದ ಶ್ರೀ ವಿಜಯಮಹಾಂತೇಶ ಮಂಗಲ ಭವನದಲ್ಲಿ ಪೊಲೀಸ್ ಇಲಾಖೆ ನೇತೃತ್ವದಲ್ಲಿ, ತಾಲೂಕಾಡಳಿತ, ಪುರಸಭೆ ಸಹಯೋಗದಲ್ಲಿ ಗುರುವಾರ ಏರ್ಪಡಿಸಿದ್ದ ಮಾದಕ ವಸ್ತುಗಳ ದುರುಪಯೋಗ ಮತ್ತು ಸಾಗಣೆ ವಿರುದ್ಧ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ದುಶ್ಚಟಗಳು ಜೀವನವನ್ನೇ ಬಲಿ ತೆಗೆದುಕೊಳ್ಳುತ್ತವೆ. ವಿದ್ಯಾರ್ಥಿಗಳ ಸಾಮರ್ಥ್ಯವನ್ನೇ ಕಳೆಯುತ್ತವೆ. ಕೌಟುಂಬಿಕ ನೆಮ್ಮದಿ ಹಾಳುಗೆಡವುತ್ತವೆ. ಸಮಾಜದಲ್ಲಿ ಇಂಥವರಿಗೆ ಬೆಲೆ ಇಲ್ಲದಂತೆ ಮಾಡುತ್ತವೆ. ಇದರಿಂದ ತಪ್ಪಿಸಿಕೊಳ್ಳಲು ಇರುವ ಒಂದೇ ಮಾರ್ಗ ಎಂದರೆ ಯಾರೂ ವ್ಯಸನಗಳು ಆಕರ್ಷಿತರಾಗಬಾರದು. ಮಾದಕ ದ್ರವ್ಯ ನಿಷೇಧ ದಿನಾಚರಣೆಯ ಈ ದಿನದಂದು ಎಲ್ಲರೂ ಪ್ರತಿಜ್ಞೆ ಮಾಡಿ ವ್ಯಸನಗಳಿಂದ ದೂರ ಇರಬೇಕು. ಆರೋಗ್ಯ ಚನ್ನಾಗಿದ್ದರೆ ಮಾತ್ರ ಏನಾದರೂ ಸಾಧಿಸುವುದು ಸಾಧ್ಯ ಎನ್ನುವುದನ್ನು ಮನದಟ್ಟು ಮಾಡಿಕೊಂಡು ಮುನ್ನಡೆಯಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ್ ಬಲರಾಮ ಕಟ್ಟಿಮನಿ ಅವರ ಮಾತನಾಡಿ, ಸಾರ್ವಜನಿಕ ಸ್ಥಳಗಳಲ್ಲಿ ಪಾನ್ ಶಾಪ್ ಸೇರಿ ಇನ್ನಿತರ ಅಂಗಡಿಗಳಲ್ಲಿ ನಸೆ ತರಿಸುವ ವಸ್ತುಗಳ ಮಾರಾಟ ಕಂಡು ಬಂದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲು ಅವಕಾಶ ಇದೆ ಎಂದರು.

ಬಿಇಒ ಬಿ.ಎಸ್.ಸಾವಳಗಿ ಅವರು ಮಾತನಾಡಿ, ಯಾವುದೇ ಶಾಲೆ, ಕಾಲೇಜು ಆವರಣ, ಸುತ್ತಮುತ್ತ ತಂಬಾಕು ಮತ್ತು ತಂಬಾಕು ಉತ್ಪನ್ನ ಮಾರಾಟ ಮಾಡಿದರೆ ಅದು ಶಿಕ್ಷಾರ್ಹ ಅಪರಾಧವಾಗುತ್ತದೆ ಎಂದರು. ಮಾದಕ ವ್ಯಸನಗಳಿಂದ ದುಷ್ಪರಿಣಾಮಗಳ ಕು-ರಿತು ಆಗುವ ಡಾ ಮಂಜುನಾಥ ಮಸಳಿ, ಉಪನ್ಯಾಸಕ ಐ.ಬಿ.ಹಿರೇಮಠ ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಆರೋಗ್ಯಾ ಧಿಕಾರಿ ಡಾ? ಸತೀಶ ತಿವಾರಿ, ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಎಸ್.ಎಸ್. ಅಂಗಡಿ ಇದ್ದರು, ಅಕ್ಷರದಾಸೋಹ ಸಹಾಯಕನಿರ್ದೇಶಕ ಎಂ.ಎಂ.ಬೆಳಗಲ್ಲ ಸರ್ಕಾರಿ ಪ್ರೌಢಶಾಲೆ ಮುಖ್ಯಾಧ್ಯಾಪಕ ಎಂ. ಎಸ್.ಕವಡಿಮಟ್ಟಿ ಆರೋಗ್ಯ ಶಿಕ್ಷಣಾಧಿಕಾರಿ ಅನುಸೂಯಾ ತೇರದಾಳ ಇದ್ದರು. ಸಿಆರ್‌ಪಿ ಜಿ.ಎಚ್. ಚವ್ಹಾಣ ಸ್ವಾಗತಿಸಿದರು. ಶಿಕ್ಷಕ ಟಿ.ಡಿ.ಲಮಾಣಿ ಕಾರ್ಯಕ್ರಮ ನಿರ್ವಹಿಸಿದರು. ಇದಕ್ಕೂ ಮುನ್ನ ಪಟ್ಟಣದ ವಿವಿಧ ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳು ಶಿಕ್ಷಕರು, ಅಧಿಕಾರಿಗಳು, ಪೊಲೀಸರ ಮುಂದಾಳತ್ವದಲ್ಲಿ ಜಾಗೃತಿ ಜಾಥಾ ನಡೆಸಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜನಜಾಗೃತಿ ಮೂಡಿಸಿದರು.

# ರಾಮ ಕೃಷ್ಣ ಹರಿ ಅನ್ನುತ್ತಾ ಕೌಜಲಗಿ ಹಾಗೂ ಉಳವಿಯ ದಿಂಡಿ ಪಾದಯಾತ್ರೀಕರು



ಹಳ್ಳೂರ : ತಾಳ ತಂಬೂರಿ ಕೈಯಲ್ಲಿಡಿದು ರಾಮ ಕೃಷ್ಣ ಹರಿ ಶ್ರೀ ವಿಠ್ಠಲ ರುಕ್ಮಿಣಿ ದೇವರ ನಾಮಸ್ಮರಣೆ ವರ್ಣನೆ ಭಜನೆ ಮಾಡುತ್ತಾ ಮಳೆ ಬಿಸಿಲು ಲೆಕ್ಕಿಸದೆ ಚಂದ್ರಭಾಗ ನದಿ ದಡದಲ್ಲಿರುವ ಪಂಡರಪುರದ ಪಾಂಡುರಂಗನನ್ನು ಕಣ್ತುಂಬಿ ಸಿಕೊಳ್ಳಲು ಶ್ರೀ ಕ್ಷೇತ್ರ ಉಳವಿಯ ಶ್ರೀ ಚನ್ನಬಸವೇಶ್ವರ ದೇವಸ್ಥಾನದಿಂದ ಹಾಗೂ ಕೌಜಲಗಿ ದಿಂಡಿ ಬಕ್ತರು ನೂರಾರು ಕಿಲೋ ಮೀಟ-ರ್ ಪಾದಯಾತ್ರೆ ಮೂಲಕ ಪಂಡರಪುರಕ್ಕೆ ತೆರಳುವ ಭಕ್ತರ ದಂಡು ಈಗಾಗಲೇ ಬೆಳಗಾವಿ ಜಿಲ್ಲೆ ಹಾಗೂ ವಿವಿಧ ಕಡೆಗಳಿಂದ ತಮ್ಮ ಪಯಣವನ್ನು ಆರಂಭಿಸಿದ್ದಾರೆ.

ಹೌದು. ಜು.6ರಂದು ಆಷಾಡ ಏಕಾದಶಿಯ ದಿನ ಪುಣ್ಯ ಕ್ಷೇತ್ರ ಪಂಡರಪುರದಲ್ಲಿ ಅಪಾರವಾದ ಸಂಖ್ಯೆಯಲ್ಲಿ ಭಕ್ತರ ಜಾತ್ರೆಯೇ ಬಂದು ಸೇರುತ್ತದೆ. ಅಲ್ಲಿ ಬಂದು ಸೇರುವವರಲ್ಲಿ, ಶೇ.75ಕ್ಕೂ ಹೆಚ್ಚಿನವರು ಪಾಂಡುರಂಗನ ನಾಮಸ್ಮರಣೆ, ಭಜನೆಯೊದಿಗೆ ಪಾದಯಾತ್ರೆ ಮಾಡುತ್ತಾ ಬಂದು ಸೇರುವ ವಾರಕರಿಗಳು. ನಮ್ಮ ಉಡುಪಿಯ ಶ್ರೀಕೃಷ್ಣನೇ ಪಂಢರಪುರದಲ್ಲಿ ಪಾಂಡುರಂಗ ವಿಠಲನಾಗಿ ಇಟ್ಟಿಗೆ ಮೇಲೆ ನಿಂತಿದ್ದಾನೆ. ಆಷಾಡ ಏಕಾದಶಿಯ ದಿನ ಪಾಂಡುರಂಗ , ರುಕ್ಮಿಣಿ ದೇವರಿಗೆ ವಿಶೇಷ ಪೂಜೆ–ಕೈಂಕರ್ಯಗಳು ನಡೆಯುತ್ತವೆ. ಅಂದು ವಿಠಲನ ಪಾದಸ್ಪರ್ಶ ಮಾಡಿದರೆ ಎಲ್ಲಾ ಕಷ್ಟ ಕಾರ್ಪಣ್ಯಗಳು ಬಯಲಾಗುತ್ತವೆ.

ಪಾಪಕರ್ಮಗಳಿಗೂ ಮುಕ್ತಿ ಸಿಗುತ್ತದೆ ಎಂಬ ನಂಬಿಕೆಯೂ ಭಕ್ತರಲ್ಲಿದೆ.

ಭಕ್ತಿ ಪರವಶರಾಗುವ ಕ್ಷಣ ಕರ್ನಾಟಕದ ವಿವಿಧ ಮೂಲೆಗಳಿಂದಲೂ ವಾರಕರಿಗಳು, ವಿಠಲ ಭಕ್ತರ ದಂಡು ಈಗಾಗಲೇ ಆರಂಭಿಸಿದ್ದಾರೆ. ಆರಂಭವಾಗಿರುವ ಪಾದಯಾತ್ರೆಯನ್ನು ಜೂ. 16ರಿಂದಲೇ ವಾರಕರಿ ತೀರ್ಥಯಾತ್ರೆಯಲ್ಲಿ ಬೆಳಗಾವಿ ಜಿಲ್ಲೆ ಭಕ್ತರು ಮಾತ್ರವಲ್ಲದೇ ವಿಜಯಪುರ, ಬಾಗಲಕೋಟೆ, ಬೀದರ್, ಕಲಬುರಗಿ, ಧಾರವಾಡ, ಹಾವೇರಿ, ದಾವಣಗೆರೆ, ಗದಗ, ಕೊಪ್ಪಳ, ಬೀದರ್ ಜಿಲ್ಲೆಯ ಭಕ್ತರು ತಂಡೋಪತಂಡವಾಗಿ ಸಾಗುತ್ತಿದ್ದಾರೆ. ಜುಲೈ 5ಕ್ಕೆ ಪಂಢರಪುರ ತಲುಪುತ್ತಾರೆ. 6ರಂದು ಆಷಾಢ ಏಕಾದಶಿಯ ಜಾತ್ರೆ ಮುಗಿಸಿ, ವಾಪಸಾಗುತ್ತಾರೆ. ಪಾದಯಾತ್ರೆಯ ಮಾರ್ಗದ ಗ್ರಾಮಗಳಲ್ಲಿ ಭಕ್ತರಿಗೆ ಆಹಾರ, ವಾಸ್ತವ್ಯದ ವ್ಯವಸ್ಥೆಯನ್ನು ಗ್ರಾಮಸ್ಥರು ಸೇವಾ ಭಾವನೆಯಿಂದ ಮಾಡುತ್ತಾರೆ.

ತಂಡದಲ್ಲಿ ಒಂದಿಬ್ಬರು ವಿಠಲನಿಗೆ ಇಷ್ಟವಾಗುವ ತುಳಸಿಯನ್ನು ತಲೆ ಮೇಲೆ ಹೊತ್ತು ನಡೆಯುವುದು ವಾಡಿಕೆ. ಪಾದಯಾತ್ರೆ ಆರಂಭವಾಗಿ ಮುಗಿಯುವ ತನಕ ಎಲ್ಲರೂ ಒಬ್ಬೊಬ್ಬರಾಗಿ ಇದನ್ನು ಒಂದಿಷ್ಟು ದೂರ ಹೊತ್ತು ಸಾಗುತ್ತಾರೆ. ಹಲವರು ದಾನಿಗಳು ಹಣ್ಣು, ನೀರು ತಂಪು ಪಾನೀಯ, ರೊಟ್ಟಿ ಪಲ್ಯ ಹೀಗೆ ಆಹಾರವನ್ನು ಪೊಟ್ಟಣ ಕಟ್ಟಿ ಕೊಡುವುದು ಕೂಡಾ ಸಾಮಾನ್ಯ. ಅಂ-ದಹಾಗೆ ಕಳೆದ ವರ್ಷ ಮನೆಯವ ರೊಂದಿಗೆ ಪಾದಯಾತ್ರೆಯಲ್ಲಿ ಪಂಢರಾ ಪುರಕ್ಕೆ ತೆರಳಿ ದಾರಿ ತಪ್ಪಿಸಿಕೊಂಡಿದ್ದ ಶ್ವಾನವೊಂದು ಮೂರು ತಿಂಗಳ ಬಳಿಕ ಮನೆ ಹುಡುಕಿ ಮರಳಿ ಮಾಲೀಕನ ಬಳಿ ಬಂದಿದ್ದು ಎಲ್ಲೆಡೆ ಭಾರೀ ಸುದ್ದಿಯಾಗಿತ್ತು. ಅದು ಪವಾಡವೇ ಸರಿ. ಹಿರಿಯರ ಸೇವೆಗೆ ಸಜ್ಜು ಆಳಂದದಲ್ಲಿ ಪಾದಯಾತ್ರೆ ಮೂಲಕ ಬಂದು ಕಾಲು ನೋವಾಗಿದ್ದರೆ ಅಂತಹವರಿಗೆ ಶಾಲಾ-ಕಾಲೇಜು ಮಕ್ಕಳು ವ್ಯವಸ್ಥೆ ಮಾಡುವ ಪದ್ಧತಿ ಇದೆ. ದೂರ ದೂರದಿಂದ ನೂರಾರು ಕಿಲೋ ಮೀಟರ್ ಕಾಲ್ನಡಿಗೆಯಲ್ಲಿ ಇಷ್ಟದೇವರ ಕಾಣಲು ಬರುವವರ ಆರೈಕೆ ಮಾಡುವುದನ್ನೇ ಸೇವೆಯೆಂದು ತಿಳಿದುಕೊಂಡು ಕೆಲ ಸೇವಾ ತಂಡಗಳು ಈ ಆರೈಕೆಯನ್ನು ಮಾಡುತ್ತವೆ. ಈ ಭಕ್ತರಿಗೆ ದಾರಿಯಲ್ಲಿ ಜನ ಊಟತಿಂಡಿ ಒದಗಿಸುವುದು ಎಲ್ಲವನ್ನೂ ನೋಡಿದಾಗ ಭಕ್ತಿರಸದ ಮಹಾಪ್ರವಾಹವೇ ಆ ಮೆರವಣಿಗೆಯ ರೂಪದಲ್ಲಿ ಹರಿದು ಹೋಗುತ್ತಿದೆಯೇನೋ ಎಂಬಂತೆ ಭಾಸವಾಗದಿರದು. ಮಕ್ಕಳು ಮಹಿಳೆಯರು, ಮುದುಕರು ಯಾರೂ ವಯಸ್ಸನ್ನು ಗಮನಿಸದೆ ಪಾದಯಾತ್ರೆ ಮೂಲಕ ಭಕ್ತಿಪರವಶರಾಗುತ್ತಾರೆ.

# ಅತಿವೃಷ್ಟಿ ಮತ್ತು ಪ್ರವಾಹ ನಿರ್ವಹಣೆಯ ತಾಲೂಕು ಮಟ್ಟದ ಅನುಷ್ಠಾನ ಅಧಿಕಾರಿಗಳ, ಪಿಡಿಒ -ನೋಡೆಲ್ ಅಧಿಕಾರಿಗಳ ಸಭೆ



ಯರಗಟ್ಟಿ: ಸಂಭವನೀಯ ಪ್ರವಾಹ ಸಮಯದಲ್ಲಿ ಪಿಡಿಒಗಳು ಮತ್ತು ನೋಡೆಲ್ ಅಧಿಕಾರಿಗಳು ತಮ್ಮಲ್ಲಿರುವ ಮೊಬೈಲ್ ಸ್ವಿಚ್ ಆಫ್ ಮಾಡಬಾರದು ಮತ್ತು ಸ್ಥಳೀಯರು ಹಾಗೂ ತಾಲೂಕು ಆಡಳಿತ ಜೊತೆ ನಿರಂತರ ಸಂಪರ್ಕ ಹೊಂದಿ ಪ್ರವಾಹ ಪೀಡಿತರಿಗೆ ತಕ್ಷಣ ಸಹಾಯ ಮಾಡಬೇಕು ಎಂದು ತಹಶೀಲ್ದಾರ ಎಂ. ವ್ಹಿ. ಗುಂಡಪ್ಪಗೋಳ ಹೇಳಿದರು.

ಸ್ಥಳೀಯ ತಹಸೀಲ್ದಾರ ಕಚೇರಿಯಲ್ಲಿ ನಡೆದ ಅತಿವೃಷ್ಟಿ ಮತ್ತು ಪ್ರವಾಹ ನಿರ್ವಹಣೆಯ ತಾಲೂಕು ಮಟ್ಟದ ಅನುಷ್ಠಾನ ಅಧಿಕಾ-ರಿಗಳ, ಪಿಡಿಒ ಮತ್ತು ನೋಡೆಲ್ ಅಧಿಕಾ-ರಿಗಳ ಸಭೆಯಲ್ಲಿ ಮಾತನಾಡಿದ ಅವರು, ಶಿಥಿಲಾವಸ್ಥೆಯಲ್ಲಿರುವ ಮನೆಗಳನ್ನು ಹುಡುಕಿ, ವಾಸಿಸುವವರಿಗೆ ತಿಳಿವಳಿಕೆ ಹೇಳಿ, ಅಲ್ಲಿರುವವರನ್ನು ಸುರಕ್ಷಿತ ಸ್ಥಳಕ್ಕೆ ಕರೆದ್ಯೋಯಲು ಕ್ರಮ ವಹಿಸಬೇಕು ಎಂದರು.

ಪ್ರವಾಹ ಪೀಡಿತ ಜನರಿಗೆ ಅಗತ್ಯ ಕಾಳಜಿ ಕೇಂದ್ರ ತೆರೆಯಬೇಕು. ಮಳೆಗಾಳದಲ್ಲಿ ವಿದ್ಯುತ್ ಕಂಬಗಳು ಬೀಳುವ ಸಾಧ್ಯತೆಯಿದ್ದು ವಿದ್ಯುತ್ ಪ್ರವಹಿಸುವ ತಂತಿ ಹರಿದು ಬಿದ್ದು ಜನರ ಜೀವಕ್ಕೆ ಅಪಾಯವಾಗಬಹುದು. ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಗಮನಹರಿಸಬೇಕು. ಸೇತುವೆಗಳು ಮುಳುಗಿ ತೊಂದರೆಯಾದಾಗ ಪರ್ಯಾಯ ಮಾರ್ಗದ ಮೂಲಕ ಸಂಚರಿಸಲು ಸೂಚಿಸಬೇಕು. ಜನರಿಗೆ ಕುಡಿಯಲು ಕಲುಷಿತ ನೀರು ಪೂರೈಕೆಯಾಗದಂತೆ ನೋಡಿಕೊಂಡು ಶುದ್ಧ ನೀರು ಸಿಗುವಂತೆ ನೋಡಿಕೊಳ್ಳಬೇಕು ಎಂದು ಅವರು ಹೇಳಿದರು.

ಈ ವೇಳೆ ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಪ. ಪಂ. ಜೆಇ ವೆಂಕಟೇಶ ಕಾಮಣ್ಣವರ, ಪಂಚಾಯತ ರಾಜ್ಯ ಇಂಜಿನಿಯರ ಹೆಚ್. ಎ. ಖದ್ರಾಪೂರ, ಲೋಕೋಪಯೋಗಿ ಇಲಾಖೆ ಎಇ ಫಕ್ಕೀರಗೌಡ ಪಾ ಟೀಲ, ಕಂದಾಯ ನಿರೀಕ್ಷಕ ವಾಯ್ ಎಫ್. ಮುರ್ತೆನ್ನವರ, ಗ್ರಾಮ ಆಡಳಿತ ಅಧಿಕಾ-ರಿಗಳಾದ ಎಲ್. ಬಿ. ದಳವಾಯಿ. ಎ. ಬಿ. ಹುಣಶ್ಯಾಳ, ಮಂಜು ಚಿಕ್ಕಾಣಿ, ಸಾಹಯಕ ಕೃಷಿ ಅಧಿಕಾರಿ ಎಂ. ಜಿ. ಕಳಸಪ್ಪನ್ನವರ, ಮತ್ತು ತಾಲೂಕಿನ ಎಲ್ಲಾ ಪಂಚಾಯತ ಪಿಡಿಓಗಳು, ಪ್ರವಾಹ ನಿರ್ವಹಣೆ ಸಿಬ್ಬಂದಿ ಮತ್ತಿತರರು ಉಪಸ್ಥಿತರಿದ್ದರು.

# ರಸ್ತೆ, ಸೇತುವೆ, ಚರಂಡಿ ದುರಸ್ತಿಗೆ ಆದ್ಯತೆ ನೀಡಿ; ಬೆಳೆಹಾನಿ ಸಮೀಕ್ಷೆ ಬೇಗ ಮುಗಿಸಿ

## ಬೀಜ- ಗೊಬ್ಬರ ಕೊರತೆ ಆಗದಂತೆ ಮುನ್ನೆಚ್ಚರಿಕೆ ವಹಿಸಿ; ಕಳಪೆ ಬೀಜ, ಗೊಬ್ಬರದ ಬಗ್ಗೆ ಜಾಗೃತಿ ಇರಲಿ: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯು ನಿರಂತರವಾಗಿ ಆಗಿರುವುದರಿಂದ ಅನೇಕ ರಸ್ತೆ, ಸೇತುವೆ, ಚರಂಡಿಗಳಿಗೆ ಹಾನಿ ಆಗಿದೆ. ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗಲು ಆದ್ಯತೆ ಮೇಲೆ ಇವುಗಳನ್ನು ದುರಸ್ತಿ ಮಾಡಬೇಕು. ಲೋಕೋಪಯೋಗಿ, ಪಿ.ಆರ್.ಇಡಿ, ಸಣ್ಣ ನೀರಾವರಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಮಳೆ ಹಾನಿಯಿಂದ ಆಗಿರುವ ಮೂಲ ಸೌಕರ್ಯಗಳ ದುರಸ್ತಿಗೆ ಅಂದಾಜು ಮಾಡಿ, ಆಯಾ ಇಲಾಖೆ ನೇರವಾಗಿ ಪ್ರಸ್ತಾವನೆ ಸಲ್ಲಿಸಿ, ಅದರ ಪ್ರತಿಯನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ತಕ್ಷಣ ಸಲ್ಲಿಸುವಂತೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.


ಅವರು ಇಂದು (ಜೂ.26) ಸಂಜೆ ಗೂಗಲ್ ಮೀಟ್‌ದಲ್ಲಿ ಆನ್‌ಲೈನ್ ಮೂಲಕ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಜಿಲ್ಲಾಮಟ್ಟದ ಅಧಿಕಾರಿಗಳನ್ನು ಉದ್ದೇಶಿಸಿ, ಮಾತನಾಡಿದರು.

ಜಿಲ್ಲೆಯ ಮೂಲ ಸೌಕರ್ಯಗಳ ಹಾನಿ ಕುರಿತು ಸರ್ಕಾರಕ್ಕೆ ತಕ್ಷಣ ಪ್ರಸ್ತಾವನೆಗಳನ್ನು ಸಲ್ಲಿಸಬೇಕು. ಎಲ್ಲ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ಬೆಳೆ ಸಮೀಕ್ಷೆ, ರಸ್ತೆ, ಸೇತುವೆ ಹಾನಿ ಸಮೀಕ್ಷೆಯನ್ನು ಖುದ್ದಾಗಿ ಪರಿಶೀಲಿಸಬೇಕೆಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಶೇ. 83 ರಷ್ಟು ಬಿತ್ತನೆ ಪೂರ್ಣ: ಧಾರವಾಡ ಜಿಲ್ಲೆಯಲ್ಲಿ ಮುಂಗಾರು ಪೂರ್ವ ಮಳೆಗಳು ಚನ್ನಾಗಿ ಆಗಿದ್ದರಿಂದ ರೈತರಿಗೆ ಭೂಮಿ ಹದಗೊಳಿಸಲು ಮತ್ತು ಬಿತ್ತನೆಗೆ ಸಿದ್ದಗೊಳಿಸಲು ಸಹಾಯವಾಗಿತ್ತು. ಮುಂಗಾರು ಮಳೆ ನಿರಂತರವಾಗಿ ಮತ್ತು ವಾಡಿಕೆಗಿಂತ ಹೆಚ್ಚಾಗಿದ್ದರಿಂದ ಭೂಮಿಯ ತೇವಾಂಶ ಹೆಚ್ಚಳವಾಗಿದೆ. ಪ್ರಸಕ್ತ ಸಾಲಿಗೆ 2.81 ಲಕ್ಷ ಹೆಕ್ಟೆರ್ ಭೂಮಿ ಬಿತ್ತನೆಯ ಗುರಿ ಹೊಂದಲಾಗಿ–ತ್ತು. ಅದರಂತೆ ಇಲ್ಲಿಯವರೆಗೆ 2.35 ಲಕ್ಷ ಹೆಕ್ಟೆರ್ ಭೂಮಿ ಬಿತ್ತನೆಯಾಗಿದೆ. ಶೇ. 83 ರಷ್ಟು ಮುಂಗಾರು ಬಿತ್ತನೆಯಾಗಿದೆ.

ಅತಿಯಾದ ಮಳೆಯಿಂದ ಬೆಣ್ಣಿಹಳ್ಳ ಮತ್ತು ತುಪ್ಪರಿಹಳ್ಳದ ಅಕ್ಕಪಕ್ಕದ ಜಮೀನುಗಳಲ್ಲಿ ಪ್ರವಾಹದಿಂದ ನೀರು ಹೋಗಿ ಮೊಳಕೆಯೊಡೆಯುವ ಪ್ರಮಾಣ ಕಡಿಮೆಯಾಗಿದೆ. ಕೆಲವು ಭಾಗದಲ್ಲಿ ರೈತರು ಮರು ಬಿತ್ತನೆ ಮಾಡುತ್ತಿದ್ದಾರೆ. ಇಂತಹ ರೈತರಿಗೆ ಯಾವುದೇ ರೀತಿಯ ಬೀಜ, ಗೊಬ್ಬರ ಕೊರತೆಯಾಗದಂತೆ ಕೃಷಿ ಇಲಾಖೆಯ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಬೀಜ ವಿತರಣೆ: ಜಿಲ್ಲೆಯಲ್ಲಿ ಮುಂಗಾರು ಪೂರ್ವದಲ್ಲಿ ಸುಮಾರು 14,430 ಕ್ವಿಂಟಾಲ್ ವಿವಿಧ ರೀತಿಯ




ಬೀಜಗಳನ್ನು ದಾಸ್ತಾನು ಹೊಂದಲಾಗಿತ್ತು. ರೈತರಿಗೆ ಈವರೆಗೆ ಬಿತ್ತನೆಗಾಗಿ 12,899 ಕ್ವಿಂಟಾಲ್ ವಿವಿಧ ರೀತಿಯ ಬೀಜಗಳನ್ನು ವಿತರಿಸಲಾಗಿದೆ. ಮತ್ತು 1528 ಕ್ವಿಂಟಾಲ್ ಬೀಜಗಳು ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನು ಹೊಂದಲಾಗಿದ್ದು, ಅಗತ್ಯವಿದ್ದಲ್ಲಿ ರೈತರ ಬೇಡಿಕೆಗೆ ಅನುಗುಣವಾಗಿ ಬೀಜಗಳನ್ನು ವಿತ–ರಿಸಬೇಕು. ರೈತರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ತಿಳಿಸಿದರು.

ರಸಗೊಬ್ಬರ ದಾಸ್ತಾನು: ರೈತರ ಬೇಡಿಕೆಗೆ ಅನುಗುಣವಾಗಿ ಜಿಲ್ಲೆಯಲ್ಲಿ ಯೂರಿಯಾ ಸೇರಿದಂತೆ ವಿವಿಧ ರೀತಿಯ ರಸಗೊಬ್ಬರವನ್ನು ಪೂರೈಸಲಾಗುತ್ತಿದೆ. ಜೂನ್ ತಿಂಗಳ ಅಂತ್ಯಕ್ಕೆ ಸುಮಾರು 23 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇದೆ. ಜಿಲ್ಲೆಯಲ್ಲಿ ಹಿಂದಿನ ಶಿಲ್ಕು ಸೇರಿ ಪೂರೈಕೆಯಾಗಿದ್ದು 46,200 ಮೆಟ್ರಿಕ್ ಟನ್ ರಸಗೊಬ್ಬರ. ಇದರಲ್ಲಿ ಈಗಾಗಲೇ 32,000 ಮೆಟ್ರಿಕ್ ಟನ್ ರಸಗೊಬ್ಬರವನ್ನು ರೈತರಿಗೆ ವಿತರಿಸಲಾಗಿದೆ. ಈಗಲೂ 14,200 ಮೆಟ್ರಿಕ್ ಟನ್ ರಸಗೊಬ್ಬರ ಲಭ್ಯವಿದೆ.

ಯೂರಿಯಾ ರಸಗೊಬ್ಬರ: ವಿವಿಧ ಬೆಳೆಗಳಿಗೆ ಬಳಸುವ ಯೂರಿಯಾ ರಸಗೊಬ್ಬರದ ಬೇಡಿಕೆ ಜೂನ್ ಅಂತ್ಯಕ್ಕೆ 11,500 ಆಗಿತ್ತು. ಇಲ್ಲಿಯವರೆಗೆ ಜಿಲ್ಲೆಗೆ 15,900 ಮೆಟ್ರಿಕ್ ಟನ್ ಯೂರಿಯಾ ರಸಗೊಬ್ಬರ ಪೂರೈಕೆಯಾಗಿದ್ದು, ಇದರಲ್ಲಿ 13,000 ಮೆಟ್ರಿಕ್ ಟನ್ ಮಾರಾಟವಾಗಿ, ಇನ್ನೂ 2,900 ಮೆಟ್ರಿಕ್ ಟನ್ ಯೂರಿಯಾ ರಸಗೊಬ್ಬರ ದಾಸ್ತಾನು ಇದೆ.

ಅತಿಯಾದ ಮಳೆಯಿಂದಾಗಿ ಗೋವಿನ ಜೋಳ, ಕಬ್ಬು ಮುಂತಾದ ಬೆಳೆಗಳಿಗೆ ಕೆಲವರು ಅಗತ್ಯಕ್ಕಿಂತ ಹೆಚ್ಚು ರಸಗೊಬ್ಬರವನ್ನು ಬಳಸುತ್ತಾರೆ. ಮತ್ತು ಕೆಲವೊಬ್ಬರು ಅವಶ್ಯಕತೆಗಿಂತ ಹೆಚ್ಚು ಗೊಬ್ಬರವನ್ನು ದಾಸ್ತಾನು ಮಾಡುತ್ತಾರೆ. ಇದರಿಂದಾಗಿ ತೊಂದರೆಯಾಗುತ್ತದೆ. ಭೂಮಿಯ ಫಲವತ್ತತೆಗೆ ಅನುಗುಣವಾಗಿ ತಜ್ಞರು ಶೀಫಾರಸ್ಸು ಮಾಡಿದ ಪೋಷಕಾಂಶವಿರುವ ಗೊಬ್ಬರಗಳನ್ನು ಬಳಸಬೇಕು. ಈ ಕುರಿತು ರೈತರಲ್ಲಿ ಜಾಗೃತಿ ಮೂಡಸಬೇಕೆಂದು ಜಿಲ್ಲಾಧಿಕಾರಿಗಳು ಹೇಳಿದರು.

ಮಾರುಕಟ್ಟೆಯಲ್ಲಿ ಕಳಪೆ ಬೀಜ, ಗೊಬ್ಬರದ ಬಗ್ಗೆ ನಿಗಾ ವಹಿಸಬೇಕು. ರಸಗೊಬ್ಬರಗಳನ್ನು ಎಆರ್‌ಪಿ ದರಗಳಲ್ಲಿಯೇ ಮಾರಾಟ ಮಾಡಬೇಕು. ಯಾವುದೇ ಲಿಂಕ್ ಗೊಬ್ಬರಗಳನ್ನು ರೈತ–ರಿಗೆ ಒತ್ತಾಯಪೂರ್ವಕವಾಗಿ ನೀಡದಂತೆ ಕ್ರಮ ವಹಿಸಬೇಕೆಂದು ಕೃಷಿ ಅಧಿಕಾರಿಗಳಿಗೆ ಜಿಲ್ಲಾಧಿಕಾ–ರಿಗಳು ಸೂಚಿಸಿದರು.

ಬೆಳೆ ಹಾನಿ ಸಮೀಕ್ಷೆ: ನಿರಂತರ ಮಳೆಯಿಂದಾಗಿ ಜಿಲ್ಲೆಯ ನವಲಗುಂದ, ಕುಂದಗೋಳ ಹಾಗೂ ಹುಬ್ಬಳ್ಳಿ ಗ್ರಾಮೀಣ ಭಾಗದಲ್ಲಿ ಬೆಳೆ ಹಾನಿ ಕುರಿತು ರೈತರಿಂದ ಮನವಿ ಸಲ್ಲಿಕೆಯಾಗಿವೆ. ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯಂತೆ ಈಗಾಗಲೇ ಈ ಭಾಗದಲ್ಲಿ ಸಮೀಕ್ಷೆ ಕಾರ್ಯವನ್ನು ಮಾಡಲಾಗುತ್ತಿದೆ. ಕಂದಾಯ, ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಅಧಿಕಾರಿಗಳ ತಂಡವು ಆದಷ್ಟು ಬೇಗ ಬೆಳೆ ಹಾನಿ ಸಮೀಕ್ಷೆಯನ್ನು ಪೂರ್ಣಗೊಳಿಸಬೇಕು. ಮಾಹಿತಿಯನ್ನು ಸರಿಯಾಗಿ ದಾಖಲಿಸಬೇಕೆಂದು ಅವರು ಹೇಳಿದರು. ಮನೆ ಹಾನಿ: ಜಿಲ್ಲೆಯಲ್ಲಿ ನಿರಂತರ ಮಳೆಯಿಂದಾಗಿ ವಿವಿಧ ತಾಲೂಕುಗಳು ಸೇರಿ 191 ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಈಗಾಗಲೇ ರಾಜೀವಗಾಂಧಿ ಹೌಸಿಂಗ್ ಕಾರ್ಪೋರೇಷನ್ (ಆರ್.ಜಿ.ಎಚ್.ಸಿ.ಎಲ್) ತಂತ್ರಾಂಶದ ಮೂಲಕ ಹಾನಿಯಾಗಿರುವ ಮನೆಗಳ ವಿವರಗಳನ್ನು ದಾಖಲಿಸಬೇಕು. ಮನೆ ಹಾನಿ ಸಮೀಕ್ಷೆಯನ್ನು ಸೋಮವಾರದ ಒಳಗಾಗಿ ಪೂರ್ಣಗೊಳಿಸಬೇಕು. ತಹಶೀಲ್ದಾರರು ಮತ್ತು ಇಓ ಅವರು ಈ ಕುರಿತು ನಿರಂತರ ಮೇಲ್ವಾರಿ ಮಾಡಬೇಕೆಂದು ಅವರು ಹೇಳಿದರು.

ಮಳೆಯಿಂದ ಹಾನಿಗೊಳಗಾದ ಮನೆಗಳಿಗೆ, ಶೆಡ್‌ಗಳಿಗೆ ಆದಷ್ಟು ಬೇಗನೆ ಪರಿಹಾರವನ್ನು ನೀಡಬೇಕು. ಯಾವುದೇ ಕಾರಣಕ್ಕೂ ವಿಳಂಬ ಮಾಡಬಾರದು. ಹಾಗೂ ಅನಧಿಕೃತವಾಗಿ ಸುಳ್ಳು ದಾಖಲೆಗಳನ್ನು ನೀಡಿ ವಂಚಿಸಿದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಸಿದರು.

ಕೆರೆಗಳಿಗೆ ತಂತಿ ಬೇಲಿ: ಜನವಸತಿ ಇರುವ ಪ್ರದೇಶದಲ್ಲಿ ಕೆರೆಗಳಿಗೆ ತಂತಿ ಬೇಲಿ ಅಥವಾ ಗಿಡಗಳನ್ನು ನೆಡುವ ಮೂಲಕ ಜೈವಿಕ ತಡೆಗೋಡೆ ವ್ಯವಸ್ಥೆಯನ್ನು ಮಾಡಬೇಕು. ಹಾಗೂ ಕೆರೆಯ ಪಕ್ಕದ ರಸ್ತೆ ಹಾಳಾಗಿದ್ದರೆ, ತಾತ್ಕಾಲಿಕವಾಗಿ ಬೇರೆ ರಸ್ತೆ ವ್ಯವಸ್ಥೆ ಕಲ್ಪಿಸಿಕೊಡಬೇಕು. ಕೆರೆಯಲ್ಲಿ ಈಜುವುದು ಮತ್ತು ಜಾನುವಾರಗಳ ಮೈ ತೊಳೆಯಲು ಹೋಗದ ಹಾಗೆ ಮುನ್ನೆಚ್ಚರಿಕೆ ವಹಿಸಬೇಕು. ಕೆರೆಗಳ ಸುತ್ತಲೂ ಸೂಚನಾ ಫಲಕಗಳನ್ನು ಅಳವಡಿಸಿ, ಮತ್ತು ಊರಿನಲ್ಲಿ ಡಂಗುರ ಸಾರುವ ಮೂಲಕ ಜನರಿಗೆ ಜಾಗೃತಿ ಮೂಡಿಸಿ ಎಂದು ಎಲ್ಲ ತಾಲೂಕಿನ ತಹಶೀಲ್ದಾರರಿಗೆ, ಪಿಡಿಓ ಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಮಳೆಯು ಮುಗಿಯುವವರೆಗೆ ಕೆರೆಯ ಬಗ್ಗೆ ಎಚ್ಚ–ರಿಕೆವಹಿಸಿ ಮುಳ್ಳಿನ ಬೇಲಿಗಳನ್ನು ಹಾಕುವ ಮೂಲಕ ಮಕ್ಕಳು, ಜಾನುವಾರಗಳು ಕೆರೆಯ ಹತ್ತಿರ ಬಿಡದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ವಿದ್ಯುತ್ ಅವಘಡದ ಬಗ್ಗೆ ಎಚ್ಚರ: ಜಿಲ್ಲೆಯಲ್ಲಿ ನಿರಂತರ ಮಳೆಯಿಂದಾಗಿ ಅನೇಕ ಕಡೆಗಳಲ್ಲಿ ವಿದ್ಯುತ್ ಕಂಬ ಬಾಗಿವೆ. ವಿದ್ಯುತ್ ತಂತಿ ಕೆಳಮಟ್ಟದಲ್ಲಿ ಜೋತು ಬಿದ್ದಿವೆ. ಇವುಗಳಿಂದ ಯಾವುದೇ ಜೀವ ಹಾನಿ, ಅವಘಡಗಳು ಆಗದಂತೆ ಹೆಸ್ಕಾಂ ಇಲಾಖೆಯವರು ಮುನ್ನಚ್ಚರಿಕೆ ವಹಿಸಬೇಕು. ವಿದ್ಯುತ್ ಕಂಬಗಳನ್ನು ಹಾಗೂ ಜೋತು ಬಿದ್ದಿರುವ ತಂತಿಗಳನ್ನು ಆದಷ್ಟು ಬೇಗನೆ ಸರಿಪಡಿಸಬೇಕೆಂದು ಸೂಚಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಬೆಳೆ ಹಾನಿ ಸಮೀಕ್ಷೆ ಹಾಗೂ ಮನೆ ಹಾನಿ ಸಮೀಕ್ಷೆ ಕು–ರಿತು ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಿದರು. ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಸಭೆ ನಿರ್ವಹಿಸಿದರು.

ಸಭೆಯಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರು, ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು, ತಹಶೀಲ್ದಾರರು, ತಾಲೂಕಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಶೈಕ್ಷಣಿಕ ಸೇವೆಯಲ್ಲಿ ರಾಯಲ್ ಪ್ಯಾಲೇಸ್ ಗಮನಾರ್ಹ ಸಾಧನೆ




ಜಮಖಂಡಿ: ರಾಯಲ್ ಪ್ಯಾಲೇಸ್ ಸಂಸ್ಥೆ ಕಳೆದ 20 ವರ್ಷಗಳ ಶೈಕ್ಷಣಿಕ ಸೇವೆಯಲ್ಲಿ ಗಮನಾರ್ಹ ಸಾಧನೆ ಸಾಧಿಸುತ್ತಿದೆ ಎಂದು ಸಂಸ್ಥೆಯ ಅಧ್ಯಕ್ಷ, ಮಾಜಿ ಶಾಸಕಲ ಆನಂದ ನ್ಯಾಮಗೌಡ ಹೇಳಿದರು.

ನಗರದ ಪ್ರತಿಷ್ಠಿತ ರಾಯಲ್ ಪ್ಯಾಲೇಸ್ ಶಾಲೆ 21ನೇ ಸಂಸ್ಥಾಪನಾ ದಿನ ಮತ್ತು ಶಾಲಾ ಸಂಸತ್ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪೂಜ್ಯಶ್ರೀ ಸಿದ್ದೇಶ್ವರ ಸ್ವಾಮಿಗಳ ಆಶೀರ್ವಾದ, ಸಂಸ್ಥಾಪಕ ಲಿಂ. ಸಿದ್ದು ನ್ಯಾಮಗೌಡರ ದೂರದಷ್ಠಿ, ಆಡಳಿತ ಮಂಡಳಿಯ ಮಾರ್ಗದರ್ಶನ, ಸಿಬ್ಬಂದಿಯವರ ಅವಿರತ ಪರಿಶ್ರಮ ಅಡಗಿದೆ ಎಂದರು.

ದಿವಂಗತ ಸಿದ್ದು ನ್ಯಾಮಗೌಡರ ಮಹತ್ವಾಕಂಕ್ಷೆಯಂತೆ ನಮ್ಮ ಸಂಸ್ಥೆ ಮೂಲಕ ಹೊಸಹೊಸ ವಿಭಾಗಗಳನ್ನು ಪ್ರಾರಂಭಿಸುತ್ತಿದ್ದೇವೆ. ಪ್ರಸಕ್ತ ವರ್ಷದಿಂದ ಪಿಯುಸಿ ಕಲಾ ವಿಭಾಗ ಹಾಗೂ ಕಲಾ ವಾಣಿಜ್ಯ, ವಿಜ್ಞಾನ ಮತ್ತು ಬಿ.ಸಿ.ಎ ವಿಭಾಗದ ಕಾಲೇಜುಗಳನ್ನು ಪ್ರಾರಂಭಿಸಿದ್ದೇವೆ. ಶೈಕ್ಷಣಿಕ ಸಂಸ್ಥೆಯ ಬೆಳವಣಿಗೆಯಲ್ಲಿ ವಿದ್ಯಾರ್ಥಿಗಳ ಶ್ರಮ ಮತ್ತು ಪಾಲಕರ ಸಹಕಾರಕ್ಕೆ ನಾವು ಋಣಿಯಾಗಿದ್ದೇವೆ ಎಂದರು.

ಪ್ರಾಚಾರ್ಯೆ ರೀತಾ ಜೈನರ, ಭಾಗ್ಯಲಕ್ಷ್ಮಿ ಹಿರೇಮಠ ಹಾಗೂ ಶರಣಬಸವ ನಾಲವಾರ ಶಾಲಾ ಸಂಸತ್‌ಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ವಿದ್ಯಾರ್ಥಿಗಳಾದ ಮೀತ ಜೈನ, ಶಿಕ್ಷಕ ರಾಮಯ್ಯ ಪಾಲಬಾವಿಮಠ ಅನುಭವ ಹಂಚಿಕೊಂಡರು.

ವೇದಿಕೆಯಲ್ಲಿ ಪದವಿ ಕಾಲೇಜಿನ ಪ್ರಾಚಾರ್ಯ ಡಾ.ಎನ್.ಎಂ.ರೊಳ್ಳಿ ಶಾಲಾ ಆಡಳಿತ ವ್ಯವಸ್ಥಾಪಕ ಬಸವರಾಜ ನ್ಯಾಮಗೌಡ ಸಹಿತ ಹಲವರು ಇದ್ದರು.

ಶಾಲಾ ಸಂಸತ್ ಪದಗ್ರಹಣದ ನಿಮಿತ್ಯ ಆಕರ್ಷಕ ಪಥಸಂಚಲನ ನಡೆಯಿತು. ಮಕ್ಕಳಿಂದ ನೃತ್ಯ, ಯೋಗ ಮತ್ತು ಸಂಗೀತ ಕಾರ್ಯಕ್ರಮಗಳು ಜರುಗಿದವು. ರಾಜೇಶ್ವರಿ ನಾಯಕ ಪ್ರಾರ್ಥಿಸಿದರು. ತಾನಿಯಾ ಜೈನ ಸ್ವಾಗತಿಸಿದರು. ಜೈನಾ ಓಸವಾಲ ನಿರೂಪಿಸಿ, ವಂದಿಸಿದರು.

## ಲಯನ್ಸ ಸಂಸ್ಥೆ: ನೇತ್ರದಾನ, ದೇಹದಾನದ ಜಾಗೃತಿ ಗೋಡೆ ಬರಹ




ಜಮಖಂಡಿ: ನಗರದ ಮುಧೋಳ ರಸ್ತೆಯಲ್ಲಿ ಬರತಕ್ಕ ಹಿಂದೂ ರುದ್ರಭೂಮಿಯ ಆವರಣದಲ್ಲಿ ಲಯನ್ಸ ಸಂಸ್ಥೆ ವತಿಯಿಂದ ನೇತ್ರದಾನ ಹಾಗೂ ದೇಹದಾನದ ಮಹತ್ವ ಮತ್ತು ಜಾಗೃತಿ ಗೋಡೆ ಬರಹ ಫಲಕವನ್ನು ನಾಡೋಜ ಡಾ.ಎಚ್.ಡಿ.ದಡ್ಡಿ ಉದ್ಘಾಟಿಸಿದರು.

ಇದೇ ಸಂದರ್ಭದಲ್ಲಿ ಲಯನ್ಸ್ ಸಂಸ್ಥೆ ಅಧ್ಯಕ್ಷ ಚಿನ್ಮಯ ಜಿರಲಿ, ಪ್ರಮುಖರಾದ ರಾಜು ಅಕ್ಕಿ, ಡಾ.ಕಮತೆ, ಡಾ.ಎಂ.ಪಿ.ತಾನಪ್ಪಗೋಳ, ರಾಜಶೇಖರ ಹೊಸಟ್ಟಿ, ವಿಜಯ ಕಟಗಿ, ರಮೇಶ ದೇವರವರ, ಮಲ್ಲು ಮಲಕನ್ನವರ, ಎಸ್‌ಎಂ.ಕುಂಬಾರ, ರಾಜೇಂದ್ರ ನಾಯಕ ಇದ್ದರು.

## ಶಾಲೆಯ ಪ್ರಾರ್ಥನಾ ಸಮಯದಲ್ಲಿ ಶಿಕ್ಷಕನಿಗೆ ಹೃದಯಾಘಾತ



ಜಮಖಂಡಿ: ನಗರದ ತುಂಗಳ ಆಂಗ್ಲ ಮಾಧ್ಯಮ ಶಾಲೆಯ ಕನ್ನಡಭಾಷೆ ಶಿಕ್ಷಕ ಬೆಳಿಗ್ಗೆ ಪ್ರಾರ್ಥನಾ ಸಮಯದಲ್ಲಿ ಹಠಾತ್ ಹೃದಯಾಘಾತದಿಂದ ಸಾವನಪ್ಪಿರುವ ಘಟನೆ ನಗರದ ತುಂಗಳ ಶಾಲೆಯಲ್ಲಿ ಜರುಗಿದೆ.

ತಾಲೂಕಿನ ನಾವಲಗಿ ಗ್ರಾಮದ ಗುರುಪಾದ ಕಾಶಿರಾಯ ಹಿಪ್ಪರಗಿ (48) ಕನ್ನಡಭಾಷೆ ಶಿಕ್ಷಕರು ನಾವಲಗಿಯಲ್ಲಿ ಹಿಂದೆ ಹಲವು ವರ್ಷ ಮತ್ತು ಪ್ರಸಕ್ತ 13 ವರ್ಷದಿಂದ ತುಂಗಳ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುವ ಮೂಲಕ ವಿದ್ಯಾರ್ಥಿಗಳಿಗೆ ದಾರಿದೀಪವಾಗಿದ್ದರು. ಶಾಲಾ ಆವರಣದಲ್ಲಿ ಬೆಳಿಗ್ಗೆ ನಡೆಯು ಪ್ರಾಥ–ರ್ನಾ ಸಮಯದಲ್ಲಿ ಏಕಾಏಕಿ ಹೃದಯಾಘಾತ ಸಂಭವಿಸಿದೆ. ಶೀಘ್ರವೇ ಚಿಕಿತ್ಸೆಗೆ ಕರೆದೊಯ್ದರು ಚಿಕಿತ್ಸೆ ಫಲಕಾರಿಯಾಗದೆ 10 ಗಂಟೆಗೆ ಶಿಕ್ಷಕ ನಿಧನರಾಗಿದ್ದಾರೆ.

ಶಿಕ್ಷಕನ ಅಗಲಿಕೆಗೆ ಜಮಖಂಡಿ ಮತ್ತು ನಾವಲಗಿ ಸುತ್ತಮುತ್ತಲಿನ ವಿದ್ಯಾರ್ಥಿಗಳು, ಗ್ರಾಮಸ್ಥರು ಶೋಕ ಸಾಗರದಲ್ಲಿ ಮುಳುಗಿದೆ. ತುಂಗಳ ಶಾಲೆ ವಿದ್ಯಾರ್ಥಿಗಳು ಶಿಕ್ಷಕನ ಅಗಲಿಕೆಗೆ ಕಣ್ಣಿರು ಸುರಿಸುತ್ತಿರುವುದು ಕಂಡು ಬಂದಿತು.

## ನಿವೇಶನ ರಹಿತರಿಗೆ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನ

ಗದಗ : ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕ–ರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಪ್ರಧಾನ ಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ವಸತಿ ರಹಿತ (ಕಚ್ಚಾ ಮನೆ ಹೊಂದಿರುವ) ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್‌ನಲ್ಲಿ ( https// pmay.urban.gov.in )ನಲ್ಲಿ ಜುಲೈ 15 ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತಿ ಕಾರ್ಯಾಲಯದ ಆಶ್ರಯ ವಿಭಾಗದಲ್ಲಿ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ ಎಂದು ಶಿರಹಟ್ಟಿ ಪಟ್ಟಣ ಪಂಚಾಯತಿಯ ಪ್ರಕಟಣೆ ತಿಳಿಸಿದೆ.

# ರೈತ ಬಾಂಧವರ ಗಮನಕ್ಕೆ

ಗದಗ : 2025–26 ನೇ ಸಾಲಿನಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಗದಗ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರದ ಆದೇಶದಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ದಾಳಿಂಬೆ, ಪಪ್ಪಾಯ, ದ್ರಾಕ್ಷಿ ಹಾಗೂ ಮಾವು ಬೆಳೆಗಳನ್ನು ಬೆಳೆದ ರೈತರು ವಿಮಾ ಕಂತನ್ನು ಪಾವತಿಸಲು ದಿನಾಂಕ: 31.07.2025 ರಂದು ಕೊನೆಯ ದಿನವಾಗಿದ್ದು, ಬೆಳೆ ಸಾಲ ಪಡೆದ ರೈತರು ಸಂಬಂಧಿತ ಬ್ಯಾಂಕ್‌ಗಳ ಮೂಲಕ ಹಾಗೂ ಬೆಳೆ ಸಾಲ ಪಡೆಯದ ರೈತರು ಬ್ಯಾಂಕ್ ಅಥವಾ ಸಾಮಾನ್ಯ ಸೇವಾ ಕೇಂದ್ರ ಸಿಎಸ್‌ಸಿ ಮೂಲಕ ಕೂಡಾ ಈ ಯೋಜನೆಯಡಿ ನೋಂದಾಯಿಸಬಹುದಾಗಿದೆ. ಬೆಳೆವಾರು ಪ್ರತಿ ಎಕರೆಗೆ ವಿಮಾ ಕಂತು ಮಾವು –ರೂ.1600/–, ದ್ರಾಕ್ಷಿ – ರೂ.5600/–, ದಾಳಿಂಬೆ – ರೂ.2540/– ಹಾಗೂ ಪಪ್ಪಾಯ – ರೂ.2680/– ಗಳನ್ನು ನಿಗದಿಪಡಿಸಲಾಗಿರುತ್ತದೆ. ಪಹಣಿ ಪತ್ರಿಕೆ, ಬ್ಯಾಂಕ್ ಖಾತೆ ಪುಸ್ತಕದ ಪ್ರತಿ ಮತ್ತು ಆಧಾರ ಕಾರ್ಡನ ಪ್ರತಿ ಸೇರಿ ಅಗತ್ಯ ದಾಖಲಾತಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಕಚೇರಿ ಅಥವಾ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ತೋಟಗಾರಿಕೆ ಉಪ ನಿರ್ದೇಶಕರು ತಿಳಿಸಿರುತ್ತಾರೆ.

## ಆದರ್ಶ ವಿದ್ಯಾಲಯಕ್ಕೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ಜಮಖಂಡಿ: ತಾಲೂಕಿನ ಆಲಗೂರ ಆರ್.ಸಿ.ಯಲ್ಲಿರುವ ಸರಕಾರಿ ಆಂಗ್ಲ ಮಾಧ್ಯಮ ಶಾಲೆ ಆದರ್ಶ ವಿದ್ಯಾಲಯ (ಆರ್.ಎಂ.ಎಸ್.ಎ.) ದಲ್ಲಿ ಸನ್ 2025–26 ನೇ ಸಾಲಿಗೆ 7, 8 ಮತ್ತು 9 ನೇ ತರಗತಿಗಳಲ್ಲಿ ಮೀಸಲಾತಿವಾರು ಖಾಲಿವಿರುವ ಸೀಟುಗಳ ದಾಖಲಾತಿಗಾಗಿ ಪ್ರವೇಶ ಪರೀಕ್ಷೆ ನಡೆಯಲಿದ್ದು, ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 7ರ ಒಳಗಾಗಿ ಆದರ್ಶ ವಿದ್ಯಾಲಯ (ಆರ್.ಎಂ.ಎಸ್.ಎ.) ಶಾಲೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಜುಲೈ 16 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಆದರ್ಶ ವಿದ್ಯಾಲಯದಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದೆ. ಆದರ್ಶ ವಿದ್ಯಾಲಯದಲ್ಲಿ ಅರ್ಜಿ ಲಭಿಸಲಿದ್ದು, ಹೆಚ್ಚಿನ ಮಾಹಿತಿಗಾಗಿ ಸಂಚಾರಿ 7411672048, 9916006936 ಸಂಪರ್ಕಿಸಬಹುದು ಎಂದು ಮುಖ್ಯಶಿಕ್ಷಕ ಪತ್ತಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ನಗರಸಭೆ: ಆಕ್ಷೇಪಣೆ ಆಹ್ವಾನ

ಕೊಪ್ಪಳ : ಕೊಪ್ಪಳ ನಗರಸಭೆ ವ್ಯಾಪ್ತಿಯ ಗವಿಮಠ ರಸ್ತೆಯಲ್ಲಿರುವ ಶ್ರೀ ಶ್ವೇತಾಂಭರ ಸ್ಥಾನಿಕ ವಾಸಿ ಜೈನ ಸಂಘ ಟ್ರಸ್ಟ್(ರಿ) ಕೊಪ್ಪಳ ಇವರ ಹೆಸರಿನಲ್ಲಿರುವ ಜಾಗೆಯಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆಯನ್ನು ಕೋರಿ ನಗರಸಭೆ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಿದ್ದು, ಈ ಕುರಿತು ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಗವಿಮಠ ರಸ್ತೆಯಲ್ಲಿರುವ ಆಸ್ತಿಯ ಸ್ವತ್ತಿನ ಸಂಖ್ಯೆ:2–2–40–55 ನಿರ್ಧರಣಾ ಸಂಖ್ಯೆ: 1–06–598 ಹಳೆ ಸ್ವತ್ತಿನ ಸಂಖ್ಯೆ: 1–6–513 ಈ ಆಸ್ತಿಯು ಅಧ್ಯಕ್ಷರು, ಶ್ರೀ ಶ್ವೇತಾಂಭರ ಸ್ಥಾನಿಕ ವಾಸಿ ಜೈನ ಸಂಘ ಟ್ರಸ್ಟ್(ರಿ) ಕೊಪ್ಪಳ ಇವರ ಹೆಸರಿನಲ್ಲಿದ್ದು, ಈ ಜಾಗೆಯ ವಿಸ್ತೀರ್ಣ 4200 ಚದರ ಅಡಿ ಇರುತ್ತದೆ. ಆಸ್ತಿ ಮಾಲೀಕರು ಇದರಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ನೀಡುವಂತೆ ಅರ್ಜಿ ಸಲ್ಲಿಸಿರುವುದರಿಂದ ಪರವಾನಿಗೆ ನೀಡುವ ಕುರಿತು ಸಾರ್ವಜನಿಕರಲ್ಲಿ ಯಾರಿಗಾದರೂ ಆಕ್ಷೇಪಣೆ ಇದ್ದಲ್ಲಿ, ಈ ಪ್ರಕಟಣೆ ಪ್ರಕಟಗೊಂಡ 15 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಸೂಕ್ತ ಕಾರಣ ಮತ್ತು ದಾಖಲಾತಿಗಳೊಂದಿಗೆ ಈ ಕಾರ್ಯಾಲಯಕ್ಕೆ ಸಲ್ಲಿಸಬಹುದು. ಅವಧಿ ಮೀರಿ ಬಂದ ಆಕ್ಷೇಪಣೆಗಳನ್ನು ಮತ್ತು ಸೂಕ್ತ ಕಾರಣ ಹಾಗೂ ದಾಖಲಾತಿಗಳು ಇಲ್ಲದೇ ಇರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಗದಗ: ಗದಗ ಜಿಲ್ಲಾ ನ್ಯಾಯಾಲಯದ ಉಪಹಾರ ಗೃಹವನ್ನು ಬಾಡಿಗೆ ಆಧಾರದ ಮೇಲೆ ಲೈಸನ್ಸ್ ನಾತೆಯಿಂದ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸುವವರು ಸ್ವ ರಚಿತ ಅರ್ಜಿಯಲ್ಲಿ ( ಬೆರಳಚ್ಚು ಮಾಡಿಸಿ) ತಮ್ಮ ಸಂಪೂರ್ಣ ವಿಳಾಸ, ದೂರವಾಣಿ ಸಂಖ್ಯೆ, ಯಾವ ಯಾವ ತರಹದ ತಿಂಡಿ ತಿನಿಸು ಹಾಗೂ ಊಟವನ್ನು ತಯಾರಿಸುತ್ತೀರಿ ಅದರ ಪ್ರಮಾಣ ಮತ್ತು ದರ ಪಟ್ಟಿಯ ಸಮೇತವಾಗಿ ಸ್ಪಷ್ಟವಾಗಿ ನಮೂದಿಸಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹುಬ್ಬಳ್ಳಿ ರೋಡ, ಗದಗ ಈ ವಿಳಾಸಕ್ಕೆ ಜುಲೈ 11 ರ ಸಂಜೆ 4.30 ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಖ್ಯ ಆಡಳಿತಾಧಿಕಾರಿಗಳು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಗದಗ ಈ ವಿಳಾಸ ಸಂಪರ್ಕಿಸಬಹುದಾಗಿದೆ.

# ಯೋಗದಿಂದ ಮಾನವ ದೈವತ್ವದೆಡೆಗೆ: ಲೋಕೇಶ ಗುರೂಜಿ

ಜಮಖಂಡಿ: ಬದುಕಿನ ಬಂಧನಗಳನ್ನು ಕಳಚಿಕೊಳ್ಳಲು ಸ್ಥೂಲ ಶರೀರ ಮತ್ತು ಸೂಕ್ಷ್ಮ ಮನಸ್ಸಿಗೆ ಯೋಗ ಬೇಕು. ಯೋಗದಿಂದ ಮನಸ್ಸು ಶುದ್ಧವಾಗುತ್ತದೆ. ಶುದ್ಧವಾದ ಮನಸ್ಸಿನಿಂದ ಚೈತನ್ಯ ಹ–ರಿದು ಮಾನವನನ್ನು ದೈವತ್ವದೆಡೆಗೆ ನಿಲ್ಲಿಸುತ್ತದೆ ಎಂದು ಬಸವಕಲ್ಯಾಣದ ಬಸವ ಭಾರತಿ ಯೋಗಧಾಮದ ಲೋಕೇಶ ಗುರೂಜಿ ಹೇಳಿದರು.

ತಾಲೂಕಿನ ಹಲ್ಯಾಳ ಶ್ರೀಗುರುದೇವಾಶ್ರಮದ ಸಭಾಭವನದಲ್ಲಿ ಶ್ರೀಗುರುದೇವ ಸತ್ಸಂಗ ಬಳಗದ ಹಮ್ಮಿಕೊಂಡಿದ್ದ ಶ್ರೀಗುರುದೇವ ಮಾಸಿಕ ಸತ್ಸಂಗದಲ್ಲಿ ಸಾನ್ನಿಧ್ಯ ವಹಿಸಿ ಯೋಗ ಜೀವನ ಕುರಿತು ಅನುಭಾವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಆನಂದದ ಬದುಕಿಗೆ ಹಂಬಲಿಸಿದಾಗ




ಯೋಗದ ಕಡೆಗೆ ಹೆಜ್ಜೆ ಇರಿಸಿದ್ದೇವೆ ಎಂದರ್ಥ. ಯೋಗದ ಮೂಲಕ ತನ್ನನ್ನು ತಾನು ನೋಡಿಕೊಂಡು ತನ್ನ ಮೂಲ ಅಸ್ತಿತ್ವ ಗೊತ್ತಾದಾಗ ತನ್ನನ್ನು ತಾನು ದರ್ಶನ ಮಾಡಿಕೊಳ್ಳುತ್ತಾನೆ. ಆಗ ಮನಸ್ಸು ಅಂತರ್ಮುಖಿಗೊಂಡು ಆತ್ಮಕ್ಕೆ ಸಂತೃಪ್ತಿ ಭಾವ ಮೂಡುತ್ತದೆ ಎಂದರು.

ಹಲ್ಯಾಳದ ಶ್ರೀಗುರುದೇವಾಶ್ರಮದ ಹರ್ಷಾನಂದ ಮಹಾಸ್ವಾಮಿಗಳು ಮಾತನಾಡಿ, ಯೋಗವೆಂದರೆ ಕೂಡುವುದು. ಜೀವ ಮತ್ತು ಪರಮಾತ್ಮ, ಪರವಸ್ತು ಮತ್ತು ಆತ್ಮವಸ್ತು ಒಂದಾಗುವುದೇ ಯೋಗ. ಜೀವನ ಯೋಗದ ಕಡೆಗೆ ಹರಿದಾಗ ಯಾವ ರೋಗಗಳು, ಆತಂಕಗಳು, ದುಗುಡಗಳು ಭಾದಿಸುವುದಿಲ್ಲ ಎಂದರು.

ಸಿದ್ದಾಪುರ ಗ್ರಾಮದ ಅಡವಿಸಿದ್ಧೇಶ್ವರ ಮಠದ ಮಾತೋಶ್ರೀ ಅಕ್ಕಮಹಾದೇವಿ ಮಾತನಾಡಿದರು. ನಿವೃತ್ತ ಶಿಕ್ಷಕಿ ಶೋಭಾ ಕಾಗಿ ಅವರು ವಿರಚಿತ ಲೋಕೋದ್ಧಾರಕ ಕೃತಿಯ ಲೋಕಾರ್ಪಣೆ ನಡೆಯಿತು. ಬೆಂಗಳೂ–ರಿನ ಸಾಫ್ಟವೇರ್ ಎಂಜಿನಿಯರ್ ಸುನೀಲ ಕತ್ನಳ್ಳಿ ಮಹಾಪ್ರಸಾದದ ದಾಸೋಹ ಸೇವೆ ಸಲ್ಲಿಸಿದರು

ಕಲಾವಿದರಾದ ಗುರುಬಸುಗೌಡ ಪಾಟೀಲ, ಪರಮೇಶ್ವರ ತೇಲಿ, ಶಿವಾನಂದ ಬಾಡನವರ, ಸಿದ್ದು ಉಪ್ಪಲದಿನ್ನಿ, ರಾಮಚಂದ್ರ ಹೂಗಾರ ಸಂಗೀತ ಸೇವೆ ಸಲ್ಲಿಸಿದರು. ನಿವೃತ್ತ ಶಿಕ್ಷಕ ಗುರುನಾಥ ಸುತಾರ ಸ್ವಾಗತಿಸಿದರು. ಸಂಗಮೇಶ ತೆಲಸಂಗ ನಿರೂಪಿಸಿದರು.

# ವಿದ್ಯಾರ್ಥಿಗಳು ಅಧ್ಯಯನ ಜತೆಗೆ ರೋಗದಲ್ಲಿ ತಲ್ಲಿನರಾಗಿ:ಡಾ.ಕಾಂಬಳೆ



ಜಮಖಂಡಿ: ವಿದ್ಯಾರ್ಥಿಗಳು ಅಧ್ಯಯನದ ವ್ಯಾಮೋಹದ ಜೊತೆಗೆ ಯೋಗ ತಲ್ಲಿನರಾದರೆ ಶರೀರದಲ್ಲಿ ಉತ್ತಮ ಆರೋಗ್ಯಕರ ಬೆಳವಣಿಗೆ ಕಾಣಬಹುದು. ಸ್ವಯಂ ಪ್ರೇರಿತರಾಗಿ ಅಪ್ಪಿಕೊಂಡು ಮನಸೋತರೆ ಖಂಡಿತ ಸದೃಢ ಆರೋಗ್ಯ ಸಾಧ್ಯ ಎಂದು ವೈದ್ಯಾಧಿಕಾರಿ ಡಾ.ಮುಕುಂದ ಕಾಂಬಳೆ ಹೇಳಿದರು.

ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ಗದುಗಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠ ಸಂಸ್ಥೆಯ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ 11ನೇ ವಿಶ್ವ ಯೋಗ ದಿನಾಚರಣೆಯಲ್ಲಿ ಮಾತನಾಡಿದರು.

ಯೋಗಕ್ಕೆ ಆಧ್ಯಾತ್ಮಿಕ ಲೇಪನ, ಪುರಾತನ ಇತಿಹಾಸವಿದೆ ಆರೋಗ್ಯ ಪುಷ್ಟಿ ಪುಟಿದೇಳಿಸುವ ಶಕ್ತಿ ಹೊಂದಿದೆ. ಪತಂಜಲಿ ಋಷಿಮುನಿಗಳ ಕೊಡುಗೆಯ ಯೋಗ ಸಂಜೀವಿನಿ ಅಂದಿನಿಂದ ಇಂದಿನವರೆಗೆ ತನ್ನದೇಯಾದ ಮೌಲ್ಯ ಉಳಿಸಿಕೊಂಡು ಆಧುನಿಕ ಯುಗದಲ್ಲಿ ವ್ಯಾಪಕ ಜನಪ್ರಿಯತೆ ಪಡೆಯುತ್ತಿದೆ. ದೈಹಿಕ ಭಾವನೆಗಳ ಸಮತೋಲನ ಹತೋಟಿಗೆ ಯೋಗ ಮಹತ್ತರ ಪಾತ್ರ ವಹಿಸುತ್ತದೆ. ಶಿಸ್ತಿನ ಆರೋಗ್ಯಕ್ಕೆ ಯೋಗ್ಯ ಅವಶ್ಯಕವಾಗಿದೆ. ಉತ್ತಮ ಜೀನನಾಧಾರಿತ ಬದುಕು ಕಟ್ಟಿಕೊಳ್ಳಲು ಪೂರಕವಾಗಿದೆ ಎಂದರು. ಪ್ರಭಾರ ಮುಖ್ಯಶಿಕ್ಷಕ ಬಸವರಾಜ ಜಾಲೋಜಿ ಮಾತನಾಡಿ, ಯೋಗ ದಿನದಂದು ಮಾತ್ರ ಯೋಗ ಕು–ರಿತು ಪ್ರೀತಿ, ಕಾಳಜಿ ತೋರುವುದು ಸರಿಯಲ್ಲ. ನಿತ್ಯವೂ ದೇಹ, ಶರೀರವು ಯೋಗಾನಂದದಲ್ಲಿ ತೇಲಬೇಕು. ಯೋಗಾಭ್ಯಾಸದ ಜೊತೆಗೆ ಉತ್ತಮ ಹವ್ಯಾಸಗಳು ಮೈಗೂಡಿಸಿಕೊಂಡು ಯುವ ಜನತೆ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಶಿಕ್ಷಕ ಸುರೇಶ ಸಂತಿ, ಖಿನ್ನತೆ, ಆತಂಕ, ಒತ್ತಡ ತಗ್ಗಿಸಲು ಯೋಗ ಮದ್ದು.ಸ್ಮರಣ ಶಕ್ತಿ, ಏಕಾಗ್ರತೆ ವೃದ್ಧಿಸುತ್ತದೆ. ದೈಹಿಕ ಆರೋಗ್ಯ ಸುಸ್ಥಿರ ನಿಯಂತ್ರಿಸುತ್ತದೆ. ನೆಮ್ಮದಿ, ಶಾಂತಿ ಪ್ರಸನ್ನ ಭಾವ ಯೋಗದಿಂದ ನಮಗೆ ಲಭ್ಯ ಎಂದರು. ಮಡಿವಾಳ ಮಾಚಿದೇವ ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯ ರಾಯಪ್ಪ ಸಣಮನಿ, ಶಿವಶರಣ ಹರಳಯ್ಯ ಸ್ಮಾರಕ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕ ಎಸ್.ಎಸ್.ಅರಬಳ್ಳಿ, ಎಸ್.ಜಿ.ಬಾಳೇಕುಂದ್ರಿ ಆಂಗ್ಲ ಮಾಧ್ಯಮ ಕಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕಿ ಮಾಲಾ ಕಲ್ಯಾಣಿ, ನಿವೃತ್ತ ದೈಹಿಕ ಶಿಕ್ಷಕ ಬಸವರಾಜ ಅನಂತಪೂರ, ಸದಾಶಿವ ಹೊಸಮನಿ, ಸದಾಶಿವ ಬೋದ್ಲಿ, ಮಲ್ಲಯ್ಯ ಮಠಪತಿ, ಹಣಮಂತ ಗದಿಗೆಪ್ಪಗೋಳ, ಈರಪ್ಪ ದೇಸಾಯಿ, ಲೋಹಿತ ಮಿರ್ಜಿ, ಶ್ರೀಶೈಲ ಹುಣಶಿಕಟ್ಟಿ, ಸಹನಾ ಹತ್ತಳ್ಳಿ, ಶೋಭಾ ಹಿರೇಮಠ, ಸುನಂದಾ ಬಬಲಾದಿಮಠ, ಭಾಗ್ಯಶ್ರೀ ವಿಭೂತಿಮಠ, ಚಂಪಾ ದಯಗೊಂಡ, ರೇಶ್ಮಾ ಕನಾಳ, ರೇಣುಕಾ ಲಾಳಸಂಗಿ, ಪೂಜಾ ಜಾಡರ, ಅಶ್ವಿನಿ ಕಲ್ಯಾಣಿ, ಮಾಲಾ ಯಣಗಾಯಿ, ಶಾಂತಾ ರೋಣಿಹಾಳ, ಲಕ್ಕವ್ವ ಸವದಿ, ಕಸ್ತೂರಿ ಪಟ್ಟಣಶೆಟ್ಟಿ, ಶಾಯಿನ ಗೆಣ್ಣೂರ ಸಹಿತ ಹಲವರು ಇದ್ದರು.

ವಾಣಿಶ್ರೀ ಸೌದಿ ಪ್ರಾರ್ಥಿಸಿದರು. ಬಸವರಾಜ ಅನಂತಪುರ ಸ್ವಾಗತಿಸಿದರು. ಶೃತಿ ಲಿಗಾಡೆ ಪ್ರಾಸ್ತಾವಿಕ ಮಾತನಾ ಡಿದರು. ಸುರೇಶ ಸಂತಿ ನಿರೂಪಿಸಿದರು.

## ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (ಪಿ.ಎಮ್.ಎಫ್.ಎಮ್.ಇ)

ಗದಗ : ಆತ್ಮ ನಿರ್ಭರ ಭಾರತ ಅಭಿಯಾನದ ಅಂಗವಾಗಿ, ಭಾರತ ಸರ್ಕಾರವು ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಪಿ.ಎಮ್.ಎಫ್.ಎಮ್.ಇ) ಯೋಜನೆಯನ್ನು ಕಳೆದ ಐದು ವರ್ಷಗಳಿಂದ ಜಾರಿಗೆ ತಂದಿದೆ. ಯೋಜನೆಯಡಿ, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ರೈತರು ಆದಾಯ ದ್ವಿಗುಣಗೊಳಿಸಲು ಶೇ. 50 ರ ಸಹಾಯಧನ (ಕೇಂದ್ರ ಸರ್ಕಾರದ ಶೇ. 35 ಹಾಗೂ ರಾಜ್ಯ ಸರ್ಕಾರದ ಶೇ.15 ) ಹಾಗು ಶೇ. 50 ರಷ್ಟು ಬ್ಯಾಂಕ ಮೂಲಕ ಸಾಲ ಪಡೆದು ಹೊಸದಾಗಿ ಆಹಾರ ಸಂಸ್ಕರಣಾ ಘಟಕಗಳ ಸ್ಥಾಪನೆ ಅಥವಾ ಈಗಾಗಲೇ ಇರುವ ಆಹಾರ ಸಂಸ್ಕರಣಾ ಘಟಕಗಳ ಉನ್ನತೀಕರಣ ಮಾಡಲು ಅವಕಾಶವಿರುತ್ತದೆ.

2025–26 ನೇಯ ಸಾಲಿನಲ್ಲಿ ಗದಗ ಜಿಲ್ಲೆಗೆ 200 ಆಹಾರ ಸಂಸ್ಕರಣಾ ಘಟಕಗಳ ಗು–ರಿಯನ್ನು ನೀಡಿದ್ದು , ಸದರಿ ವರ್ಷವು ಯೋಜನಾ ಅನುಷ್ಠಾನದ ಕೊನೆಯ ವರ್ಷವಾದ ಕಾರಣ ಗುರಿಯಂತೆ ಸಾಧನೆ ಮಾಡಲು ಜಿಲ್ಲೆಯ ಸಂಪನ್ಮೂಲ ವ್ಯಕ್ತಿಗಳ ಸಂಖ್ಯೆಯನ್ನು ಹೆಚ್ಚಿಸಲು ಉದ್ದೇಶಿಸಲಾಗಿದೆ. ಪ್ರತಿ ಆಹಾರ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಿಗೆ ಗೌರವ ಧನ ನೀಡಲಾಗುವುದು. ಆಸಕ್ತಿ ಇರುವ, ಪದವಿ/ ಡಿಪ್ಲೋಮಾವನ್ನು ಹೊಂದಿರುವ ,ಕಂಪ್ಯೂಟರ್ ಹಾಗು ಯೋಜನಾ ವರದಿ ತಯಾ–ರಿಕೆಯ ಜ್ಞಾನವಿರುವ , ಆಹಾರ ಸಂಸ್ಕರಣೆಯಲ್ಲಿ ಹಾಗು ಬ್ಯಾಂಕಿಂಗ್ ಕ್ಷೇತ್ರದಲ್ಲಿ ಅನುಭವವಿರುವ ಅಭ್ಯರ್ಥಿಗಳು ಜಂಟಿ ಕೃಷಿ ನಿರ್ದೇಶಕರ ಕಚೇರಿ ,ಗದಗ ಇಲ್ಲಿ ಜುಲೈ 5 ರೊಳಗೆ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಧಾಕೃಷ್ಣ ಮೋ.ಸಂ 7975751826 ಅಥ–ವಾ ಶ್ರೀಮತಿ ಸೀಮಾ ಸವಣೂರ , ಸಹಾಯಕ ಕೃಷಿ ನಿರ್ದೇಶಕರು ಮೋ.ಸಂ 8277931425 ಇವರನ್ನು ಸಂಪರ್ಕಿಸುವಂತೆ ಕೃಷಿಇಲಾಖೆಯ ಪ್ರಕಟಣೆ ತಿಳಿಸಿದೆ.

# ದಿಶಾ ಸಮಿತಿ ಸಭೆ : ಇಲಾಖೆ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಕ್ರೀಯಾ ಯೋಜನೆ ರೂಪಿಸಲು ಸೂಚನೆ -ಸಂಸದ ಬಸವರಾಜ ಬೊಮ್ಮಾಯಿ

ಹಾವೇರಿ: ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಆಯಾ ಇಲಾಖೆ ಅಧಿಕಾರಿಗಳು ಕ್ರೀಯಾಯೋಜನೆ ರೂಪಿಸಿ, ಆಯಾ ಸಾಲಿನಲ್ಲೇ ಆ ಯೋಜನೆಗಳ ಗುರಿ ಸಾಧನೆಗೆ ಕಾಳಜಿಯಿಂದ ಹಾಗೂ ಆಸಕ್ತಿಯಿಂದ ಕೆಲಸಮಾಡಬೇಕು ಎಂದು ಅಧಿಕಾರಿಗಳಿಗೆ ಮಾಜಿ ಮುಖ್ಯ ಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಯ ದಿಶಾ ಸಭೆಯಲ್ಲಿ ಜಲಜೀವನ್ ಕಾಮಗಾರಿ, ವಸತಿ, ಗ್ರಾಮ ಸಡಕ್ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಒಬ್ಬ ಅಧಿಕಾರಿಯಾದರೂ ಅಭಿವೃದ್ಧಿ ವರದಿ ನೀಡುತ್ತಿಲ್ಲ. ಯಾವಾಗಲೂ ಕಾರಣಗಳನ್ನು ಹೇಳುತ್ತೀರಿ, ಕೆಲಸ ಮಾಡಲು ಕಾರಣಗಲು ಬೇಕಿಲ್ಲ, ಮನಸ್ಸು ಬೇಕು. ಸಮಸ್ಯೆಗಳನ್ನು ಬಗೆಹರಿಸಲು ಆಗದಿದ್ದರೆ ಯಾಕೆ ಕೆಲಸಕ್ಕೆ ಬರುತ್ತೀರಿ ಎಂದು ಪ್ರಶ್ನಿಸಿದರು.

ಸಮಾಜದ ಬಗ್ಗೆ ಕಾಳಜಿ ಇರಬೇಕು, ಗ್ರಾಮಗಳ ಹಾಗೂ ನಗರದ ಸ್ವಚ್ಛತೆ ಬಗ್ಗೆ ಹೆಚ್ಚಿನ ಕಾಳಜಿವಜಿಸಬೇಕು. ಒಂದು ಯೋಜನೆ ಪೂರ್ಣಗೊಳ್ಳಲು ಐದಾರು ವರ್ಷ ಕಳೆದರೆ ಸಾರ್ವಜನಿಕರಿಗೆ ಉತ್ತಮ ಆಡಳಿತ ನೀಡಲು ಹೇಗೆ ಸಾಧ್ಯ. ಹಾಗಾಗಿ ಅಧಿಕಾರಿಳು ಜವಾಬ್ದಾರಿಯಿಂದ ಸಮನ್ವಯದಿಂದ ಯೋಜನೆಗಳನ್ನು ನಿಗಧಿತ ಕಾಲಾವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

**ಬಡತನ ನೀಗಿಸಲು ಮನೆ ಬೇಕು:** ದೇಶದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ಆಹಾರ, ಶಿಕ್ಷಣ ಸೇರಿದಂತೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ಆದರೆ ವಸತಿ ಸಮಸ್ಯೆ ದೊಡ್ಡದಾಗಿದೆ. ಬಡತನ ನೀಗಿಸಲು ಮನೆ ಬೇಕು. ಈ ಹಿನ್ನಲೆಯಲ್ಲಿ ಅರ್ಹ ಫಲಾನುಭವಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸಮಾಡಬೇಕು ಎಂದು ಸೂಚಿಸಿದರು.

**ಅರಣ್ಯ ಒತ್ತುವತಿ ತಡೆಯಿರಿ:** ಜಿಲ್ಲೆಯಲ್ಲಿ ಅರಣ್ಯ ಒತ್ತುವರಿ ನಡೆಯುತ್ತಿದ್ದು, ಖಾಸಗಿಯವರು ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳು ಕಚೇರಿಯಲ್ಲಿ ಕುಳಿತುಕೊಳ್ಳದೇ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿ, ಅರಣ್ಯ ಒತ್ತುವರಿ ನಿಲ್ಲಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ 9.5 ರಷ್ಟು ಅರಣ್ಯ ಪ್ರದೇಶವಿದ್ದು, ಎರಡು ಸಾವಿರ ಹೆಕ್ಟೇರ್ ಡೀಮ್ಡ್ ಅರಣ್ಯವೆಂದು ಗುರುತಿಸಲಾಗಿದ್ದು, ಇದನ್ನು ಸರ್ವೆ ಮಾಡಲಾಗುತ್ತಿದೆ. ಅರಣ್ಯ ಒತ್ತುವರಿ ತಡೆಯಲಾಗುತ್ತಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

**ವ್ಯವಸ್ಥಿತವಾಗಿ ಕೆಲಸಮಾಡಿ:** ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಮಾಡುವ ಸೇವಾ ರಸ್ತೆಗಳು, ರಸ್ತೆಗಳ ಪಕ್ಕದ ಗಟಾರ್‌ಗಳನ್ನು ವ್ಯವಸ್ಥಿತವಾಗಿ ಹಾಗೂ ರಸ್ತೆಗಳಲ್ಲಿ ನೀರು ನಿಲ್ಲದಂತೆ ಅಚ್ಚುಕಟ್ಟಯಾಗಿ ಕೆಲಸ ಮಾಡಬೇಕು. ಯಾವುದೇ ರೀತಿಯಿಂದ ಸೇವಾ ರಸ್ತೆಗಳ ಹಾಗೂ ಗಟಾರ್ ಸಮಸ್ಯೆಗಳ ದೂರು ಬರಬಾರದು. ಶಿಗ್ಗಾಂವ ಪಟ್ಟಣದ ಸೇವಾ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಕೂಡಲೇ ದುರಸ್ತಿಗೆ ಕ್ರಮಕೈಗೊಳ್ಳಬೇಕು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ನಕಲಿ ಪಡಿತರ ಚೀಟಿ ಪತ್ತೆ ಹಚ್ಚಿ:** ಜಿಲ್ಲೆಯಲ್ಲಿ ನಕಲಿ ಪಡಿತರ ಚೀಟಿಗಳ ಹಾವಳಿ ಹೆಚ್ಚಾಗಿದ್ದು, ಈ ಕುರಿತು ಹೆಚ್ಚಿನ ನಿಗಾವಹಿಸಬೇಕು. ಅರ್ಹರಿಗೆ ಮಾತ್ರ ಬಿಪಿಎಲ್ ಪಡಿತರ ಚೀಟಿ ನೀಡಬೇಕು. ತುರ್ತು ವೈದ್ಯಕೀಯ ತುರ್ತು ಸೇವೆಗೆ ವೈದ್ಯಕೀಯ ಪ್ರಮಾಣಪತ್ರ ನೀಡುವಾಗ ಲಂಚ ಪಡೆಯುತ್ತಿರುವ ದೂರುಗಳು ಬಂದಿವೆ. ಹಾಗಾಗಿ ತುರ್ತು ವೈದ್ಯಕೀಯ ಸೇವೆಗೆ ಪಡಿತರ ಚೀಟಿ ಮಂಜೂರುಮಾಡುವ ಮೊದಲು ಕೂಲಂಕುಷವಾಗಿ ಪರಿಶೀಲಿಸಿ ನೀಡಬೇಕು ಎಂದು ಆಹಾರ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ 46,614 ಎಎವೈ ಹಾಗೂ 3,50,953 ಬಿಪಿಎಲ್ ಸೇರಿ 3,97,567 ಪಡಿತ ಚೀಟಿಗಳಿದ್ದು, ಈ ಪೈಕಿ 23,906 ಅರ್ಹ ಫಲಾನುಭವಿಗಳ ಪಡಿತರ ಚೀಟಿ ಪಟ್ಟಿ ಮಾಡಿ ಪರಿಶೀಲನೆ ಮಾಡಲಾಗುತ್ತಿದೆ ಎಂದು ಆಹಾರ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

**ಶಾಲಾ ದಾಖಲಾತಿಗೆ ಹಣ:** ಕೆಪಿಎಸ್ ಶಾಲೆಗಳಲ್ಲಿ ಮಕ್ಕಳ ದಾಖಲಾತಿಗೆ ಶಿಕ್ಷಕರು ಹಣ ಪಡೆಯುತ್ತಿದ್ದು, ಇದು ನಾಚಿಕೆ ಸಂಗತಿಯಾಗಿದೆ. ಬಡವರ ಸಣ್ಣ ಮಕ್ಕಳ ದಾಖಲಾತಿಗೆ ಭ್ರಷ್ಟಚಾರ ನಡೆದರೆ ಮುಂದಿನ ದಿನಗಳಲ್ಲಿ ದೇಶದ ಗತಿ ಏನು?. ಶಿಕ್ಷಣ ಇಲಾಖೆ ಅಧಿಕಾರಿಗಳು ಇದರಲ್ಲಿ ಶ್ಯಾಮಿಲಿರುವುದಾಗಿ ತಿಳಿದುಬಂದಿದೆ. ಇದು ತನಿಖೆಯಿಂದ ಗೊತ್ತಾಗುತ್ತದೆ. ಇಂತಹ ಪ್ರಕರಣಗಳು ಜಿಲ್ಲೆಯಲ್ಲಿ ಮರುಕಳಿಸದಂತೆ ನಿಗಾವಹಿಸಬೇಕು ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

**ನಿಮ್ಮ ಮಕ್ಕಳಿಗೆ ಪೌಡರ್ ಕೊಡತಿರಾ? :** ಜಿಲ್ಲೆಯಲ್ಲಿ 394 ಸಾಧಾರಣ ಮಕ್ಕಳು ಹಾಗೂ 89 ಅಪೌಷ್ಠಿಕ ಮಕ್ಕಳಿದ್ದಾರೆ. ಮಕ್ಕಳಿಗೆ ಪ್ರೋಟಿನ್ ಪೌಡರ್ ನೀಡುತ್ತಿರುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದಾಗ, ಮಕ್ಕಳಿಗೆ ಆಹಾರ ನೀಡುವಾಗ ಸಮಸ್ಯೆ ಇತ್ತು, ಈಗ ಪೌಡರ್ ನೀಡುವುದು ಬಹಳ ದೊಡ್ಡ ಅನಾಹುತವಾಗಿದೆ. ನಿಮ್ಮಮಕ್ಕಳಿಗೆ ಪೌಡರ್ ಕೊಡತಿರಾ? ಎಂದು ಸಂಸದರು ಅಧಿಕಾರಿಗಳನ್ನು ಪ್ರಶ್ನಿಸಿದರು.

ಮಕ್ಕಳಲ್ಲಿನ ಅಪೌಷ್ಠಿಕತೆ ನಿವಾರಿಸಲು ಆರೋಗ್ಯ ಇಲಾಖೆ ಸಮನ್ವಯೊಂದಿಗೆ ಕೆಲಸಮಾಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ತರಬೇತಿಗೆ ಒಪ್ಪಂದ:** ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಜಿಲ್ಲೆಯ ಇಂಜನೀಯರಿಂಗ್, ಡಿಪ್ಲೋಮಾ ಹಾಗೂ ಐಟಿಐ ಸಂಸ್ಥೆಗಳಲ್ಲಿ ಕೌಶಲ್ಯ ತರಬೇತಿ ನೀಡಲು ಒಪ್ಪಂದ ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಸಮನ್ವಯದಿಂದ ಕೆಲಸಮಾಡಿ:** ಹಾವೇರಿ ಉತ್ತಮ ಜಿಲ್ಲೆಯಾಗಿದ್ದು, ಈ ಜಿಲ್ಲೆಯ ಅಭಿವೃದ್ಧಿಗೆ ಎಲ್ಲ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕೆಲಸಮಾಡಬೇಕು ಎನ್ನುವುದು ನನ್ನ ಕಳಕಳಿಯಾಗಿದೆ. ಯೋಜನೆಗಳಲ್ಲಿ ಅನುಷ್ಠಾನದಲ್ಲಿ ಸಮಸ್ಯೆಗಳಿದ್ದರೆ ವಿಳಂಬ ಮಾಡದೇ ನನ್ನ ಗಮನಕ್ಕೆ ತನ್ನಿ, ಅದನ್ನು ಸರಿಪಡಿಸಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಕೃಷಿ, ತೋಟಗಾರಿಕೆ, ಕೈಗಾರಿಕೆ, ಆರೋಗ್ಯ, ಪಶು ಸಂಗೋಪನೆ, ಹೆಸ್ಕಾಂ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ನಿಗಮಗಳು ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ರುಚಿ ಜಿಂದಾಲ್ ಉಪಸ್ಥಿತರಿದ್ದರು.

# ಮೊಹರಂ ನಿಮಿತ್ಯ ನಡೆದ ಶಾಂತಿ ಸಭೆ



ಇಂಡಿ : ಹಿಂದು ಮುಸ್ಲಿಮರು ಒಟ್ಟಾಗಿ ಆಚರಿಸುವ ಪವಿತ್ರ ಹಬ್ಬ ಮೊಹರಂ ಆಗಿದ್ದು ಶಾಂತಿಮತ್ತು ಸೋದರತೆಯಿಂದ ಹಬ್ಬವನ್ನು ಆಚರಿಸಬೇಕು. ಹಬ್ಬದಲ್ಲಿ ಧ್ವನಿ ವರ್ಧನೆ ಬಳಕೆಗೆ ಅನುಮತಿ ಕಡ್ಡಾಯವಾಗಿದೆ. ಈ ಬಗ್ಗೆ ಸಾರ್ವಜನಿಕರು ಇಲಾಖೆ ಜತೆ ಸಹಕರಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮತ್ತು ಎಲ್ಲರೂ ಒಟ್ಟಾಗಿ ಸೇರಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕು ಎಂದು ಪಟ್ಟಣದ ಸಿ.ಪಿ.ಐ ಪ್ರದೀಪ ಬಿಸೆ ಹೇಳಿದರು.

ಅವರು ಪಟ್ಟಣದ ಪೋಲಿಸ ಕಚೇರಿಯಲ್ಲಿ ಮೊಹರಂ ನಿಮಿತ್ಯ ನಡೆದ ಶಾಂತಿ ಸಭೆಯಲ್ಲಿ ಮಾತನಾಡಿದರು.

ಪುರಸಭೆಯ ಸೋಮು ನಾಯಕ,ಪುರಸಭೆ ಸದಸ್ಯರಾದ ಭೀಮನಗೌಡ ಪಾಟೀಲ, ದೇವೆಂದ್ರ ಕುಂಬಾರ, ತುಕಾರಾಮ ವಾಲಿಕಾರ, ಶ್ರೀಶೈಲಗೌಡ ಬಿರಾದಾರ ಮಾತನಾಡಿ ಇಂಡಿಯ ಮೊಹರಂಗೆ ವಿಜಯಪುರ, ಬಾಗಲಕೋಟ, ಕಲಬುರಗಿ, ಪೂನಾ , ಮುಂಬಯಿ, ಹೈದ್ರಾಬಾದ ಸೇರಿದಂತೆ ಅನೇಕ ಕಡೆಗಳಿಂದ ಭಕ್ತರು ಬರುವರು. ಯಾವುದೆ ಅಹಿತಕರ ಘಟನೆ ನಡೆಯದಂತೆ ಮತ್ತು ಸೌಹಾರ್ಧಯುತ ಹಬ್ಬ ಆಚರಿಸಿ ಒಳ್ಳೆಯ ಹೆಸರು ತರಲು ಸಾರ್ವಜನಿಕರು ಸಹಕರಿಸಬೇಕು . ಪ್ರೀತಿ ಮತ್ತು ವಿಶ್ವಾಸದ ಮಧ್ಯೆ ಎಲ್ಲರು ಸಹೋದರರಂತೆ ಬದುಕಬೇಕು ಎಂದರು.

ದರ್ಗಾ ವತಿಯಿಂದ ಆದಿಲ್ ಮಕಾನದಾರ, ಹುಮಾಯುನ ಮಕಾನದಾರ, ರಫೀಕ ಮಕಾನದಾರ,ಯುಸುಪ ಮಕಾನದಾರ, ಜಿ.ಬಿ.ಲಾಳಸಂಗಿ,ವಿಜಯ ರಾಠೋಡ, ಎ.ಎಸ್. ಗಂಗನಹಳ್ಳಿ, ಸಿ.ಎಸ್.ರಾಠೋಡ ಮತ್ತಿತರಿದ್ದರು.

ಫೋಟೋ- 26 ಇಂಡಿ 01

ಇಂಡಿಯ ಪಟ್ಟಣದ ಪೋಲಿಸ ಕಚೇರಿಯಲ್ಲಿ ಮೊಹರಂ ನಿಮಿತ್ಯ ನಡೆದ ಶಾಂತಿ ಸಭೆಯಲ್ಲಿ ಪ್ರದೀಪ ಬಿಸೆ ಮಾತನಾಡಿದರು.

## ಸರಕಾರಿ ಆಸ್ಪತ್ರೆಗೆ ಸಚಿವರ ಧೀಡಿರ ಭೇಟಿ

# ರೋಗಿಗಳ ಕಾಳಜಿ ವಹಿಸಿ ತಿಮ್ಮಾಪುರ ಸೂಚನೆ




ಮುಧೋಳ: ತಾಲೂಕಾ ಸರಕಾರಿ (ಕೆಇ-ಎಂ) ಆಸ್ಪತ್ರೆಗೆ ಧಿಡೀರ ಭೇಟಿ ನೀಡಿದ ಅಬಕಾರಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಆಸ್ಪತ್ರೆಯ ಎಲ್ಲಾ ವಿಭಾಗಗಳನ್ನು ಪರಿಶಿಲಿಸಿ ರೋಗಿಗಳಿಗೆ ಒದಗಿಸಲಾಗುತ್ತಿರುವ ಆರೋಗ್ಯ ಸೇವೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಬಡ ರೋಗಿಗಳೇ ಇಲ್ಲಿ ಹೆಚ್ಚಾಗಿ ದಾಖಲಾಗುವರು ಕಾರಣ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದ್ದಿಯವರು ರೋಗಿಗಳಿಗೆ ಯಾವುದೆ ತೊಂದರೆ ಆಗದಂತೆ ಗುಣಮಟ್ಟದ ಚಿಕಿತ್ಸೆ ನೀಡಬೇಕೆಂದು ಕಟ್ಟುನಿಟ್ಟಿನ ಆದೇಶ ನೀಡಿದರು.

ಈಗಿದ್ದ ಕ್ಯಾಂಟಿನ್ ಏಜೆನ್ಸಿ ರದ್ದುಪಡಿಸಿ ಅದನ್ನು ಅಕ್ಕ ಕೆಫೆ ತಂಡದವರಿಗೆ ನೀಡಬೇಕು, ಆಸ್ಪತ್ರೆಯ ಶೌಚಾಲಯ ಹಾಗೂ ಪರಿಸರವನ್ನು ಸ್ವಚ್ಚವಾಗಿಡಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು. ಆಸ್ಪತ್ರೆಯಲ್ಲಿ ಡಯಾಲಿಸಿಸ್ ಸುಸ್ಥಿತಿಯಲ್ಲಿದ್ದು ಸ್ಕಾನಿಂಗ್‌ತಜ್ಞರನ್ನು ನೇಮಿಸಲು ಹಾಗೂ ನೇತ್ರ ಹಾಗೂ ದಂತ್ ತಜ್ಞ ವೈದ್ಯರನ್ನು ನೇಮಿಸಲು ಡಿ.ಸಿ. ಹಾಗೂ ಡಿ.ಎಚ್.ಓ. ಗೆ ಸೂಚಿಸಿದರು.

ಮುಖ್ಯ ವೈದ್ಯಾಧಿಕಾರಿ ಅಶೋಕ ಸುರ್ಯವಂಶಿ, ಇಓ. ಉಮೇಶ ಸಿದ್ನಾಳ, ಪೌರಾಯುಕ್ತ ಗೋಪಾಲ ಕಾಸೆ, ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಕಿವಡಿ, ರಾಘು ಮೋಕಾಸಿ, ಡಾ.ಬಿ.ವ್ಹಿ ಪಾಟೀಲ, ಡಾ.ರವಿ ಬದ್ನೂರ, ಡಾ.ರಾಘವೇಂದ್ರ ನಾಲತವಾಡ, ಡಾ.ಮೋಮಿನ, ಡಾ.ಸುನೀತಾ ಕಾಮರಡ್ಡಿ, ಡಾ. ಸುಧೀರ ಪಾಟೀಲ, ಬಸವರಾಜ ಮಠಪತಿ ಇತರರಿದ್ದರು.

# ಯುವಕರು ದುಶ್ಚಟಗಳಿಗೆ ದಾಸರಾಗದೇ ಸುಂದರ ಜೀವನ ರೂಪಿಸಿಕೊಳ್ಳಬೇಕು - ನ್ಯಾಯಾಧೀಶ ಎ.ಹರೀಶ



ವಿಜಯಪುರ : ಮಾದಕ ವಸ್ತುಗಳ ಸೇವನೆಯಿಂದಾಗಿ ಮಾನವನ ಆರೋಗ್ಯದ ಮೇಲೆ, ಕುಟುಂಬ ಮತ್ತು ಸಮಾಜದ ಮೇಲೆ ಅನೇಕ ರೀತಿಯ ಸಮಸ್ಯೆಗಳು ಉಂಟಾಗುತ್ತಿದ್ದು, ಈ ನಿಟ್ಟಿನಲ್ಲಿ ಯುವಕರು ಇಂತಹ ದುಶ್ಚಟಗಳಿಗೆ ದಾಸರಾಗದೇ ಉತ್ತಮ ಬದುಕು ರೂಪಿಸಿಕೊಂಡು ಸದೃಢ ದೇಶ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹರೀಶ ಎ ಅವರು ಹೇಳಿದರು.

ವಿಜಯಪುರ ಜಿಲ್ಲಾ ಪೊಲೀಸ್ ಇಲಾಖೆಯಿಂದ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಗುರುವಾರ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತರರಾಷ್ಟೀಯ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಮಾದಕ ವಸ್ತುಗಳ ಸೇವನೆಯಿಂದ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಶಿಕ್ಷಕರು ಮಾದಕ ವಸ್ತುಗಳ ಕುರಿತು ದುಷ್ಪಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಎವಿಡೆನ್ಸ್ ಇಸ್ ಕ್ಲಿಯರ್, ಇನವೆಸ್ಟ್ ಇನ್ ಪ್ರಿವೆನ್ಷನ್ ಎಂಬ ಘೋಷ ವಾಕ್ಯದಡಿ ಈ ವರ್ಷ ಮಾದಕ ವಸ್ತುಗಳ ಸೇವನೆ ಮತ್ತು ಅಂದರಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಾದಕ ವಸ್ತುಗಳ ಸೇವನೆಗೆ ಒಳಗಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವವರಿಗೆ ಇದರಿಂದಾಗುವ ದುಷ್ಪಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದಕ್ಕಾಗಿ ಇಂತಹ ಕಾರ್ಯಕ್ರಮಗಳು ಅತ್ಯುಪಯುಕ್ತವಾಗಿವೆ ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಮಾದಕ ವಸ್ತುಗಳ ಬಳಕೆ ಹಾಗೂ ಅಕ್ರಮ ಸಾಗಾಣಿಕೆಯಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಅರಿವು ಮೂಡಿಸುವುದಕ್ಕಾಗಿ ಪ್ರತಿ ವರ್ಷ ಜೂನ್ 26ರಂದು ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರುದ್ಧ ಅಂತರರಾಷ್ಟ್ರೀಯ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಉತ್ತಮ ಸಮಾಜಕ್ಕೆ ಯುವ ಶಕ್ತಿಯೇ ಮಾದರಿ ಇದನ್ನು ಅರಿತು ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸುವುದು ಪ್ರತಿಯೊಬ್ಬ ನಾಗರೀಕನ ಹೊಣೆಯಾಗಿದೆ ಎಂದು ಹೇಳಿದರು.

ಮಾದಕ ವ್ಯಸನದ ದುಷ್ಪರಿಣಾಮದ ಬಗ್ಗೆ ಜಾಗೃತಿ ಹೊಂದಬೇಕು ಅದರಿಂದಾಗುವ ಅಪಾಯಗಳ ಬಗ್ಗೆ ನೆರೆ ಹೊರೆವರಿಗೆ ವಿದ್ಯಾರ್ಥಿಗಳು ಅರಿವು ಮೂಡಿಸುವ ಕಾರ್ಯ ಮಾಡಬೇಕು. ವ್ಯಸನ ಮುಕ್ತ ಸಮಾಜವನ್ನು ನಿರ್ಮಾಣಕ್ಕಾಗಿ ಎಲ್ಲರೂ ಕೈಜೋಡಿಸಿ ಎಂದು ಅವರು ತಿಳಿಸಿದರು.

ಅಶ್ವಿನಿ ಪ್ರಾರ್ಥನಾ ಗೀತೆ ಹಾಡಿದರು. ಮಲ್ಲಯ್ಯ ಮಠಪತಿ ಸಿಪಿಐ ಅವರು ಸ್ವಾಗತಿಸಿ, ವಂದಿಸಿದರು. ಎಸ್‌ಎಸ್‌ಎಂ ಫಾರ್ಮಸಿ ಕಾಲೇಜಿನ ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಸ್ಕಿಟ್ ಮೂಲಕ ಮನಮುಟ್ಟುವಂತೆ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಪ್ರತಿಜ್ಞೆ ವಿಧಿಯನ್ನು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹರೀಶ ಎ ಅವರು ಬೋಧಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಶಂಕರ ಮಾರಿಹಾಳ, ಡಿವೈಎಸ್‌ಪಿ ಬಸವರಾಜ ಯಲಿಗಾರ, ಸಹಾಯಕ ಔಷಧ ನಿಯಂತ್ರಕರಾದ ಪರಶುರಾಮ. ಕೆ,ವಿಜಯಪುರ ಬಿಎಲ್‌ಡಿಇಯ ಎಸ್-ಎಸ್‌ಎಂ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲರಾದ ಶೆಟ್ಟಿ, ಪೊಲೀಸ್ ಇಲಾಖೆಯ ಅಧಿಕಾರಿ, ಸಿಬ್ಬಂದಿ ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರುದ್ಧದ ಅಂತರಾಷ್ಟ್ರೀಯ ದಿನಾಚರಣೆ-2025ರ ಕುರಿತು ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ಜಾಗೃತಿ ಜಾಥಾವು ಶ್ರೀ ಕಂದಗಲ್ ಹಣಮಂತರಾಯ ರಂಗಮಂದಿರದಲ್ಲಿ ಸಮಾರೋಪಗೊಂಡಿತ್ತು.

# ನಾಡಪ್ರಭು ಕೆಂಪೇಗೌಡರು ಅಪ್ರತಿಮ ನಾಯಕ



ಹಾವೇರಿ. : ನಾಡಪ್ರಭು ಕೆಂಪೇಗೌಡರು ಅಪ್ರತಿಮ ನಾಯಕರು ಹಾಗೂ ಬೆಂಗಳೂರು ನಗರ ನಿರ್ಮಾಣಮಾಡಿದವರು ಎಂದು ನಗರಸಭೆ ಅಧ್ಯಕ್ಷೆ ಶಶಿಕಲಾ ರಾಮು ಮಾಳಗಿ ಅವರು ಹೇಳಿದರು. ಹಾವೇರಿ ನಗರದ ಗಾಂಧಿ ಭವನದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾದ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಚನೆಮಾಡಿ ಅವರು ಮಾತನಾಡಿದರು.

ನೂರಾರು ಕೆರೆಗಳನ್ನು ಹಾಗೂ ಹಲವಾರು ದೇವಸ್ಥಾನಗಳನ್ನು ಕಟ್ಟಿಸಿದ್ದರು. ಅವರು ಉತ್ತಮ ಆಡಳಿತಗಾರರಾಗಿದ್ದರು. ವಿದ್ಯಾರ್ಥಿಗಳು ಇಂತಹ ಮಹಾನ್ ನಾಯಕರ ಇತಿಹಾಸವನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮಾರುತಿ ಶಿಡ್ಲಾಪೂರ ಅವರು ಕೆಂಪೇಗೌಡರ ಜೀವನದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ನಗರಸಭೆ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾತೇನಹಳ್ಳಿ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಂ.ಎಂ. ಮೈದೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಆರ್.ವಿ.ಚಿನ್ನಿಕಟ್ಟಿ, ಉಪ ತಹಶೀಲ್ದಾರ ಅಮೃತಗೌಡ ಪಾಟೀಲ, ಪಿ.ಎಸ್. ಡಂಬಳ್ಳಿ, ಆರ್. ಕೆ.ರಾಜಾನಾಯ್ಕ ಇತರರು ಉಪಸ್ಥಿತರಿದ್ದರು.

# ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಹಾವೇರಿ: ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಬ್ಯಾಂಕ್‌ಗಳ ಸಹಯೋಗದೊಂದಿಗೆ ಆರ್ಯ ವೈಶ್ಯ ಆಹಾರವಾಹಿನಿ/ವಾಹಿನಿಯೋಜನೆ, ವಾಸವಿ ಜಲಶಕ್ತಿ ಯೋಜನೆ ಹಾಗೂ ಅರಿವು ಶೈಕ್ಷಣ ಸಾಲ ಯೋಜನೆಯಡಿ (ಸಿಇಟಿ ಹಾಗೂ ನೀಟ್ ಕೌನ್ಸಲಿಂಗ್ ನಂತದ ಅರ್ಜಿ ಆಹ್ವಾನಿಸಲಾಗುವುದು) ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಸಾಮಾನ್ಯ ವರ್ಗದಲ್ಲಿನ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೇಕು ಮತ್ತು ನಮೂನೆ 'ಜಿ'ಯಲ್ಲಿ ಜಾತಿ ಪ್ರಮಾಣಪತ್ರ ಪಡೆದಿರಬೇಕು. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

ಅರ್ಹ ಅಭ್ಯರ್ಥಿಗಳು ದಿನಾಂಕ 31-07-2025ರೊಳಗಾಗಿ **http://kacdc.karnataka.gov.in** ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ 94484 51111 ಕೆಲಸದ ಸಮಯದಲ್ಲಿ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಬಸವೇಶ್ವರ ಅರ್ಬನ್ ಕೋ-ಆಪ್ ಕ್ರೇಡಿಟ್ ಸೊಸೈಟಿಗೆ ಬೆಳ್ಳಿ ಹಬ್ಬದ ಸಂಭ್ರಮ




ಯರಗಟ್ಟಿ: ಶರಣರ ನಾಡಿಗೆ ನೀಡಿರುವ ಯರಗಟ್ಟಿಯಲ್ಲಿ 1999ರ ಡಿ.24ರಂದು ಹುಬ್ಬಳ್ಳಿ ಮೂರುಸಾವಿರ ಮಠದ ಬಸವ ತತ್ವದ ಮಹಾನ್ ಚೇತನ ಶ್ರೀ ಗುರುಸಿದ್ದ ರಾಜಯೋಗೇಂದ್ರ ಸ್ವಾಮಿಗಳ ಅಮೃತ ಹಸ್ತದಿಂದ ಶುರುವಾದ ಬಸವೇಶ್ವರ ಅರ್ಬನ್ ಕೋ-ಆಪ್ ಕ್ರೇಡಿಟ್ ಸೊಸೈಟಿಗೆ ಶುಕ್ರವಾರ ಬೆಳ್ಳಿ ಹಬ್ಬದ ಸಂಭ್ರಮ.

ವಸುಧೈವ ಕುಟುಂಬ ಎನ್ನುವಂತೆ ತಾನು ಎಲ್ಲರಿಗಾಗಿ ಎಲ್ಲರೂ ತನಗಾಗಿ ಎಂಬ ಧ್ಯೆಯವಾಕ್ಯದೊಂದಿಗೆ ಹಾದಿಮನಿ ಕುಟುಂಬದ ಮಹಾಬಳೇಶ್ವರ ಹಾದಿಮನಿ ಸ್ಥಾಪಿಸಿ ಅಧ್ಯಕ್ಷರಾಗಿದ್ದ ಈ ಸಂಘ ಗ್ರಾಮೀಣ ಭಾಗದಲ್ಲಿ ಹಿಂದುಳಿದವರು, ದುರ್ಬಲ ವರ್ಗದ ಸದಸ್ಯರು, ಸಣ್ಣಪುಟ್ಟ ವ್ಯಾಪಾರಿಗಳಿಗೆ ನಾನಾ ಸೇವಾ ಸೌಲಭ್ಯಗಳ ಮೂಲಕ ಆರ್ಥಿಕವಾಗಿ ಸಶಕ್ತಗೊಳಿಸುವತ್ತ ಹೆಜ್ಜೆ ಇರಿಸಿದೆ. ಇಂದು ದೇಶನೂರ, ಯಾದವಾಡ, ಮಮದಾಪೂರ ಗ್ರಾಮಗಳಲ್ಲಿ ಮೂರು ಶಾಖೆಗಳನ್ನು ಹೊಂದಿದೆ.

ಕೇವಲ 300 ಸದಸ್ಯರ 3 ಲಕ್ಷ ಷೇರು ಹಣದೊಂದಿಗೆ ಶುರುವಾದ ಸಂಘ ಇಂದು ಹೆಮ್ಮರವಾಗಿ ಬೆಳೆದಿದ್ದು, 4200 ಸದಸ್ಯರನ್ನು ಒಳಗೊಂಡು 2 ಕೋಟಿ 25. ಲಕ್ಷಕ್ಕೂ ಹೆಚ್ಚು ಷೇರು ಹಣದೊಂದಿಗೆ ಹೋಬಳಿಯಲ್ಲೇ ಸಹಕಾರ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿ ಅಭಿವೃದ್ಧಿಯತ್ತ ಸಾಗಿದೆ. ವರ್ಷದಿಂದ ವರ್ಷಕ್ಕೆ ಲಾಭ ಗಳಿಸುತ್ತಿರುವ ಸಂಘ ಷೇರುದಾರರಿಗೆ ಶೇ 25 ಲಾಭಾಂಶ ನೀಡುತ್ತ ಬರುತ್ತಿದೆ. ಶೈಕ್ಷಣಿಕ ಕ್ಷೇತ್ರದ ಅಭ್ಯುದಯಕ್ಕೂ ಪ್ರೋತ್ಸಾಹಿಸುವ ಉದ್ದೇಶದಿಂದ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಷೇರುದಾರರ ಮೂರು ಮಕ್ಕಳಿಗೆ ಪ್ರೋತ್ಸಾಹ ಧನ ಮತ್ತು ಪ್ರತಿಭಾ ಪುರಸ್ಕಾರ ನೀಡುತ್ತ ಬರುತ್ತಿದೆ.

**ಕಾರ್ಯಕ್ರಮದ ಪಟ್ಟಿ:** ಬಳಿಗ್ಗೆ 09-00 ಗಂಟೆಗೆ ಶ್ರೀಗಳ ಅಮೃತ ಹಸ್ತದಿಂದ ಹಾಗೂ ಗಣ್ಯರಿಂದ ಜ್ಯೊತಿ ಬೆಳಗಿಸುವುದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿಲಾಗುವುದು. ಕಾರ್ಯಕ್ರಮದ ಸಾನಿಧ್ಯವನ್ನು ಕೊಪ್ಪಳ ಗವಿಮಠದ ಜಗದ್ಗುರು ಗವಿಸಿದ್ದೇಶ್ವರ ಮಹಾಸ್ವಾಮಿಗಳು, ಮುನವಳ್ಳಿ ಸೋಮಶೇಖರಮಠ ಮುರುಘೇಂದ್ರ ಮಹಾಸ್ವಾಮಿಗಳು, ಅಧ್ಯಕ್ಷತೆಯನ್ನು ಮಹಾಬಳೇಶ್ವರ ಹಾದಿಮನಿ, ಘನ ಉಪಸ್ಥಿತಿಯನ್ನು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಲ. ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ರ. ಹೆಬ್ಬಾಳಕರ, ನೇತೃತ್ವವನ್ನು ಸವದತ್ತಿ ಶಾಸಕ ವಿಶ್ವಾಸ ವಸಂತ ವೈದ್ಯ, ಮುಖ್ಯ ಅಥಿತಿಗಳಾಗಿ ಬೈಲಹೊಂಗಲ ಶಾಸಕ ಮಹಾಂತೇಶ ಶಿ. ಕೌಜಲಗಿ, ಮಾಜಿ ಮಂಡಳ ಪಂಚಾಯತಿ ಪ್ರಧಾನರಾದ ಅಶೋಕ ಮ. ಹಾದಿಮನಿ, ಬೈಲಹೊಂಗಲ ಸಿ.ಎ. ಲೆಕ್ಕಪರಿಶೋಕರು, ಸುರೇಶ ಎಮ್. ಉಡುಪಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು ಶಾಹೀನ್ ಅಖ್ತರ್ ಹಾಗೂ ಮಧ್ಯಾಹ್ನ 12-30ಕ್ಕರ ಖ್ಯಾತ ವಾಗ್ಮಿಗಳಾದ ಸಿದ್ದಪ್ಪ ಬಿದರಿ, ಡಾ. ಶಂಬು ಬಳಿಗಾರ ಇವರಿಂದ 'ಸಹಕಾರ ಸಿಹಿ ಸಿಂಚನ' ನಂತರ ಮಧ್ಯಾಹ್ನ : 2.30 ಗಂಟೆಗೆ ಸಹಕಾರ ಸಂಗಮ ಸಾನಿಧ್ಯವನ್ನು ಗದಗ-ಡಂಬಳ ತೋಂಟದಾರ್ಯಮಠದ ಡಾ॥ ಜಗದ್ಗುರು ಸಿದ್ದರಾಮ ಮಹಾಸ್ವಾಮಿಗಳು, ಕಟಕೋಳ ಕುಮಾರೇಶ್ವರ ವಿರಕ್ತಮಠದ ಸಚ್ಚಿದಾನಂದ ಮಹಾಸ್ವಾಮಿಗಳು, ಗೋಕಾಕ ಶೂನ್ಯ ಸಂಪಾದನಾ ಮಠದ ಮುರುಘರಾಜೇಂದ್ರ ಮಹಾಸ್ವಾಮಿಗಳು ಮುಖ್ಯ ಅಥಿತಿಗಳಾಗಿ ಮಾಜಿ ಸಚಿವ ರಮೇಶ ಜಾರಕಿಹೊಳಿ, ಮಾಜಿ ವಿಧಾನ ಪರಿಷತ್ ಮುಖ್ಯ ಸಚೇತಕ ಮಹಾಂತೇಶ ಮ. ಕವಟಗಿಮಠ, ಬಿ.ಜೆ.ಪಿ ಮುಖಂಡ ವಿರುಪಾಕ್ಷಪ್ಪಮಾಮನಿ, ಮಾಜಿ ಜಿ. ಪಂ. ಸದಸ್ಯ ಅಜಿತಕುಮಾರ ದೇಸಾಯಿ, ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿರ್ದೇಶಕಉಮೇಶ ಬಾಳಿ, ಬಿ.ಜೆ.ಪಿ ಮುಖಂಡರು ವಿಜಯ ಮೆಟಗುಡ್ಡ, ಬಿ.ಡಿ.ಸಿ.ಸಿ. ಬ್ಯಾಂಕ ನಿರ್ದೇಶಕ ಪಂಚನಗೌಡ ದ್ಯಾಮನಗೌಡ್ರ, ಸಂಘದ ಕಾನೂನು ಸಲಹೆಗಾರರು ಸುಧೀರ ಆರ್. ಸಕ್ರಿ, ರಾಜೇಶ ಎಸ್. ಆಲದಕಟ್ಟಿ ನಂತರ ಸಂಜೆ 5-00 ಘಂಟೆಗೆ ಹಾಸ್ಯ ಕಲಾವಿದರಾದ ಗಂಗಾವತಿ ಪ್ರಾಣೇಶ, ನರಸಿಂಹ ಜೋಶಿ, ಬಸವರಾಜ ಮಹಾಮನಿ ಇವರಿಂದ ಹಾಸ್ಯ ಸಂಜೆ ಕಾರ್ಯಕ್ರಮ ಜರಗುವುದು.

# ನದಿ ಪಾತ್ರದ ಜನರು ಮುನ್ನೆಚ್ಚರಿಕೆ ವಹಿಸುವಂತೆ -ಜಿಲ್ಲಾಧಿಕಾರಿ ಟಿ.ಭೂಬಾಲನ್ ಮನವಿ

ವಿಜಯಪುರ, : ಮಹಾರಾಷ್ಟ್ರದಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿದ್ದು, ಅದರಂತೆ ಮುಂಬರುವ ದಿನಗಳಲ್ಲಿ ಹೆಚ್ಚಿನ ಮಳೆ ಬೀಳುವ ಸಾಧ್ಯತೆಯಿರುವುದರಿಂದ ಜಿಲ್ಲೆಯ ಕೃಷ್ಣಾ, ಭೀಮಾ ಮತ್ತು ಡೋಣಿ ನದಿ ನೀರಿನ ಒಳ ಹರಿವಿನ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಜಿಲ್ಲೆಯ ನದಿ ಪಾತ್ರಗಳಲ್ಲಿನ ಗ್ರಾಮದ ಜನರು ಅಗತ್ಯ ಪ್ರವಾಹ ಪರಿಸ್ಥಿತಿ ಕುರಿತು ಮುನ್ನಚ್ಚರಿಕಾ ವಹಿಸುವಂತೆ ಜಿಲ್ಲಾಧಿಕಾರಿಗಳಾದ ಟಿ.ಭೂಬಾಲನ್ ಅವರು ಮನವಿ ಮಾಡಿದ್ದಾರೆ.

ಸಾರ್ವಜನಿಕರು, ಮಹಿಳೆಯರು, ಮಕ್ಕಳು ನದಿ ಪಾತ್ರಕ್ಕೆ ಬಟ್ಟೆ-ಪಾತ್ರೆ ತೊಳೆಯುವುದು, ಅನಾವಶ್ಯಕವಾಗಿ ನದಿ ಪಾತ್ರಕ್ಕೆ ತೆರಳುವುದು, ನದಿಯಲ್ಲಿ ಈಜುವುದು, ಮೀನು ಹಿಡಿಯುವುದನ್ನು ಮಾಡಬಾರದು.ಪ್ರವಾಹ ಕುರಿತು ಮಾಧ್ಯಮಗಳಲ್ಲಿ ಪ್ರಕಟವಾಗುವ ಮಾಹಿತಿಗಳ ಬಗ್ಗೆ ಸಾರ್ವಜನಿಕರು ನಿಗಾ ವಹಿಸಬೇಕು. ರೈತರು ನದಿಗಳಲ್ಲಿ ಅಳವಡಿಸಿರುವ ಪಂಪ ಸೆಟ್‌ಗಳನ್ನು ತೆರವುಗೊಳಿಸಬೇಕು. ರೈತರು ರಾತ್ರಿ ಸಮಯದಲ್ಲಿ ತಮ್ಮ ಜಮೀನಿನ ಬೆಳೆಗಳಿಗೆ ನೀರು ಹರಿಸಲು ಹೋಗುವಾಗ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಹಾಗೂ ಜಿಲ್ಲಾ ಸಹಾಯವಾಣಿ ಸಂಖ್ಯೆ 1077 ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ, 2025-26 ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ ಪೂರ್ವ ಮತ್ತು ಮೆಟ್ರಿಕ ನಂತರದಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಸೆಪ್ಟೆಂಬರ್ 30, 2025 ರ ಒಳಗಾಗಿ ( ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಹಾಗೂ ಪಾರ್ಸಿ ವರ್ಗದ ) ವಿದ್ಯಾರ್ಥಿಗಳು **https://ssp.postmatric.karnataka.gov.in/** ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಮಾಹಿತಿ ಕೇಂದ್ರ ಹಾಗೂ ತಾಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಬಾಂಧವರ ಗಮನಕ್ಕೆ

ಬೆಳಗಾವಿ, : 2025ನೇ ಮುಂಗಾರು ಹಂಗಾಮಿಗೆ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿ ಮಾವು ಬೆಳೆಗೆ ಬೆಳೆ ವಿಮೆ ಪಾವತಿಸಬಹುದಾಗಿದೆ.
ಖಾನಾಪೂರ ತಾಲ್ಲೂಕಿನ ಖಾನಾಪೂರ ಹಾಗೂ ಬೀಡಿ ಹೋಬಳಿಗಳಿಗೆ ಮಾವು ಬೆಳೆಗೆ ಬೆಳೆ ವಿಮೆ ಪಾವತಿಸಲು ಜುಲೈ 31. 2025 ರಂದು ಕೊನೆಯ ದಿನಾಂಕವಾಗಿರುತ್ತದೆ. ಪ್ರತಿ ಹೆಕ್ಟೇರ್ ಮಾವು ಬೆಳೆಗೆ ರೂ. 4000/- ರಂತೆ ರೈತರ ವಂತಿಕೆಯ ವಿಮಾ ಕಂತು ಸರ್ಕಾರದಿಂದ ನಿಗದಿಯಾಗಿರುತ್ತದೆ.
ಈ ಯೋಜನೆಗಳಿಗೆ ಸಂಬಂಧಪಟ್ಟಂತೆ ಅಧಿಸೂಚಿತ ಗ್ರಾಮ ಪಂಚಾಯತಿ ಬೆಳೆಗಳ ವ್ಯಾಪ್ತಿಯ ಕುರಿತು ಸಂಬಂಧಪಟ್ಟ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಿ, ಹತ್ತಿರದ ಬ್ಯಾಂಕ್ ಶಾಖೆಗಳಲ್ಲಿ ಗ್ರಾಮ-ಒನ್ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ವಿಮೆ ಕಂತು ಪಾವತಿಸುವುದು.
ಬೆಳಗಾವಿ ಜಿಲ್ಲೆಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಗೆ ಖಿಂಖಿಂ ೦ಖಲು ಉಖಲ ಕಂಪನಿಯು ಅಧಿಸೂಚಿತ ವಿಮಾ ಕಂಪನಿಯಾಗಿರುತ್ತದೆ. ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಹೋಬಳಿ ತೋಟಗಾರಿಕೆ ಅಧಿಕಾರಿಗಳ ದೂರವಾಣಿ ಸಂಖ್ಯೆ : ಬೀಡಿ - 9019345895, ಖಾನಾಪೂರ- 9901041457 ಹಾಗೂ ಕಛೇರಿ : 08336-223387 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಖಾನಾಪೂರ, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಳಗಾವಿ ಮಹಾನಗರ ಪಾಲಿಕೆ: ಆಕ್ಷೇಪಣೆ ಆಹ್ವಾನ

ಬೆಳಗಾವಿ, : ಮಹಾನಗರ ಪಾಲಿಕೆಯ ಮಾಳಮಾರುತಿ ಬಡಾವಣೆಯ ಸೆಕ್ಟರ್ ನಂ. 3 ರಲ್ಲಿನ ಪ್ಲಾಟ ನಂ. 444, ಸಿಟಿಎಸ್ ನಂ. 8884, ಶಿವಬಸವ ನಗರ, ಬೆಳಗಾವಿ ಈ ಆಸ್ತಿಗೆ ಸಂಬಂಧಿಸಿದಂತೆ, ಪಾಲಿಕೆಯಿಂದ ಶ್ರೀ ಅಬ್ದುಲವಾಹೀದ ಇನಾಮಸಾಬ ಅತ್ತಾರ ಇವರಿಗೆ ನಿವೇಶನ ಹಂಚಿಕೆ ಮಾಡಲಾಗಿರುತ್ತದೆ.
ಸದರಿ ನಿವೇಶನದ ಅಂತಿಮ ಕ್ರಯಪತ್ರ ಹಾಗೂ ಪಿ.ಐ.ಡಿ. ಅನ್‌ಬ್ಲಾಕ್ ಮಾಡುವ ಕುರಿತು ಯಾರದಾದರೂ ಆಕ್ಷೇಪಣೆ, ಸಲಹೆ, ಸೂಚನೆ ಇದ್ದಲ್ಲಿ ಪ್ರಕಟಣೆ ಪ್ರಕಟಗೊಂಡ ದಿನಾಂಕದಿಂದ 7 ದಿನಗಳ ಒಳಗಾಗಿ ಲಿಖಿತವಾಗಿ ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರಿಗೆ ಸಲ್ಲಿಸಲು ಸೂಚಿಸಿದೆ. ಒಂದು ವೇಳೆ ಸಾರ್ವಜನಿಕರಿಂದ ಲಿಖಿತ ಆಕ್ಷೇಪಣೆ, ಸಲಹೆ, ಸೂಚನೆ ಸ್ವೀಕೃತವಾಗದಿದ್ದಲ್ಲಿ ಮುಂದಿನ ಕ್ರಮ ಕೈಕೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಿಪ್ಪಾಣಿ ನಗರಸಭೆ ವ್ಯಾಪ್ತಿಯ ವಸತಿ ರಹಿತ, ನಿವೇಶನ ರಹಿತರಿಂದ ಅರ್ಜಿ ಆಹ್ವಾನ

ಬೆಳಗಾವಿ, ಕೇಂದ್ರ ಸರ್ಕಾರದ ಪರಿಷ್ಕೃತ ಪ್ರಧಾನಮಂತ್ರಿ ಆವಾಸ ಯೋಜನೆಯಡಿ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಕಲ್ಪಿಸಲು ಕೇಂದ್ರ ಸರ್ಕಾರವು ಗಟಿ-ಜಿಜಜ ಫಜಭ ಕಂಡಿಣಂಟ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
ನಿಪ್ಪಾಣಿ ನಗರಸಭೆ ವ್ಯಾಪ್ತಿಯೊಳಗೆ ಬರುವ ಎಲ್ಲಾ ವಾರ್ಡುಗಳ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳು ವಸತಿ ಪಡೆಯಲು ಕೇಂದ್ರ ಸರ್ಕಾರದ ಠಣಣಠ://ಠಿಟಚಿಥಿ.ಣಾಡಿಭಚಿಟ.ರಠತ.ಟಿ ನಲ್ಲಿ ಅರ್ಜಿ ಸಲ್ಲಿಸಿ, ಅರ್ಜಿ ಸಲ್ಲಿಸಿದ ಪ್ರತಿಯನ್ನು ನಿಪ್ಪಾಣಿ ನಗರಸಭೆ ಕಾರ್ಯಾಲಯದ ಆಶ್ರಯ ಶಾಖೆಗೆ ಸಲ್ಲಿಸಬೇಕು ಎಂದು ನಿಪ್ಪಾಣಿ ಪುರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕೋರ್ಸಗಳಿಗೆ ಅರ್ಜಿ ಆಹ್ವಾನ

ಬೆಳಗಾವಿ, : ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ (ಲಿಡ್ಕರ್) ಬೆಂಗಳೂರು ಇವರಿಂದ ರಾಜ್ಯದ ಪರಿಶಿಷ್ಟ ಜಾತಿಯ ಮಾದಿಗ, ಸಮಗಾರ, ಡೋರ, ಆದಿಜಾಂಬವ, ಮಚಗಾರ ಮತ್ತು ಮೋಚಿ ಜಾತಿಗೆ ಸೇರಿದ ಚರ್ಮ ಆಧಾರಿತ ಸಾಂಪ್ರದಾಯಿಕ ಕುಶಲಕರ್ಮಿ ಕುಟುಂಬಗಳ ಯುವ ಜನರಿಗೆ ಚರ್ಮ ಉದ್ಯಮದಲ್ಲಿನ ಹೊಸ ತಂತ್ರಜ್ಞಾನಗಳು, ವಿನ್ಯಾಸಗಳು ಹಾಗೂ ಮಾರುಕಟ್ಟೆಯ ಬೇಡಿಕೆಗಳಿಗೆ ಪರಿಚಯಿಸಲು ಚರ್ಮ ಆಧಾರಿತ ಕೈಗಾರಿಕೆಗಳಲ್ಲಿ ಮಂಚೂಣಿಯಲ್ಲಿರುವ ರಾಜ್ಯಗಳಾದ ದೆಹಲಿ, ಮಿಳುನಾಡು, ಮಹಾರಾಷ್ಟ್ರ, ಉತ್ತರಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ತರಬೇತಿ ಪಡೆಯಲು ವಿವಿಧ ಕೋರ್ಸುಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.
ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ/ಪಿ.ಯು.ಸಿ ಉತ್ತೀರ್ಣ ಹಾಗೂ ಯಾವುದೇ ಸಾಮಾನ್ಯ ಪದವಿಗಳನ್ನು ಪಡೆದ ಪರಿಶಿಷ್ಟ ಜಾತಿಗೆ ಸೇರಿದ ಆಸಕ್ತ ಅಭ್ಯರ್ಥಿಗಳು ಜುಲೈ 5, 2025 ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.
ತರಬೇತಿಗೆ ನಿಯೋಜಿಸಲಾಗುವ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಶಿಷ್ಯ ವೇತನವನ್ನು ನೀಡಲಾಗುವುದು.
ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂರವಾಣಿ ಸಂಖ್ಯೆ : 08312422643ಗೆ ಅಥವಾ ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಲಿಡ್ಕರ್ ಮಾರಾಟ ಮಳಿಗೆಯ ಜಿಲ್ಲಾ ಸಂಯೋಜಕರು ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಆವರಣ ನೆಹರು ನಗರ ಬೆಳಗಾವಿ ಇಲ್ಲಿಗೆ ಭೇಟಿ ನೀಡಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದಾಗಿದೆ ಎಂದು ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಜಿಲ್ಲಾ ಸಂಯೋಜಕರು ಪ್ರಕಡಣೆಯಲ್ಲಿ ತಿಳಿಸಿದ್ದಾರೆ.

# ಪಡೆದ ಸಾಲ ಸಕಾಲಕ್ಕೆ ಮರುಪಾವತಿಸಿ ಬ್ಯಾಂಕ್ ಅಭಿವೃದ್ಧಿಗೆ ಸಹಕರಿಸಿ -ಶ್ರೀ ಗವಿಮಠದ ಜಗದ್ಗುರು ಗವಿಸಿದ್ದೇಶ್ವರ ಸ್ವಾಮೀಜಿ




ಯರಗಟ್ಟಿ : ಗ್ರಾಹಕರು ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿಸಿ ಬ್ಯಾಂಕ್ ಅಭಿವೃದ್ಧಿಗೆ ಸಹಕರಿಸಬೇಕೆಂದು ಕೊಪ್ಪಳ ಸಂಸ್ಥಾನ ಶ್ರೀ ಗವಿಮಠದ ಜಗದ್ಗುರು ಗವಿಸಿದ್ದೇಶ್ವರ ಸ್ವಾಮೀಜಿ ಹೇಳಿದರು.
ಪಟ್ಟಣದ ಶ್ರೀಶೈಲ ಮಲ್ಲಿಕಾರ್ಜುನ, ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 25ನೇ ವರ್ಷದ ರಜತ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದಲ್ಲಿ ಅತ್ಯಂತ ಕಡೆಯ ವ್ಯಕ್ತ ಗುರುತಿಸಿ ಅಂತಹ ವ್ಯಕ್ತಿಯನ್ನು ಆರ್ಥಿಕವಾಗಿ ಸಬಲೀಕರಣ ಮಾಡಲು ಬಸವೇಶ್ವರ ಅರ್ಬನ್ ಬ್ಯಾಂಕನ ಎಲ್ಲ ಆಡಳಿತ ಮಂಡಳಿಯ ಮುಖ್ಯ ಉದ್ದೇಶವಾಗಿದೆ. ಸಹಕಾರ ಕ್ಷೇತ್ರದಲ್ಲಿ ನಾನು ಎನ್ನುವ ಬದಲಾಗಿ ನಾವು ಎಂದಾಗ ಮಾತ್ರ ಅಭಿವೃದ್ಧಿಯತ್ತ ಮುಂದೆ ಸಾಗಲು ಸಾಧ್ಯ.
ಗ್ರಾಮೀಣ ಭಾಗದ ಹಿಂದುಳಿದವರು, ದುರ್ಬಲರಿಗೆ, ಸಣ್ಣಪುಟ್ಟ ವ್ಯಾಪಾರಿಗಳಿಗೆ ನಾನಾ ಸೇವಾ ಸೌಲಭ್ಯಗಳ ಮೂಲಕ ಆರ್ಥಿಕವಾಗಿ ಸಶಕ್ತಗೊಳಿಸುವತ್ತ ಹೆಜ್ಜೆ ಇರಿಸಿದೆ. ಇಂದು ದೇಶನೂರ, ಯಾದವಾಡ, ಮಮದಾಪೂರ ಗ್ರಾಮಗಳಲ್ಲಿ ಮೂರು ಶಾಖೆಗಳನ್ನು ಹೊಂದಿ ಸಮಾಜ ಸೇವೆ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.
ಮಂಡಳ ಪಂಚಾಯತ ಮಾಜಿ ಪ್ರಧಾನರಾದ ಅಶೋಕ ಹಾದಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಕೇವಲ 300 ಸದಸ್ಯರ 3 ಲಕ್ಷ ಷೇರು ಹಣದೊಂದಿಗೆ ಶುರುವಾದ ಸಂಘ ಇಂದು ಹೆಮ್ಮರವಾಗಿ ಬೆಳೆದಿದ್ದು, 4200 ಸದಸ್ಯರನ್ನು ಒಳಗೊಂಡು 2 ಕೋಟಿ 25. ಲಕ್ಷಕ್ಕೂ ಹೆಚ್ಚು ಷೇರು ಹಣದೊಂದಿಗೆ ಹೋಬಳಿಯಲ್ಲೇ ಸಹಕಾರ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿ ಅಭಿವೃದ್ಧಿಯತ್ತ ಸಾಗಿದೆ. ವರ್ಷದಿಂದ ವರ್ಷಕ್ಕೆ ಲಾಭ ಗಳಿಸುತ್ತಿರುವ ಸಂಘ ಷೇರುದಾರರಿಗೆ ಶೇ 25 ಲಾಭಾಂಶ ನೀಡುತ್ತ ಬರುತ್ತಿದೆ ಎಂದು ಹೇಳಿದರು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಮಾತನಾಡಿದ ಅವರು ಬ್ಯಾಂಕ್ ಆರಂಭವಾಗಿ 25 ವರ್ಷಗಳಾಗಿದ್ದು ಬ್ಯಾಂಕ್‌ನ ಗ್ರಾಹಕರ ಷೇರುದಾರರು, ಠೇವಣಿದಾರರ ಸಹಕಾರದಿಂದ ಈ ಸಾಧನೆ ಸಾಧ್ಯ ಎಂದು ಹೇಳಿದರು.
ಈ ವೇಳೆ ಶಾಸಕ ವಿಶ್ವಾಸ ವೈದ್ಯ ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ರಜತಮಹೋತ್ಸವದ ಕುರಿತು ಮಾತನಾಡಿದರು. ಈ ವೇಳೆ ಗಣ್ಯರನ್ನು, ಶ್ರೀಗಳನ್ನು ಸತ್ಕರಿಸಿದರು.
ಸಂಸ್ಥೆ ಅಧ್ಯಕ್ಷ ಮಹಾಬಳೇಶ್ವರ ಹಾದಿಮನಿ ಅಧ್ಯಕ್ಷತೆ ವಹಿಸಿದ್ದರು, ಉಪಾಧ್ಯಕ್ಷ ಎಸ್. ಜಿ. ಪತ್ತಾರ, ಕೊಪ್ಪಳ ಸಂಸ್ಥಾನ ಶ್ರೀ ಗವಿಮಠದ ಜಗದ್ಗುರು ಗವಿಸಿದ್ದೇಶ್ವರ ಸ್ವಾಮೀಜಿ, ಮುನವಳ್ಳಿ ಸೋಮಶೇಖರಮಠದ ಮುರುಘೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು, ಬೈಲಹೊಂಗಲ ಲೆಕ್ಕಪರಿಶೋಕರ ಸಿ.ಎ. ಸುರೇಶ ಉಡಪಿ, ಬೈಲಹೊಂಗಲ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಕೆ.ಎ.ಎಸ್. ಶಾಹೀನ ಅಖ್ತರ್, ಸವದತ್ತಿ ಮಲ್ಲಿಕಾರ್ಜುನ ಹೆಗ್ಗನ್ನವರ, ಬೀಳಗಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಸಿದ್ದಪ್ಪ ಬಿದರಿ, ನಿವೃತ್ತ ಪ್ರಾಚಾರ್ಯ ಹಾಗೂ ಹಿರಿಯ ಜಾನಪದ ವಿದ್ವಾಂಸ ಶಂಭು ಬಳಿಗಾರ, ಕೆಎಂಎಫ್ ನಿರ್ದೇಶಕ ಶಂಕರ ಇಟ್ನಾಳ. ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದಬಸನ್ನವರ, ಚಂದ್ರು ಜಂಬ್ರಿ, ತಾಪಂ ಮಾಜಿ ಅದ್ಯಕ್ಷ ವಿನಯಕುಮಾರ ದೇಸಾಯಿ, ಬಾಸ್ಕರ ಚನ್ನಮೇತ್ರಿ, ಪ್ರಕಾಶ ವಾಲಿ, ಬ್ಯಾಂಕ್‌ನ ನಿರ್ದೇಶಕರಾದ ಗುರಪ್ಪ ಶೆಟ್ಟರ, ಬಿ. ಎಸ್. ಆರಿಬೆಂಚಿ, ಎಂ. ಎಂ. ತೋಟಗಿ, ಬಿ. ಪಿ. ಪಟ್ಟಣಶೆಟ್ಟಿ, ಆಯ್. ಎಮ್. ಮುಳಕೂರ, ಆರ್. ಬಿ. ಅಂಗಡಿ, ಎಮ್. ಎಚ್. ಕೊಪ್ಪದ, ಬಿ. ಎಮ್. ಚನ್ನಮೇತ್ರಿ, ವ್ಹಿ. ಡಿ ಸಣ್ಣಕ್ಕಿ, ಎನ್. ಎಸ್. ಭಾಂವಿಹಾಳ, ಎಚ್. ಬಿ. ಭೂಶನ್ನವರ, ಶ್ರೀಮತಿ ಪಿ. ಎಸ್. ವಾಲಿ, ಶ್ರೀಮತಿ ಎಸ್. ಡಿ. ಪಟ್ಟೇದ, ರಾಜೇಂದ್ರಗೌಡ ಪಾಟೀಲ, ಅಣ್ಣಪ್ಪ ಖಂಡ್ರಿ, ಡಿ.ಕೆ.ರಫೀಕ, ಪ್ರಕಾಶ ಸುಣಧೋಳಿ, ಚಂದ್ರಶೇಖರ ಬಾಳಿ, ಮಹಾಬಳೇಶ್ವರ ಪುರದಬುಡಿ, ಫಕೀರಪ್ಪ ಹದ್ದನ್ನವರ, ಬಂಗಾರೆಪ್ಪ ಹರಳಿ ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

# ನೇಕಾರ ಅಭ್ಯುದಯಕ್ಕೆ ಶ್ರಮಿಸುವೆ



ರಬಕವಿ-ಬನಹಟ್ಟಿ,ಜೂ27: ರಾಜ್ಯದ ನೇಕಾರರ ಪರಿಸ್ಥಿತಿ ಚಿಂತಾಜನಕವಾಗಿದೆ. ನೇಕಾರ ಸಮುದಾಯದ ಆರ್ಥಿಕ ಸಬಲೀಕರಣಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ನಿಗಮದ ಅಧ್ಯಕ್ಷ ಕೀರ್ತಿ ಗಣೇಶ ಹೇಳಿದರು. ಬನಹಟ್ಟಿ ಹಟಗಾರ ಪತ್ತಿನ ಸಹಕಾರಿ ಸಂಘದಲ್ಲಿ ನೇಕಾರರಿಂದ ನಡೆದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನಾನೂ ನೇಕಾರ ಮಗನಾಗಿದ್ದು, ಸಮುದಾಯದ ಕಷ್ಟ ಪರಿಸ್ಥಿತಿ ಬಗ್ಗೆ ಅರಿವಿದೆ. ಶಾಶ್ವತ ಪರಿಹಾರಕ್ಕಾಗಿ ಸೂಕ್ತ ಕ್ರಮಕ್ಕೆ ಸರ್ಕಾರವನ್ನು ಒತ್ತಾಯಿಸುವದರ ಜೊತೆಗೆ ಸದ್ಯ ಹಿಂದುಳಿದ ವರ್ಗಗಳ ಇಲಾಖೆಗಳಿಂದ ದೊರಕುವ ಯೋಜನೆಗಳನ್ನು ನೇಕಾರರು ಸದ್ಬಳಕೆ ಮಾಡಿಕೊಂಡು ಆರ್ಥಿಕ ಸಬಲೀಕರಣ ಹೊಂದಬೇಕೆಂದರು.
ರಾಜ್ಯದಲ್ಲಿಯೇ ಅತಿ ಹೆಚ್ಚು ನೇಕಾರ ಸಮುದಾಯ ಹೊಂದಿರುವ ಗದಗ, ಬಾಗಲಕೋಟೆ, ವಿಜಯಪುರ, ದೊಡ್ಡ ಬಳ್ಳಾಪುರ ಸೇರಿದಂತೆ ಇತರೆ ಜಿಲ್ಲೆಗಳಿಗೆ ವಿಶೇಷ ಆದ್ಯತೆ ನೀಡುವಂತೆ ಮುಖ್ಯಮಂತ್ರಿಗಳಲ್ಲಿಯೂ ಮನವಿ ಮಾಡುವದಾಗಿ ತಿಳಿಸಿದರು.
ಸಂಘದ ಅಧ್ಯಕ್ಷ ಸುರೇಶ ಕೋಲಾರ, ಉಪಾಧ್ಯಕ್ಷ ದಾನಪ್ಪ ಹುಲಜತ್ತಿ, ವಿರುಪಾಕ್ಷಪ್ಪ ಕೊಕಟನೂರ, ಚನವೀರಪ್ಪ ಬಾಣಕಾರ, ದೇವೇಂದ್ರ ಶೀಲವಂತ, ಈರಪ್ಪ ಹೊನವಾಡ, ಅಶೋಕ ಮಾಲಾಪುರ, ಚಂದ್ರಶೇಖರ ಬಡ್ಡೂರ, ರಾಜು ಜಾಲಿಗಿಡದ, ಶೇಖರ ಹಕ್ಕಲದಡ್ಡಿ, ಬಸವಾಜ ಕೊಕಟನೂರ, ರವಿ ಬಾಡಗಿ, ಮಧುಕೇಶ್ವರ ಬೆಳಗಲಿ, ಹೇಮಲತಾ ಪಟ್ಟಣ, ಶೋಭಾ ಚನಪನ್ನವರ, ವ್ಯವಸ್ಥಾಪಕ ಸಂಜಯ ಜವಳಗಿ ಸೇರಿದಂತೆ ಅನೇಕರಿದ್ದರು.



ರಬಕವಿ-ಬನಹಟ್ಟಿ ನೂತನ ಪೌರಾಯುಕ್ತರಾಗಿ ಆಗಮಿಸಿದ ರಮೇಶ ಜಾಧವರನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಂದ ಸನ್ಮಾನಿಸಲಾಯಿತು.

## ಮಾದಕ ದ್ರವ್ಯ ವ್ಯಸನ ಮುಕ್ತ ದಿನಾಚರಣೆ: ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧನೆ



ರಬಕವಿ-ಬನಹಟ್ಟಿ,ಜೂ27: ಅಂತರಾಷ್ಟ್ರೀಯ ಮಾದಕ ದ್ರವ್ಯ ವ್ಯಸನಮುಕ್ತ ದಿನ ಅಂಗವಾಗಿ ರಬಕವಿ-ಬನಹಟ್ಟಿ ತಾಲೂಕಿನ ವಿವಿಧ ಶಾಲಾ-ಕಾಲೇಜುಗಳಲ್ಲಿ ಗುರುವಾರ ಪ್ರತಿಜ್ಞಾವಿಧಿ ಬೋಧಿಸಲಾಯಿತು.
ಬನಹಟ್ಟಿಯ ಎಸ್‌ಆರ್‌ಎ ಮೈದಾನದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳ ಸಭೆಯಲ್ಲಿ ಪಾಲ್ಗೊಂಡ ಪಿಎಸ್‌ಐ ಶಾಂತಾ ಹಳ್ಳಿ ಮಾತನಾಡಿ, ಮಾದಕ ದ್ರವ್ಯ ವ್ಯಸನಮುಕ್ತ ರಾಷ್ಟ್ರ ನಿರ್ಮಾಣ ಮಾಡಲು ನಾವು ಗಾಂಜಾ, ಅಫೀಮುಗಳಂತಹ ಮಾದಕ ದ್ರವ್ಯಗಳನ್ನು ಸೇವಿಸುವದಿಲ್ಲ. ಇತರರರು ಸೇವಿಸದಂತೆ ಶ್ರಮಿಸುತ್ತೇವೆಂದು, ಅಕ್ರಮ ಮಾದಕ ದ್ರವ್ಯಗಳ ಬಗ್ಗೆ ಮಾಹಿತಿ ಬಂದಲ್ಲಿ ಪೊಲೀಸ್ ಸಹಾಯವಾಣಿ 112 ಗೆ ಕರೆ ಮಾಡುವ ಮೂಲಕ ಮಾದಕ ದ್ರವ್ಯ ವ್ಯಸನಮುಕ್ತ ರಾಷ್ಟ್ರವನ್ನಾಗಿ ಮಾಡಲು ಪಣತೊಡಬೇಕೆಂದರು.
ಅಪ್ರಾಪ್ತ ವಯಸ್ಸಿನಲ್ಲಿ ಮಾದಕ ವ್ಯಸನಕ್ಕೆ ತುತ್ತಾದಲ್ಲಿ ಆರೋಗ್ಯದ ಮೇಲೆ ಪರಿಣಾಬೀರಿ ಖಿನ್ನತೆಗೆ ಒಳಗಾಗುತ್ತಾರೆ. ಇದರಿಂದ ಮಕ್ಕಳ ಬೆಳವಣಿಗೆಯಲ್ಲಿ ಕುಂಠಿತಗೊಳ್ಳುವದಲ್ಲದೇ ಕುಟುಂಬದ ಸ್ವಾಸ್ಥ್ಯ ಹಾಳಾಗುವದು. ಸಾಮಾಜಿಕ, ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಸಾಧ್ಯವಾಗದೆಂದರು.
ಎನ್.ಎಸ್. ಕಂಕಣಮೇಲಿ, ಬಿ.ಜಿ. ಜೋರಾಪುರ, ಡಾ. ಎಚ್.ಬಿ. ನದಾಫ್, ಆರ್.ಎಂ. ಉಕ್ಕಲಿ, ಎಂ.ಬಿ. ಶೆಟ್ಟಿ ಸೇರಿದಂತೆ ಇತರರಿದ್ದರು.

### ಯುಪಿಎಸ್‌ಸಿ ಪರೀಕ್ಷಾ ಪೂರ್ವ ತರಬೇತಿ : ಅರ್ಜಿ ಆಹ್ವಾನ

ವಿಜಯಪುರ : ಅಲ್ಪಸಂಖ್ಯಾತರ ನಿರ್ದೇಶನಾಲಯ ಬೆಂಗಳೂರು ಇವರ ವತಿಯಿಂದ ಯುಪಿಎಸ್‌ಸಿ ಪರೀಕ್ಷಾ ಪೂರ್ವ ತರಬೇತಿಗೆ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ಪೋರ್ಟಲ್ **https://dom.karnataka.gov.in** ನಲ್ಲಿ ಜೂನ್ 30ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ:8277799990ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃದ್ಧ ಕಾಣೆ

ಹಾವೇರಿ: : ರಾಣೇಬೆನ್ನೂರು ಮಾರುತಿ ನಗರದ ನಿವಾಸಿ 89 ವರ್ಷದ ಮಹಾದೇವಪ್ಪ ನಾಗಪ್ಪ ಕಾನಪೇಟ್ ಅವರು 10 ಜೂನ್ 2025 ರಂದು ಮನೆಯಿಂದ ಹೋದವರು ಕಾಣೆಯಾಗಿರುವುದಾಗಿ ರಾಣೇಬೆನ್ನೂರ ಶಹರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.
ಕಾಣೆಯಾದ ವ್ಯಕ್ತಿ 6 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋದಿಮೈಬಣ್ಣ, ದುಂಡು ಮುಖ ಹೊಂದಿದ್ದು, ವೈಟ್ ಶರ್ಟ್ ಹಾಗೂ ಪಂಜಿ ಧರಿಸಿದ್ದಾರೆ ಹಾಗೂ ಕೈಯಲ್ಲಿ ಕೋಲು ಹಿಡಿದುಕೊಂಡಿದ್ದಾರೆ.
ಕಾಣೆಯಾದ ವ್ಯಕ್ತಿಯ ಗುರುತು ಪತ್ತೆಯಾದಲ್ಲಿ ಹತ್ತಿರದ ಪೊಲೀಸ್ ಠಾಣೆ ಅಥವಾ ರಾಣೇಬೆನ್ನೂರ ಶಹರ ಪೊಲೀಸ್ ಠಾಣೆ ದೂ.08373-266333, ಪಿಎಸ್‌ಐ ಮೊ.9480804550 ಹಾಗೂ ರಾಣೇಬೆನ್ನೂರ ಶಹರ ವೃತ್ತ ಸಿಪಿಐ ಮೊ.9480804532 ಸಂಪರ್ಕಿಸಲು ರಾಣೇಬೆನ್ನೂರ ಶಹರ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನರ್ಸಿಂಗ್ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಪ್ರೋತ್ಸಹಧನಕ್ಕಾಗಿ ಅರ್ಜಿ ಆಹ್ವಾನ

ವಿಜಯಪುರ : ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನಲ್ಲಿ ಬಿಎಸ್ಸಿ ನರ್ಸಿಂಗ್ ಹಾಗೂ ಜಿಎನ್‌ಎಮ್ ನರ್ಸಿಂಗ್ ಕೋರ್ಸ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಧನಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
ಅರ್ಹ ವಿದ್ಯಾರ್ಥಿಗಳು ಸೆಪ್ಟೆಂಬರ 30ರೊಳಗಾಗಿ ಸೇವಾ ಸಿಂಧು ಪೋರ್ಟಲ್ **https://sevasindhu.karnataka.gov.in** ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ದೃಢೀಕರಣ ಪ್ರತಿಯನ್ನು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವಿಜಯಪುರ ಕಚೇರಿಗೆ ಸಲ್ಲಿಸುವುದು. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ 08352-295523ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಸರ ಸ್ವಚ್ಛವಾಗಿದ್ದಲ್ಲಿ ಸಕಲ ಜೀವ ಸಂಕುಲನದ ಬದುಕು ಸುಂದರ



ರಬಕವಿ-ಬನಹಟ್ಟಿ,ಜೂ26: ಪರಿಸರ ಸ್ವಚ್ಛವಾಗಿದ್ದಲ್ಲಿ ಸಕಲ ಜೀವ ಸಂಕುಲನದ ಬದುಕು ಸುಂದರವಾಗುತ್ತದೆ. ಜೀವವೈವಿಧ್ಯತೆಯ ಜೊತೆಗೆ ಮನುಕುಲದ ಉಸಿರು ಉಳಿಸಲು ನಾವೆಲ್ಲರೂ ಸಂಕಲ್ಪಿತರಾಗಿ ಹಸಿರು ಬೆಳೆಸುವತ್ತ ಮುಂದಾಗಬೇಕು. ಮನುಷ್ಯನ ದುರಾಸೆಯಿಂದ, ಅಭಿವೃದ್ಧಿ ಹೆಸರಲ್ಲಿ ಎಲ್ಲೆಂದರಲ್ಲಿ ಈಗಾಗಲೇ ಗಿಡಮರಗಳ ಮಾರಣಹೋಮ ಮಾಡಲಾಗಿದೆ. ಆಗಿರುವ ಪ್ರಮಾದ ಸರಿಪಡಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದ್ದು, ಮನೆಗೊಂದು ಮರ ಎಂಬ ಮಾತಿಗಿಂತ ಮಗುವಿಗೊಂದು ಮರ ಎಂದು ಸಂಕಲ್ಪಿಸಿಕೊಂಡು ಸಸಿಗಳನ್ನು ನೆಟ್ಟು, ಬೆಳೆಸಿ ಅವು ಮರಗಳಾಗುವವರೆಗೆ ಪೋಷಿಸಿ ಬರಡಾಗಿರುವ ಭೂಮಿಗೆ ಹಸಿರು ಹೊದಿಸಬೇಕಿದೆ ಎಂದು ರಬಕವಿ ಶಿಕ್ಷಣ ಸಂಸ್ಥೆಯ ನಿರ್ದೇಶಕ ಚಿದಾನಂದ ಸೋಲಾಪುರ ಹೇಳಿದರು.
ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್ ಹಾಗೂ ರಬಕವಿಯ ಶ್ರೀ ಎಂ ವಿ ಪಟ್ಟಣ ಶಾಲೆಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಪರಿಸರ ಜಾಗೃತಿ ಕಾರ್ಯಕ್ರಮದ ಆದಯಕ್ಷತೆ ವಹಿಸಿ ಮಾತನಾಡಿದರು. ಕೇವಲ ಕಾಟಾಚಾರಕ್ಕೆ ಮಾತ್ರ ಸಸಿಗಳನ್ನು ನೆಟ್ಟರೆ ನಮ್ ಮ ಹೊಣೆಗಾರಿಕೆ ಪೂರ್ಣಗೊಳ್ಳದು. ಬದಲಾಗಿ ಅವುಗಳನ್ನು ಸಂರಕ್ಷಿಸಿ ಬೆಳೆಸಿದಾಗ ಮಾತ್ರ ಆಚರಣೆಗಾ ಸಾರ್ಥಕತೆ ಬರುವುದು ಎಂದರು. ವಿಶ್ವದಾದ್ಯಂತ ಇಂದು ಹಸಿರು ನಾಶವಾಗುತ್ತಿದೆ. ದಟ್ಟವಾಗಿದ್ದ ಅಮೆಜಾನ್ ಕಾಡುಗಳಲ್ಲೂ ಮಾನವನ ದುರಾಸೆಯಿಂದ ಸಸ್ಯ ಸಂಪತ್ತು ನಾಶವಾಗುತ್ತಿದೆ. ಪರಿಸರದ ಸಕಲ ಅಂಶಗಳನ್ನು ದೇವರೆಂದು ಪೂಜಿಸುತ್ತಿದ್ದ ಭಾರತದಲ್ಲಿಯೂ ಅರಣ್ಯ ನಾಶವಾಗುತ್ತಿದ್ದು, ಪರಿಸರದ ಅಸಮತೋಲನ ತೀವ್ರವಾಗಿ ಕಾಡುತ್ತಿದೆ. ಮುಂದಿನ ಜನಾಂಗಕ್ಕೆ ಪರಿಶುದ್ಧವಾದ ಪರಿಸರ ಕಾಣಿಕೆಯಾಗಿ ನೀಡಿ ನಿರ್ಗಮಿಸಬೇಕಾದ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ ಎಂದರು.
ಇದರ ಅಂಗವಾಗಿ ಶಾಲಾ ಮಕ್ಕಳಿಗೆ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಿಗೆ ಬಹುಮಾನ ವಿತರಸಲಾಯಿತು. ಹಾಗೂ 50 ಸಸಿಗಳನ್ನು ನೆಡಲಾಯಿತು.
ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೃಷಿ ಅಧಿಕಾರಿ ಸಿ. ಎಸ್. ಹಿರೇಮಠ, ವಲಯ ಅಧಿಕಾರಿ ಮಂಜುಳಾ ಬೆನಕಪ್ಪ ಹಾಗೂ ಸಮಾಜಸೇವಕಿ ಸವಿತಾ ಹೊಸೂರ್ ಅತಿಥಿಗಳಾಗಿ ಆಗಮಿಸಿದ್ದರು ಶಾಲಾ ಮುಖ್ಯ ಗುರುಗಳಾದ ಬಿ. ಎಸ್. ಪಾಟೀಲ ಸ್ವಾಗತ ಕೋರಿದರು. ಎಂ. ಎ. ಪಾಯೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ. ವಿ. ಅಮಲಜೇರಿ ಕಾರ್ಯಕ್ರಮ ನಿರ್ವಹಿಸಿದರು. ಶಿಕ್ಷಕರಾದ ಪಿ. ಆರ್. ಕೊಣ್ಣೂರ, ಅನಿಲ ಹುಲ್ಲೂರು, ಆರ್. ಎಸ್. ಬೆಲ್ಲಂ, ಸವಿತಾ ಗಾಯಕ್ವಾಡ, ಮಂಜುಳಾ ಬಿಲವಡಿ ಮುಂತಾದವರು ಉಪಸ್ಥಿತರಿದ್ದರು.

## ಅಡವಿಸಿದ್ಧರಾಮ ಸ್ವಾಮೀಜಿ ವಿರುದ್ಧ ಕೇಳಿ ಬಂದಿದ್ದ ಆರೋಪಗಳೆಲ್ಲವೂ ಸುಳ್ಳು: ಶಾಸಕ ಬಾಲಚಂದ್ರ ಜಾರಕಿಹೊಳಿ



ಬೆಳಗಾವಿ: ಬೆಳಗಾವಿ ಜಿಲ್ಲೆಯ ಗೋಕಾಕ ನಗರದ ಶೂನ್ಯ ಸಂಪಾದನಾ ಮಠದಲ್ಲಿ ನಡೆದ ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಅಡವಿಸಿದ್ಧರಾಮ ಸ್ವಾಮೀಜಿ ವಿರುದ್ಧ ಕೇಳಿ ಬಂದಿದ್ದ ಆರೋಪಗಳೆಲ್ಲವೂ ಸುಳ್ಳು,ಮರಳಿ ಶಿವಾಪುರ ಗ್ರಾಮದ ಅಡವಿ ಮಠಕ್ಕೆ ಸ್ವಾಮೀಜಿ ಮರಳಲಿದ್ದಾರೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.
ಶಿವಾಪುರ ಗ್ರಾಮದ ಬಗ್ಗೆ ಈಗಾಗಲೇ ಸಾಕಷ್ಟು ವರದಿಗಳು ಬಂದಿವೆ. ಅಡವಿಸಿದ್ದೇಶ್ವರ ಮಠದ ಸ್ವಾಮೀಜಿ ಬಗ್ಗೆಯೂ ಆಪಾದನೆಗಳು ಬಂದಿವೆ ಈ ಎಲ್ಲ ಸ್ವಾಮೀಜಿಗಳು ಹಾಗೂ ಶಿವಾಪುರ ಗ್ರಾಮದ ಹಿರಿಯರ ಸಮ್ಮುಖದಲ್ಲಿ ಸಭೆ ಮಾಡಿದ್ದೇವೆ ಎಂದರು.
ಮಠದಲ್ಲಿ ನಡೆದ ಘಟನೆ ಬಗ್ಗೆ ವರದಿ ನೀಡಲು ಪೊಲೀಸರಿಗೆ ಸೂಚನೆ ನೀಡಿದ್ದೆವೆ, ಪೊಲೀಸರು ನೀಡಿದ ವರದಿ ಆಧರಿಸಿ ಸ್ವಾಮೀಜಿಗಳ ಸಮ್ಮುಖದಲ್ಲಿ ಚರ್ಚಿಸಿದ್ದೇವೆ.ಸ್ವಾಮೀಜಿ ವಿರುದ್ಧ ಕೇಳಿ ಬಂದ ಆರೋಪಗಳೆಲ್ಲವೂ ಸುಳ್ಳು ಎಂಬುದು ದೃಢವಾಗಿದೆ ಎಂದು ಹೇಳಿದರು.
ಈ ಎಲ್ಲ ಘಟನೆಯಿಂದ ಬೆಳಗಾವಿಯ ಎಲ್ಲ ಪೂಜ್ಯರ ಮನಸ್ಸಿಗೆ ನೋವಾಗಿದೆ. ಶಿವಾಪುರದ ಅಡವಿಸಿದ್ಧರಾಮ ಸ್ವಾಮೀಜಿ ಕೂಡ ಸಾಕಷ್ಟು ನೊಂದಿದ್ದರು.ಸೋಶಿಯಲ್ ಮೀಡಿಯಾಗಳಲ್ಲಿ ವೈರಲ್ ಆಗಿ ಸ್ವಾಮೀಜಿಗಳಿಗೆ ಕೆಟ್ಟ ಹೆಸರು ಬಂದಿದ್ದು, ನಮ್ಮ ಶಿವಾಪುರ ಶ್ರೀಗಳು ಈಗ ಆಪಾದನೆಯಿಂದ ಹೊರ ಬಂದಿದ್ದಾರೆ ಇದು ಸಂತೋಷದ ವಿಷಯವಾಗಿದೆ ಎಂದು ತಿಳಿಸಿದರು.
ಮಠದ ಸುತ್ತಲೂ ಕುಡಿದು ಯಾರಾದರೂ ಗಲಾಟೆ ಮಾಡಿದರೆ ಕ್ರಮ ವಹಿಸಲು ಸೂಚಿಸಿದ್ದೇವೆ.
ಅಂದು ಮಠದಲದಲ್ಲಿ ದೊಡ್ಡ ಶೋ ನಡೆದಿತ್ತು, ಈಗ ಎಲ್ಲವೂ ಶಾಂತವಾಗಿದೆ ಪೂಜ್ಯರ ಮೇಲೆ ಇಲ್ಲ ಸಲ್ಲದ ಆರೋಪ ಬೇಡ. ಸ್ವಾಮೀಜಿಗಳು, ಶಿವಾಪೂರ ಗ್ರಾಮಸ್ಥರ ಸಮ್ಮುಖದಲ್ಲಿ ಸಮಸ್ಯೆ ಬಗೆಹರಿಸಿದ್ದೇವೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

# ಯೋಗದಿಂದ ನಮ್ಮ ಹಲವಾರು ಸಮಸ್ಯೆಗಳಿಗೆ ಪರಿಹಾರ -ಯೋಗಿ ಜಯಗುರುದೇವ ಸ್ವಾಮಿಗಳು



ಸಿಂದಗಿ : ಯೋಗದಿಂದ ನಮ್ಮ ಹಲವಾರು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದ್ದು, ಆರೋಗ್ಯ ಸುಧಾರಣೆ ಸಾಧ್ಯ ಜತೆಗೆ ನಮ್ಮ ದೇಹ ಮತ್ತು ಪ್ರಜ್ಞೆಯನ್ನು ಒಗ್ಗುಡಿಸುತ್ತದೆ ಎಂದು ಗೋಗಿ ಜ್ಞಾನಯೋಗ ಮಂದಿರದ ಯೋಗಿ ಜಯಗುರುದೇವ ಸ್ವಾಮಿಗಳು ಹೇಳಿದರು.
ಸಿಂದಗಿ ಪಟ್ಟಣದ ಶ್ರೀ ಪ.ವಿ.ವ.ಸಂಸ್ಥೆಯ ಆರ್.ಡಿ.ಪಾಟೀಲ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಯೋಗ ಮತ್ತು ಆರೋಗ್ಯ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.
ನಮ್ಮ ಮನಸ್ಸು ಶುದ್ಧವಾಗಿದ್ದರೆ ನಮ್ಮ ಭಾರತವೂ ಪರಿಶುದ್ಧವಾಗುತ್ತದೆ. ನೀವು ಜೀವಂತವಾಗಿರುವವರೆಗೆ ನಿಮ್ಮ ದೇಹವನ್ನು ಕಾಳಜಿ ವಹಿಸಿ ಮತ್ತು ಪ್ರೀತಿಸಿ, ಜೀವನವನ್ನು ಆನಂದಿಸಿ, ಯಾವಾಗಲೂ ಗುಣಮಟ್ಟದ ಜೀವನವನ್ನು ನಡೆಸಲು ಹಾಗೂ ಆರೋಗ್ಯಕರವಾಗಿರಲು ಯೋಗವು ಬಹುಮುಖ್ಯವಾಗಿದೆ. ಎಂದರಲ್ಲದೇ ಯೋಗದಲ್ಲಿನ ನಿಂತು ಮಾಡುವ ಆಸನಗಳು, ಕುಳಿತು ಮಾಡುವ ಆಸನಗಳು, ಧ್ಯಾನಗಳ ಮಹತ್ವ ಮತ್ತು ಪ್ರಾಮುಖ್ಯತೆಯ ಬಗ್ಗೆ ವಿವರಿಸಿದರು.
ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ ಮಾತನಾಡಿ, ಯೋಗವು ಮನಸ್ಸು ಮತ್ತು ದೇಹವನ್ನು ಸಂಪರ್ಕಿಸುವ ಪ್ರಾಚೀನ ಕಲೆಯಾಗಿದೆ. ಇತ್ತೀಚಿನ ದಿನಗಳಲ್ಲಿ ವಿಶ್ವದಾದ್ಯಂತ ಹೆಚ್ಚಿನ ಜನರು ತಮ್ಮ ಮಾನಸಿಕ ಒತ್ತಡ ನಿವಾರಣೆಗೆ ಯೋಗದ ಮೊರೆ ಹೋಗುತ್ತಿದ್ದಾರೆ ಎಂದರು.
ಇದೇ ಸಂದರ್ಭದಲ್ಲಿ ಉಪಪ್ರಾಚಾರ್ಯ ಪಿ.ವ್ಹಿ.ಮಹಲಿನಮಠ, ನಿವೃತ್ತ ಪ್ರಾಚಾರ್ಯ ವ್ಹಿ.ವ್ಹಿ. ಜಿರ್ಲಿ, ಬಿ.ಬಿ.ಜಮಾದಾರ, ಶಿವಶರಣ ಬೂದಿಹಾಳ, ಡಾ.ಶರಣಬಸವ ಜೋಗೂರ, ರೋಹಿತ ಸುಲ್ಪಿ, ರಾಹುಲ ನಾರಾಯಣಕರ, ಪ್ರಸನಕುಮಾರಜೋಗೂರ, ಎನ್.ಬಿ.ಪೂಜಾರಿ, ಗವಿಸಿದ್ದಪ್ಪ ಆನೆಗುಂದಿ, ಎನ್.ಎಂ.ಶೆಳ್ಳಗಿ, ಉದಯ ಶಿವಸಿಂಪಿಗೇರ, ಎಸ್.ಎಸ್. ಹೂಗಾರ್, ಸುನೀಲ ಪಾಟೀಲ, ವ್ಹಿ.ಪಿ.ನಂದಿಕೋಲ, ಎಸ್.ಜಿ.ಮಾರ್ಸನಳ್ಳಿ, ಆರ್.ಎಂ.ಕೊಳ್ಳೂರೆ, ಚಂದ್ರು ಬಬಲೇಶ್ವರ, ನೀಲಕಂಠ ಮೇತ್ರಿ, ರಾಜೇಶ್ವರಿ ಗಾಣಗೇರ, ವ್ಹಿ.ಕೆ.ಹಿರೇಮಠ, ಎಂ.ಐ.ಮುಜಾವರ, ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :123, Postal Reg No. PMG/KA/NK/BM/135/25-27 / POST AT Vantamury Colony Post Office